ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 46
31–7–2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 46

## ಭದ್ರಾ ಜಲಾಶಯ ನೀರಿನ ಮಟ್ಟ



(ಅಡಿಗಳಲ್ಲಿ)

ಇಂದಿನ ಮಟ್ಟ -180.3
ಗರಿಷ್ಠ ಮಟ್ಟ -186
ಒಳ ಹರಿವು-16694
ಹೊರ ಹರಿವು -16694
ರಿವರ್ ಬೆಡ್ -2100

# ಉತ್ತಮ ಸಮಾಜ ನಿರ್ಮಾಣಕ್ಕೆ ಶಕ್ತಿ ಮೀರಿ ಶ್ರಮಿಸಿ

## ಮಹಿಳಾ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ ಕಾರ್ಯಾಗಾರದಲ್ಲಿ ನ್ಯಾಯಾಧೀಶರಾದ ಮಹಾವೀರ್ ಮ ಕರೆಣ್ಣವರ್

**ದಾವಣಗೆರೆ :** ಸಮಾಜದಲ್ಲಿನ ಬಡತನ, ಸಾಮಾಜಿಕ ಅಸಮತೋಲನ, ಮಾನವ ಕಳ್ಳಸಾಗಾಣಿಕೆ ತಡೆಗಟ್ಟುವ ಸಲುವಾಗಿ ಎಲ್ಲರೂ ಶಕ್ತಿಮೀರಿ ಪ್ರಯತ್ನಿಸೋಣ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ್ ಹೇಳಿದರು.

ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಹಿಳಾ ಸಬಲೀಕರಣ, ಸುಧಾರಣಾ ಸಂಸ್ಥೆಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾದ "ಮಹಿಳಾ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ" ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆ ಮತ್ತು ಮಕ್ಕಳ ಕಳ್ಳಸಾಗಣೆಯ ಜಾಲವಿಂದು ಹೈಟೆಕ್ ಮಾದರಿ ಪಡೆದಿದೆ. ಇಂದಿನ ಮಕ್ಕಳಿಗೆ ಮೊಬೈಲ್, ಇನ್ನಿತರೆ ಅಗತ್ಯ ವಸ್ತುಗಳ ಬಗ್ಗೆ ಹೆಚ್ಚಿನ ಒಲವಿದೆ. ಇದನ್ನೆ ಬಂಡವಾಳವನ್ನಾಗಿಸಿಕೊಂಡ ಕೆಲವರು ಮಹಿಳೆ ಮತ್ತು ಮಕ್ಕಳಿಗೆ ಆಸೆ ಆಮೀಷ ನೀಡುವ ಮೂಲಕ ಲೈಂಗಿಕ ಶೋಷಣೆಗಾಗಿ, ಮಕ್ಕಳ ಒತ್ತಾಯಪೂರ್ವಕ ಬಿಕ್ಷಾಟನೆಗೆ, ಜೀತ–ಕ್ಕೆ, ಬಾಲಕಾರ್ಮಿಕತೆಗೆ, ಅಂಗಾಂಗ ಕಸಿ, ಬಾಲ್ಯ ವಿವಾಹ ಹಾಗೂ ಮದ್ಯ–ಮಾದಕ ವಸ್ತುಗಳ ಸಾಗಾಟಕ್ಕಾಗಿ ಮಾನವ ಕಳ್ಳಸಾಗಣೆ ಮಾಡಲಾಗುತ್ತಿದೆ. ಇಂತಹ ದುಷ್ಕೃತ್ಯಕ್ಕೆ ಕೇವಲ ಮಕ್ಕಳನ್ನು, ಯುವಕರು ವಯಸ್ಕರನ್ನು ಸಹ ಬಳಸಿಕೊಳ್ಳಲಾಗುತ್ತಿದೆ. ಆದ್ದ–ರಿಂದ ಅಧಿಕಾರಿಗಳು ಪ್ರಕರಣಗಳನ್ನು ಬೇಧಿಸುವಲ್ಲಿ ಹದ್ದಿನ ಕಣ್ಣಿಡಬೇಕಾಗಿದೆ. ವಿಶೇಷವಾಗಿ ಗ್ರಾಮ, ಹೋಬಳಿ ಹಾಗೂ ತಾಂಡಗಳಲ್ಲಿ ಈ ಕುರಿತು ಅರಿವು ಮೂಡಿಸಬೇಕು. ಉತ್ತಮ ಸಮಾಜ ನಿರ್ಮಿಸುವಲ್ಲಿ ತಾವೆಲ್ಲರೂ ಕೈ ಜೋಡಿಸಿ ನದಿ ಪ್ರವಾಹಕ್ಕೆ ವಿರುದ್ಧ ದಿಕ್ಕಿನಲ್ಲಿ ಈಜುತ್ತಿರುವ ಅನಿಷ್ಠ ಪದ್ಧತಿಯ ನಿರ್ಮೂಲನೆಗೆ ಶಕ್ತಿ ಮೀರಿ ಪ್ರಯತ್ನಿಸೋಣ ಎಂದರು.



ಮಕ್ಕಳ ರಕ್ಷಣಾ ಆಯೋಗದ ಸದಸ್ಯರು ಹಾಗೂ ಜಿಲ್ಲಾ ಮಾನವ ಕಳ್ಳ ಸಾಗಾಣಿಕೆ ತಡೆ ಸಮಿತಿ ಸದಸ್ಯ ರೂಪ ನಾಯ್ಕ್ ಮಾತನಾಡಿ, ಮಾನವ ಮತ್ತು ಮಕ್ಕಳ ಹಕ್ಕುಗಳು ಉಲ್ಲಂಘನೆಯಾಗುತ್ತಿರುವುದೇ ಇದಕ್ಕೆ ಪ್ರಮುಖ ಕಾರಣ. ಇದು ಶಾಲಾ ಹಂತದಲ್ಲಿಯೇ ಶಾಲೆಯಿಂದ ಹೊರಗುಳಿಯುವುದು, ವಿವಿಧ ಕಾರಣಗಳಿಂದ ಶೋಷಣೆಗೆ ಒಳಗಾಗುವುದು ಸೇರಿದಂತೆ ಹಲವಾರು ರೀತಿಯಲ್ಲಿ ಶೋಷಣೆಗೆ ಒಳಗಾಗುತ್ತಿದ್ದಾರೆ. ಇಲ್ಲಿ ಮಾನವ ಹಕ್ಕುಗಳು ಬಹುಮುಖ್ಯ ಪಾತ್ರವಹಿಸುತ್ತವೆ. ಆದ್ದ–ರಿಂದ ಸ್ಥಳೀಯ ಆಡಳಿತ ಸಂಸ್ಥೆಗಳಾದ ಗ್ರಾಮ ಪಂಚಾಯತಿ, ಶಾಲಾ ಮಟ್ಟದಲ್ಲಿ ಹೆಚ್ಚಿನ ಜಾಗೃತವಹಿಸಿ ಕಾರ್ಯನಿರ್ವಹಿಸಬೇಕಿದೆ. ನಮ್ಮ ದೇಶವನ್ನು ಮುಂದುವರೆಯುತ್ತಿರುವ ರಾಷ್ಟ್ರವಾಗಿ ಗುರುತಿಸಿಕೊಂಡಿದೆ. ಆದರೆ ಇಂದಿಗೂ ಬಿಕ್ಷಾಟನೆ ದೃಶ್ಯಗಳು ಕಂಡುಬರುತ್ತಿರುವುದಲ್ಲದೇ, ಅಗತ್ಯ ಮೂಲಭೂತ ಸೌಕರ್ಯಗಳಿಲ್ಲ. ಆರ್ಥಿಕ ಮತ್ತು ಸಾಮಾಜಿಕವಾಗಿ ಬಲಹೀನವಾಗಿರುವುದರಿಂದಲೇ ಇಂತಹ ಪ್ರಕರಣಗಳು ಹೆಚ್ಚುತ್ತಿವೆ. ಹಾಗಾಗಿ ಸಾರ್ವಜನಿಕರಿಗೆ ಬಡತನ, ನೈಜ ಬದುಕಿನ ಬಗ್ಗೆ ಮತ್ತಷ್ಟು ಅರಿವು ಅಗತ್ಯ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಾನಾಯ್ಕ್ ಮಾತನಾಡಿ, ಮಹಿಳಾ ಮತ್ತು ಮಕ್ಕಳ ಕಳ್ಳಸಾಗಾಣೆ, ಬಾಲ್ಯವಿವಾಹ, ಮಹಿಳಾ ಮತ್ತು ಮಕ್ಕಳ ಮೇಲಿನ ದೌರ್ಜನ್ಯ ತಡೆಗಟ್ಟಲು ಗ್ರಾಮ ಪಂಚಾಯತ್, ಹಾಗೂ ತಾಲ್ಲೂಕು ಮಟ್ಟದಲ್ಲಿ ಸರ್ಕಾರ ವಿವಿಧ ಸಮಿತಿಗಳನ್ನು ರಚಿಸಿ ಅನುಷ್ಠಾನಗೊಳಿಸಿದೆ. ಈ ಮೂಲಕ ಅಧಿಕಾರಿಗಳು ತಳಮಟ್ಟದಿಂದ ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು. ಆಗ ಮಾತ್ರ ಇಂತಹ ದುಷ್ಕೃತ್ಯಗಳಿಗೆ ಸಂಪೂರ್ಣವಾಗಿ ಕಡಿವಾಣ ಹಾಕಲು ಸಾಧ್ಯವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನನು ಸೇವೆಗಳ ಪ್ರಾಧಿಕಾರ ಸದಸ್ಯ ಮಹಾವೀರ ಮ. ಕರೆಣ್ಣವರ್ ಪ್ರತಿಜ್ಞಾವಿಧಿ ಭೋಧಿಸಿದರು. ವಕೀಲೆ ಅನಿತಾ.ಸಿ.ಪಿ ಮಹಿಳಾ ಮತ್ತು ಮಕ್ಕಳ ಅನೈತಿಕ ಕಳ್ಳಸಾಗಾಣೆ ಕುರಿತು ಉಪನ್ಯಾಸ ನೀಡಿದರು.

ಕಾರ್ಯಾಗಾರದಲ್ಲಿ ರಾಜ್ಯ ಮಾನವ ಕಳ್ಳಸಾಗಾಣಿಕೆ ಸಮಿತಿ ಸದಸ್ಯ ರಾಜೇಂದ್ರನ್.ಎ. ಜಿಲ್ಲಾ ನಿರೂಪಣಾಧಿಕಾರಿ ಗುರುಪ್ರಸಾದ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ, ಜಿಲ್ಲಾ ಮಕ್ಕಳ ರಕ್ಷಣಾ ಘಟಕಾಧಿಕಾರಿ ಪ್ರಕಾಶ್, ಜಗಳೂರು ಮಹಿಳಾ ಠಾಣೆ ಇನ್ಸ್‌ಪೆಕ್ಟರ್ ಆಶಾ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಆ.1 ರಂದು ಶ್ರೀ ಯಲ್ಲಮ್ಮ ದೇವಿಯ 19ನೇ ವರ್ಷದ ವಾರ್ಷಿಕೋತ್ಸವ

**ದಾವಣಗೆರೆ:** ಇಲ್ಲಿನ ಜಾಲಿ ನಗರದ ಎರಡನೇ ಮುಖ್ಯ ರಸ್ತೆಯಲ್ಲಿರುವ ಶ್ರೀ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ಆಗಸ್ಟ್ 1ರಂದು ಶ್ರೀ ಯಲ್ಲಮ್ಮ ದೇವಿಯ 19ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮವು ಜರುಗಲಿದೆ.

ಜುಲೈ 31 ರಂದು ಸಂಜೆ 6 ರಿಂದ ಹೋಮ ಹವನಗಳು ನೆರವೇರಲಿದ್ದು, ಆಗಸ್ಟ್ 1ರಂದು ಬೆಳಗ್ಗೆ 8:30 ರಿಂದ ಕುಂಭಾಭಿಷೇಕ 9:30ರಿಂದ ಪಂಚಾಮೃತ ಅಭಿಷೇಕ, ದೇವಿ ಅಲಂಕಾರ ಮಾಡಲಾಗುತ್ತದೆ. ಮಧ್ಯಾಹ್ನ 1 ಗಂಟೆಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿದ್ದು, ಕಾರ್ಯಕ್ರಮಕ್ಕೆ ಶಾಸಕ ಶಾಮನೂರು ಶಿವಶಂಕರಪ್ಪ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಬಿಐಇಟಿ ಕಾಲೇಜು ಪ್ರಾಚಾರ್ಯ ಅರವಿಂದ್, ದೂಡ ಅಧ್ಯಕ್ಷ ದಿನೇಶ್ ಕೆ ಶೆಟ್ಟಿ, ಪಾಲಿಕೆ ಮಾಜಿ ಮೇಯರ್ ವಿನಾಯಕ ಪೈಲ್ವಾನ್, ಮಾಜಿ ಉಪಮೇಯರ್ ಗಾಯತ್ರಿ ಖಂಡೋಜಿರಾವ್, ದೂಡಾ ಮಾಜಿ ಅಧ್ಯಕ್ಷ ಮಾಲತೇಶ್ ರಾವ್ ಜಾಧವ್, ರೇಣುಕಾ ಎಲ್ಲಮ್ಮ ದೇವಿ ದೇವಸ್ಥಾನದ ಮಾಜಿ ಸದಸ್ಯ ಜೋಗಳ್ಳಿ ರಾಮಚಂದ್ರಪ್ಪ, ಪಾಲಿಕೆ ಮಾಜಿ ಸದಸ್ಯ ಬಿ. ವೀರಣ್ಣ ಸೇರಿದಂತೆ ಮತ್ತಿತರ ಗಣ್ಯರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳಲಿದ್ದಾರೆ.

# ಆ.1 ರಂದು ವ್ಯಸನ ಮುಕ್ತ ದಿನಾಚರಣೆ

**ದಾವಣಗೆರೆ :** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಮದ್ಯಪಾನ ಸಂಯಮ ಮಂಡಳಿ ವತಿಯಿಂದ ಶ್ರೀಶ್ರೀಶ್ರೀ ಮ.ನಿ.ಪ್ರ. ಡಾ.ಮಹಾಂತ ಶಿವಯೋಗಿ ಸ್ವಾಮೀಜಿ ಅವರ ಜನ್ಮ ದಿನದ ನಿಮಿತ್ತ ಆಗಸ್ಟ್ 01 ರಂದು, ಬೆಳಿಗ್ಗೆ 11 ಗಂಟೆಗೆ, ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ವ್ಯಸನ ಮುಕ್ತ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಧನಂಜಯಪ್ಪ.ಬಿ ತಿಳಿಸಿದ್ದಾರೆ.

# 10 ಖಾಯಂ ಚಾಲಕ ಹುದ್ದೆ : ಮಾಜಿ ಸೈನಿಕರಿಂದ ಅರ್ಜಿ ಆಹ್ವಾನ

**ದಾವಣಗೆರೆ:** ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಬೆಂಗಳೂರು 10 ಖಾಯಂ ಚಾಲಕ ಹುದ್ದೆಗಳಿಗಾಗಿ 43 ವರ್ಷದೊಳಗಿನ ಶೇಪ್–1 ಮೆಡಿಕಲ್ ಕ್ಯಟಗೆರಿ ಹೊಂದಿರುವ ಅರ್ಹ ಮಾಜಿ ಸೈನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಆಸಕ್ತರ್ಹ ಅಭ್ಯರ್ಥಿಗಳು ಎಸ್.ಎಸ್. ಎಲ್.ಸಿ ಉತ್ತೀರ್ಣರಾಗಿದ್ದು, ಕನ್ನಡ ಭಾಷಾ ಜ್ಞಾನವನ್ನು ಕಡ್ಡಾಯವಾಗಿ ಹೊಂದಿರಬೇಕು.

ಅರ್ಜಿಯನ್ನು ತಿತಿತಿ.ಛಜಟ–ಟಜುಚಿ.ಟಿ/ಛಿಚಿಡಿಜಜಢಿ ನಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆ ದೂರವಾಣಿ ಸಂಖ್ಯೆ 080–22195650 ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

# ವೈದ್ಯಕೀಯ ಮತ್ತು ದಂತ ವೈದ್ಯಕೀಯ ವಿದ್ಯಾಭ್ಯಾಸಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಮಾಜಿ ಸೈನಿಕರು, ಮಾಜಿ ಸೈನಿಕ ಅವಲಂಬಿತ ಮಕ್ಕಳ ವೈದ್ಯಕೀಯ ಮತ್ತು ದಂತ ವೈದ್ಯಕೀಯ ವ್ಯಾಸಂಗಕ್ಕಾಗಿ ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಸೀಟು ಹಂಚಿಕೆ ಮೇರೆಗೆ ಕೇಂದ್ರಿಯ ಸೈನಿಕ ಮಂಡಳಿಯಿಂದ ಡಿಫೆನ್ಸ್ ಕೋಟಾದಡಿ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ (ನೀಟ್) ಯಲ್ಲಿ ಅರ್ಹತೆ ಪಡೆದಿರುವ ವಿದ್ಯಾರ್ಥಿಗಳು ಕೆ.ಎಸ್.ಬಿ ಜಾಲತಾಣದ ಬದಲಾಗಿ ಗೂಗಲ್ ಫಾರಂ ಮೂಲಕ ಆಗಸ್ಟ್ 15ರೊಳಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಕಲ್ಯಾಣ ಇಲಾಖೆಯಿಂದ ಪಡೆದ ದೃಢೀಕೃತ ಅರ್ಹತಾ ಪ್ರಮಾಣ ಪತ್ರದೊಂದಿಗೆ ಜಾಲತಾಣ DESW Website - www.desw.gov.in and DGR Website – www.dgrindia.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ದೂರವಾಣಿ ಸಂಖ್ಯೆ 080182–220925 ಗೆ ಸಂಪರ್ಕಿಸಬಹುದು ಎಂದು ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರಿಗೆ ರಸಗೊಬ್ಬರ ಪೂರೈಸಲು ಒತ್ತಾಯಿಸಿ ಪ್ರತಿಭಟನೆ




**ಚನ್ನಗಿರಿ :** ಚನ್ನಗಿರಿ ತಾಲೂಕಿನಲ್ಲಿ ರೈತರಿಗೆ ರಸಗೊಬ್ಬರಗಳು ಸಮಯಕ್ಕೆ ಸರಿಯಾಗಿ ದೊರಕದೇ ಕೃಷಿ ಚಟುವಟಿಕೆಗಳು ಸ್ಥಗಿತವಾಗಿದ್ದು ಸರಕಾರ ಕೂಡಲೇ ರಸಗೊಬ್ಬರಗಳ ಪೂರೈಕೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ಹುಚ್ಚವ್ವನಹಳ್ಳಿ ಮಂಜುನಾಥ ಬಣದ ಚನ್ನಗಿರಿ ತಾಲೂಕು ಅಧ್ಯಕ್ಷ ಯಲೋದಹಳ್ಳಿ ರವಿಕುಮಾರ್ ಹೇಳಿದರು.

ಬುಧವಾರ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ಹುಚ್ಚವ್ವನಹಳ್ಳಿ ಮಂಜುನಾಥ ಬಣದ ವತಿಯಿಂದ ಯೂರಿಯ ಗೊಬ್ಬರವನ್ನು ನೀಡುವಂತೆ ಆಗ್ರಹಿಸಿ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನೆ ನಡೆಸಿ ಚನ್ನಗಿರಿ ಪಟ್ಟಣದ ಕೃಷಿ ಇಲಾಖೆಗೆ ಮುತ್ತಿಗೆ ಹಾಕಿ ಸಹಾಯಕ ಕೃಷಿ ನಿರ್ದೇಶಕ ಅರುಣ್‌ಕುಮಾರ್ ಗೆ ಮನವಿ ಸಲ್ಲಿಸಿ ಮಾತನಾಡಿ ಚನ್ನಗಿರಿ ತಾಲೂಕಿನ ವ್ಯಾಪ್ತಿಯಲ್ಲಿ ಬರುವಂತಹ ಗ್ರಾಮಗಳಲ್ಲಿ ಈಗಾಗಲೇ ಮೆಕ್ಕೇಜೋಳ ಬಿತ್ತನೆ ಮಾಡಿದ್ದು ಒಂದು ವಾರದಿಂದ ತಾಲೂಕಿನ ರಸಗೊಬ್ಬರದ ಕೇಂದ್ರಗಳಲ್ಲಿ ರಸಗೊಬ್ಬರ ಸಿಗದಂತೆ ಆಗಿದೆ. ರೈತರು ಅವಶ್ಯಕ ರಸಗೊಬ್ಬರಕ್ಕಾಗಿ ಖಾಸಗಿ ರಸಗೊಬ್ಬರ ಕೇಂದ್ರಗಳಿಗೆ ಮುಗಿ ಬೀಳುತ್ತಿದ್ದರೂ ಅಲ್ಲಿಯೇ ಗೊಬ್ಬರ ಸಿಗುತ್ತಿಲ್ಲ. ಇದರಿಂದ ರೈತರ ಸ್ಥಿತಿ ಅತಂತ್ರವಾಗಿದ್ದು ವ್ಯಾಪಾರಿಗಳು ಕೃತಕ ಅಭಾವವನ್ನು ಸೃಷ್ಟಿಸುತ್ತಿದ್ದಾರೆ. ಸರಕಾರಗಳು ರೈತರಿಗೆ ಸಮಯಕ್ಕೆ ಸರಿಯಾಗಿ ಕೃಷಿ ಪರಿಕರಗಳು ಮತ್ತು ಗೊಬ್ಬರಗಳನ್ನು ನೀಡಬೇಕು. ಸಹಾಯಕ ಕೃಷಿ ನಿರ್ದೇಶಕರು ತಾಲೂಕಿಗೆ ಅವಶ್ಯ ಇರುವಂತಹ ಯೂರಿಯಾ ಗೊಬ್ಬರವನ್ನು ಮೊದಲೇ ತರಿಸಿ ಇಟ್ಟುಕೊಳ್ಳಬೇಕು ಎಂದರು. ಚನ್ನಗಿರಿ ಬಸ್ ನಿಲ್ದಾಣದಿಂದ ಹೊರಟ ರೈತರು ಕೃಷಿ ಇಲಾಖೆಗೆ ಮುತ್ತಿಗೆ ಹಾಕಿ ಪ್ರತಿಭಟಿಸಿದರು. ಪ್ರತಿಭಟನೆಯಲ್ಲಿ ಡಿ.ಆರ್. ಹನುಮಂತಪ್ಪ, ಪ್ರಭಾಕರ್, ಜಿ.ಎನ್ ಅಂಜನೇಯ, ಕೋಗಲೂರು ಕುಮಾರ್, ಉಮೇಶ್, ಮೂಡಲ ಗಿರಿಂ ಯಪ್ಪ, ಹೇಮಬಾಯಿ, ಜ್ಯೋತಿಬಾಯಿ, ಮಂಜಪ್ಪ, ತಿಮ್ಮಣ್ಣ, ಮೂರ್ತಿ, ನಲ್ಲೂರು ಬಸಣ್ಣ ಇತರರು ಹಾಜರಿದ್ದರು.

# ಸಮರ್ಪಕ ಯೂರಿಯಾ ಗೊಬ್ಬರ ವಿತರಿಸಲು ಎಚ್.ಪಿ.ರಾಜೇಶ್ ಆಗ್ರಹ



**ಜಗಳೂರು :** ರೈತರಿಗೆ ಸಮರ್ಪಕವಾಗಿ ಯೂರಿಯಾ ರಸಗೊಬ್ಬರ ವಿತರಿಸಲು ಸರ್ಕಾರ ತಕ್ಷಣವೇ ಅಗತ್ಯಕ್ರಮ ಕೈಗೊಳ್ಳಬೇಕು ಎಂದು ಮಾಜಿ ಶಾಸಕ ಎಚ್.ಪಿ.ರಾಜೇಶ್ ಆಗ್ರಹಿಸಿದರು.

ಪಟ್ಟಣದ ಕೃಷಿ ಇಲಾಖೆ ಅಧಿಕಾರಿಗಳೊಂದಿಗೆ ಬಿಜೆಪಿ ಪಕ್ಷದ ರೈತ ಮೋರ್ಚಾ ಪದಾಧಿಕಾರಿಗಳೊಂದಿಗೆ ಚರ್ಚಿಸಿ ನಂತರ ಮಾತನಾಡಿದ ಅವರು, ಉತ್ತಮ ಮಳೆಯಾಗಿ ಬೆಳೆಗಳು ಕೈಗೆಟಕುವ ಸ್ಥಿತಿಯಲ್ಲಿ ಯೂರಿಯಾ ರಸ ಗೊಬ್ಬರ ಕೃತಕ ಅಭಾವ ಉಂಟಾಗಿದೆ. ಕೂಡಲೇ ಸಕಾಲದಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ರಸಗೊಬ್ಬರ ವಿತರಿಸಲು ಮುಂದಾಗಬೇಕು ಎಂದು ಹೇಳಿದರು. ಪಟ್ಟಣದಲ್ಲಿ ಮಲ್ಪೆ–ಮೊಳಕಾಲ್ಮೂರು ರಾಜ್ಯ ಹೆದ್ದಾರಿ ಮುಖ್ಯ ರಸ್ತೆ ವಿಸ್ತರಣೆ ಕಾರ್ಯದ ಬಗ್ಗೆ ಶಾಸಕರು ಸ್ಪಷ್ಟನೆ ನೀಡಬೇಕು. ಮೂರು ನಾಲ್ಕು ಬಾರಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅಳತೆ ಸಮೀಕ್ಷೆ

ಕಾರ್ಯ ನಡೆದಿದೆ. ಅಲ್ಲದೆ ಹೋರಾಟಗಾರರು ರಸ್ತೆಯ ಎರಡೂ ಬದಿ 69 ಅಡಿ ಅಗಲೀಕರಣಕ್ಕೆ ಆಗ್ರಹಿಸಿ ಪ್ರತಿಭಟನೆ ನಡೆಸಿದ್ದಾರೆ. ಆದರೆ ಕೆಲ ವರ್ತಕರು ತಮಗಿಷ್ಟ ಬಂದಂತೆ ಮಳಿಗೆ ತೆರವುಗೊಳಿಸಿಕೊಂಡು ಪುನಃ ಕಟ್ಟಡ ನಿರ್ಮಾಣ ಮಾಡಿಕೊಳ್ಳುತ್ತಿದ್ದಾರೆ. ಇದು ಗೊಂದಲದ ಗೂಡಾಗಿದೆ. ಶಾಸಕರು ಮತ್ತು ವರ್ತಕರ ಮಧ್ಯೆ ಒಳ ಒಪ್ಪಂದ ನಡೆದಿದೆಯಾ? ಎಂಬ ಅನುಮಾನಗಳು ಮೂಡುತ್ತಿವೆ. ಸರ್ಕಾರದ ನಿಯಮಾನುಸಾರ ಸರ್ಕಾರಿ ಸ್ವಾಮ್ಯದಲ್ಲಿರುವ ಕಟ್ಟಡಗಳನ್ನು ನಿಯಮಾನುಸಾರ 69 ಅಡಿ ಅಗಲೀಕರಣಕ್ಕೆ ಮೊದಲು ತೆರವುಗೊಳಿಸಲಿ, ಪಟ್ಟಣ ಪಂಚಾಯಿತಿ ಬಿಜೆಪಿ ತೆಕ್ಕೆಯಲ್ಲಿದ್ದರೂ ಯಾವುದೇ ಪರಿಪೂರ್ಣ ಮಾಹಿತಿ ಸಿಗುತ್ತಿಲ್ಲ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಡಾ.ನವೀನ್ ಕುಮಾರ್, ಉಪಾಧ್ಯಕ್ಷ ಲೋಕಿಕೆರೆ ನಾಗರಾಜ್, ಪಟ್ಟಣ ಪಂಚಾಯತಿ ಅಧ್ಯಕ್ಷ ನವೀನ್ ಕುಮಾರ್, ಸದಸ್ಯ ರೇವಣ್ಣ, ಮುಖಂಡರಾದ ಬಿಸ್ತುವಳ್ಳಿ ಬಾಬು, ಓಬಳೇಶ್, ಬಿದರಕೆರೆ ರವಿಕುಮಾರ್, ಜೆ.ವಿ.ನಾಗರಾಜ್, ಮರೇನಹಳ್ಳಿ ಶೇಖರಪ್ಪ ಇದ್ದರು.

# ಚನ್ನಗಿರಿ : ಸರ್ವೇಂ ನಂ4 ರ ಒತ್ತುವರಿ ತಡೆಗೆ ಕಂದಕ ನಿರ್ಮಾಣ

**ಚನ್ನಗಿರಿ :** ತಾಲೂಕಿನ ಚನ್ನಗಿರಿ ಕಸಬಾ ಹರೋನಹಳ್ಳಿ ಸರ್ವೆ ನಂ 4 ರಲ್ಲಿ ಅರಣ್ಯ ಇಲಾಖೆಯ ಅರಣ್ಯ ಪ್ರದೇಶ ಮತ್ತು ಹರೋನಹಳ್ಳಿ ಗ್ರಾಮದ ಶಿವಮೂರ್ತಿ ಎನ್ನುವವರ ಜಮೀನಿಗೆ ವಿವಾದಕ್ಕೆ ಸಂಬಂದಿಸಿದಂತೆ ಬುಧವಾರ ಮಾವಿನಕಟ್ಟೆ ಶಾಂತಿಸಾಗರ ವಲಯ ಅರಣ್ಯ ಇಲಾಖೆಯ ವಲಯಾರಣ್ಯಾಧಿಕಾರಿ ಉಷಾ ಎಂ ನೇತ್ರತ್ವದಲ್ಲಿ ಸುಮಾರು 70 ಕ್ಕೂ ಹೆಚ್ಚಿನ ಅರಣ್ಯ ಇಲಾಖೆಯ ಸಿಬ್ಬಂದಿಗಳು ಸರ್ವೇಂ ನಂ4 ರ ಸ್ಥಳಕ್ಕೆ ಬೇಟಿ ನೀಡಿ ಒತ್ತುವರಿ ತಡೆ ಕಂದಕವನ್ನು ನಿರ್ಮಿಸಿದರು.



ನಂತರ ಸ್ಥಳಕ್ಕೆ ಆಗಮಿಸಿದ ರೈತ ಶಿವಮೂರ್ತಿ ಕುಟುಂಬ ಮತ್ತು ಡಿ.ಎಸ್.ಎಸ್.ಮುಖಂಡರು ಬೇಟಿ ನೀಡಿ ಅಂಬೇಡ್ಕರ್‌ರವರ ಬಾವಚಿತ್ರವನ್ನು ಹಿಡಿದು ಪ್ರತಬಟನೆ ನಡೆಸಿ ಮಾತನಾಡಿ 1963 ರಲ್ಲಿ 4 ಎಕೆರೆ ಜಮೀನಿನ ಪ್ರದೇಶವನ್ನು ಸರಕಾರ ಮಂಜೂರು ಮಾಡಿರುವ ದಾಖಲಾತಿಗಳು ನಮ್ಮ ಬಳಿ ಇವೆ. ಈ ಎಲ್ಲಾ ದಾಖಲೆಗಳನ್ನು ತೋರಿಸಿದರೂ ಸಹ ಅರಣ್ಯ ಇಲಾಖೆಯವರು ನಮ್ಮ ಜಮೀನಿನಲ್ಲಿ ನಮಗೆ ಸಾಗುವಳಿ ಮಾಡಲು ಬಿಡುತ್ತಿಲ್ಲ. ನಾವುಗಳು ಉಪವಿಬಾಗಾಧಿಕಾರಿಗಳ ಹೋಗಿ ತಿಳಿಸಿದ್ದು ಅವರು ಸಹ ನಿಮ್ಮ ಜಮೀನಿನಲ್ಲಿ ಉಳಿಮೆ ಮಾಡಲು ಯಾವುದೇ ತೊಂದರೆಯಿಲ್ಲ ಎಂದು ತಿಳಿಸಿದ್ದಾರೆ. ಕಳೆದ ಎರಡು ದಿನಗಳ ಹಿಂದೆ ನಮ್ಮ ಜಮೀನಿನಲ್ಲಿ ಹಾಕಿದಂತಹ ಅಡಿಕೆ ಸಸಿಗಳನ್ನು ಸಹ ಕಿತ್ತುಹಾಕಿದ್ದಾರೆ. ರೈತರ ಮೇಲೆ ಅರಣ್ಯ ಇಲಾಖೆಯವರು ದೌರ್ಜನ್ಯವೆಸುಗುತ್ತಿದ್ದಾರೆ ಎಂದು ಆರೋಪಿಸಿದರು.

ವಲಯಾರಣ್ಯಾಧಿಕಾರಿ ಉಷಾ ಎಂ ಮಾತನಾಡಿ ಸರ್ವೆನಂ 4 ರಲ್ಲಿ ಇರುವಂತಹ ಹುಣಸೆ ನಡುತೋಪು 1929 ರಿಂದಲೇ ಅರಣ್ಯ ಇಲಾಖೆಗೆ ಸೇರಿರುವುದೇ ಅಗಿದೆ. ರೈತರು ಪಹಣಿ ಮಾತ್ರ ತರುತ್ತಿದ್ದು ಮೂಲ ದಾಖಲಾತಿಗಳನ್ನು ತೋರಿಸುತ್ತಿಲ್ಲ. ಮತ್ತು ಅರಣ್ಯ ಪ್ರದೇಶಕ್ಕೆ ಸಂಬಂದಿಸಿದ ಸ್ಥಳದಲ್ಲಿ ಒತ್ತುವರಿ ಮಾಡಲು ಮುಂದಾಗಿದ್ದು ಮೇಲಾಧಿಕಾರಿಗಳ ನಿರ್ದೇಶನದಂತೆ ಇಂದು ಒತ್ತುವರಿ ತೆರವು ಕಾರ್ಯಾಚರಣೆ ಮಾಡಲಾಗುತ್ತಿದೆ ಎಂದರು. ಅರಣ್ಯ ಇಲಾಖೆಯ ಸಿಬ್ಬಂದಿಗಳು ಮತ್ತು ಡಿ.ಎಸ್.ಎಸ್ ಮುಖಂಡರ ಜೊತೆ ಸಾಕಷ್ಟು ಕಾಲ ವಾಗ್ವಾದದ ನಂತರ ಉಪವಿಬಾಗಾಧಿಕಾರಿಗಳ ಬೇಟಿ ಮಾಡಲು ತೆರಳಿದರು. ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

## ಪೋಕ್ಸೋ ಕಾಯ್ದೆಯಡಿ ನಾಲ್ವರಿಗೆ ಕಠಿಣ ಶಿಕ್ಷೆ : ದಂಡ ವಿಧಿಸಿ ತೀರ್ಪು

**ಚಿಕ್ಕಮಗಳೂರು:** ನಗರದ ಬಾಲಮಂದಿರದಲ್ಲಿ ವಾಸವಿದ್ದ ಈರ್ವರು ಅಪ್ರಾಪ್ತ ಬಾಲಕಿಯರನ್ನು ಪುಸಲಾಯಿಸಿ ಹಾಸನಕ್ಕೆ ಕರೆದೊಯ್ದು ಬಾಡಿಗೆ ಮನೆಯೊಂದರಲ್ಲಿ ಇರಿಸಿ ಹದಿನೈದು ಮಂದಿಯನ್ನು ಲೈಂಗಿಕ ದೌರ್ಜನ್ಯ ಎಸಗಲು ಅನುವು ಮಾಡಿಕೊಟ್ಟಿದ್ದ ನಾಲ್ವರಿಗೆ ಕಠಿಣ ಶಿಕ್ಷೆ ಮತ್ತು ದಂಡ ವಿಧಿಸಿ ಪೋಕ್ಸೋ ನ್ಯಾಯಾಲಯ ತೀರ್ಪು ಪ್ರಕಟಿಸಿದೆ.

ಕಳೆದ 2023ರ ಸೆಪ್ಟೆಂಬರ್ ಹದಿನೇಳರಂದು ನಗರದ ಸರ್ಕಾರಿ ಬಾಲಕಿಯರ ಬಾಲಮಂದಿರದಿಂದ ಈರ್ವರು ಬಾಲಕಿಯರು ಕಾಣೆಯಾಗಿದ್ದಾರೆ ಎಂಬ ದೂರಿನ ಹಿನ್ನೆಲೆಯಲ್ಲಿ ತನಿಖೆ ಆರಂಭಿಸಿದ ಡಿವೈಎಸ್‌ಪಿ ಶೈಲೇಂದ್ರ ಅವರು ಮಹಿಳಾ ಠಾಣೆಯ ಎಎಸ್‌ಐ ಸೋಮಶೇಖರ್ ಮತ್ತಿತರೆ ತಂಡದ ಮೂಲಕ ಕಾಣೆಯಾದ ಬಾಲಕಿಯರನ್ನು ಹಾಸನದ ಮನೆಯೊಂದರಲ್ಲಿ ಪತ್ತೆಹಚ್ಚಿದ್ದರು

# ಹಾಸ್ಟೆಲ್ ಮೂಲಭೂತ ಸೌಲಭ್ಯಕ್ಕೆ ಆಗ್ರಹಿಸಿ ಎಬಿವಿಪಿ ಪ್ರತಿಭಟನೆ

**ಚಿಕ್ಕಮಗಳೂರು:** ವಿದ್ಯಾರ್ಥಿ ವೇತನ ಬಿಡುಗಡೆ ಹಾಗೂ ಹಾಸ್ಟೆಲ್‌ಗಳ ಮೂಲಭೂತ ಸೌಲಭ್ಯವನ್ನು ಸರಿಪಡಿಸುವಂತೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ನೇತೃತ್ವದಲ್ಲಿ ವಿದ್ಯಾರ್ಥಿಗಳು ಇಂದು ನಗರದ ಆಜಾದ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.




ಈ ವೇಳೆ ಎಬಿವಿಪಿ ರಾಜ್ಯ ಕಾರ್ಯಕಾರಣಿ ಸದಸ್ಯ ರಾಕೇಶ್ ಮರಡಿ ಮಾತನಾಡಿ, ರಾಜ್ಯ ಸರ್ಕಾರ ವಿದ್ಯಾರ್ಥಿಗಳಿಗೆ ಸರಿಯಾದ ಹಾಸ್ಟೆಲ್ ವ್ಯವಸ್ಥೆ ಹಾಗೂ ವಿದ್ಯಾರ್ಥಿ ವೇತನವನ್ನು ನೀಡದೆ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡುತ್ತಿದೆ ಎಂದು ದೂರಿದರು.

ಕರ್ನಾಟಕ ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ವ್ಯಾಪ್ತಿಯಲ್ಲಿ 1,258 ಹಾಸ್ಟೆಲ್‌ಗಳಿದ್ದು, 1,68,833 ವಿದ್ಯಾರ್ಥಿಗಳು ವಸತಿ ನಿಲಯಗಳಲ್ಲಿ ವಾಸವಿದ್ದಾರೆ. ಸಮಾಜಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ 1972 ವಸತಿ ನಿಲಯಗಳಿದ್ದು, 1,87,200 ವಿದ್ಯಾರ್ಥಿಗಳಿಗೆ ವಸತಿ ನಿಲಯಗಳಲ್ಲಿ ಉಳಿಯಲು ಅವಕಾಶ ನೀಡಬಹುದಾಗಿದೆ, ಆದ–ರೆ, ಕರ್ನಾಟಕ ರಾಜ್ಯದಲ್ಲಿ ಹಿಂದಿನ 3 ವರ್ಷಗಳ ಸರಕಾರದ ವರದಿ ಪ್ರಕಾರ ಅರ್ಜಿ ಸಲ್ಲಿಸಿದ 100 ವಿದ್ಯಾರ್ಥಿಗಳಲ್ಲಿ 40 ರಿಂದ 50 ವಿದ್ಯಾರ್ಥಿಗಳಿಗೆ ಮಾತ್ರ ವಸತಿ ನಿಲಯಗಳಲ್ಲಿ ಅವಕಾಶ ಸಿಗುತ್ತಿದೆ. ಇನ್ನುಳಿದ ವಿದ್ಯಾರ್ಥಿಗಳು ವಸತಿ ನಿಲಯಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಕಳೆದ ನಾಲ್ಕು ತಿಂಗಳುಗಳಿಂದ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳಲ್ಲಿ ನೀಡುತ್ತಿದ್ದ ಕಿಟ್‌ಗಳು ತಲುಪುತ್ತಿಲ್ಲ. 40–50 ವಿದ್ಯಾರ್ಥಿಗಳಿಗೆ ಸೇರಿ 2–3 ಶೌಚಾಲಯಗಳು ಇವೆ. 100 ವಿದ್ಯಾರ್ಥಿಗಳು ಇರಬೇಕಾದ ವಸತಿ ನಿಲಯಗಳಲ್ಲಿ 140–150 ವಿದ್ಯಾರ್ಥಿಗಳನ್ನ ಇರಿಸುವಂತಾಗಿದೆ. ಪ್ರತಿ ತಿಂಗಳು ಊಟದ ವೆಚ್ಚಕ್ಕೆ ಪ್ರತಿ ವಿದ್ಯಾರ್ಥಿಗೆ 1,850 ರೂ ಮಾತ್ರ ನೀಡಲಾಗುತ್ತಿದೆ. ಈ ಹಣದಲ್ಲಿ ಡಯಟ್ ಚಾರ್ಟ್‌ನಲ್ಲಿ ಇರುವಂತೆ ಸರಿಯಾಗಿ ಆಹಾರವನ್ನು ಕೊಡುವುದಕ್ಕೆ ಆಗುವುದಿಲ್ಲ. ಕಾರಣ ಸರಕಾರ ಈ ಹಣವನ್ನು ಹೆಚ್ಚಳ ಮಾಡಬೇಕು ಎಂದು ಒತ್ತಾಯಿಸಲಾಯಿತು.

ರಾಜ್ಯದಲ್ಲಿ ಶಕ್ತಿ ಯೋಜನೆ ಜಾರಿಯಾದಾಗನಿಂದ ಶಾಲಾ–ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು ಪ್ರಯಾಸದಿಂದ ಜೀವ ಕೈಯಲ್ಲಿಡಿದು ಪ್ರಯಾಣಿಸುವ ಸಂದರ್ಭ ಬಂದಿದೆ. ಈ ಬಗ್ಗೆ ಸರ್ಕಾರ ಗಂಭೀರವಾಗಿ ಯೋಚಿಸಬೇಕು ಹಾಗೂ ವಿಶೇಷವಾಗಿ ವಿದ್ಯಾರ್ಥಿಗಳಿಗೆ ದಟ್ಟಣೆ ಹೆಚ್ಚಿರುವ ಕಡೆಗಳಲ್ಲಿ ಶಾಲಾ–ಕಾಲೇಜುಗಳ ಸಮಯಕ್ಕೆ ಸಮರ್ಪಕ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದರು.

ವಿದ್ಯಾಸಿರಿ ವಿದ್ಯಾರ್ಥಿ ವೇತನ ಸರಿಯಾಗಿ ಜಮೆಯಾಗದೇ ಇರುವುದು, ರೈತ ವಿದ್ಯಾನಿಧಿಯನ್ನು ರದ್ದುಗೊಳಿಸಿರುವುದು ಸರಿಯಲ್ಲ. ತಕ್ಷಣವೇ ವಿದ್ಯಾರ್ಥಿ ವೇತನವನ್ನು ವಿದ್ಯಾರ್ಥಿಗಳ ಖಾತೆಗೆ ಜಮೆ ಮಾಡಬೇಕು ಎಂದರು. ಹಾಸ್ಟೆಲ್‌ಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಕೂಡಲೇ ಪೂರ್ಣಗೊಳಿಸಿ ಹಾಸ್ಟೆಲ್‌ಗಳಿಗೆ ಪ್ರವೇಶಾತಿ ನೀಡಬೇಕು. ಪ್ರತಿ ವಿದ್ಯಾರ್ಥಿಗೆ ಊಟಕ್ಕೆ ನೀಡುವ 1850 ರೂ ಹಣವನ್ನು ಹೆಚ್ಚಳ ಮಾಡಬೇಕು. ಹಾಸ್ಟೆಲ್ ಸಂಖ್ಯೆಗಳನ್ನು ಹೆಚ್ಚಿಸಬೇಕು ಎಂದು ಆಗ್ರಹಿಸಿದರು. ಎಬಿವಿಪಿ ಜಿಲ್ಲಾ ಸಂಚಾಲಕ ಧನುಷ್‌ಗೌಡ, ದೀಪಕ್ ಗುಡ್ಡೆಕೊಪ್ಪ, ಧನುಷ್, ಮನು, ಹರೀಶ್ ಇತರರು ಭಾಗವಹಿಸಿದ್ದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಖಿನ್ನತೆಯನ್ನು ಹೊಡೆದೋಡಿಸಿ ಇದ ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ಮನೆಯ ಅಗತ್ಯಗಳನ್ನು ನೋಡುತ್ತಾ, ಇಂದು ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು. ಕುಟುಂಬದಲ್ಲಿ ನಿಮ್ಮ ಸರ್ವಾಧಿಕಾರಿ ಧೋರಣೆಯನ್ನು ಬದಲಾಯಿಸಿಕೊಳ್ಳಲು ಇದು ಒಳ್ಳೆಯ ಸಮಯ.

### ವೃಷಭ ರಾಶಿ

ಮಾದಕವಸ್ತುವಿನ ಅವಲಂಬನೆ ಹೆಚ್ಚುವ ಸಾಧ್ಯತೆಗಳಿರುವುದರಿಂದ ಸ್ವಯಂ ಔಷಧೋಪಚಾರ ಮಾಡಬೇಡಿ. ವ್ಯಾಪಾರಿಗಳಿಗೆ ಇಂದು ವ್ಯಾಪಾರದಲ್ಲಿ ಹಾನಿ ಉಂಟಾಗಬಹುದು ಮತ್ತು ತಮ್ಮ ವ್ಯಾಪಾರವನ್ನು ಉತ್ತಮಗೊಳಿಸಲು ನೀವು ಹಣವನ್ನು ಖಾರುಚು ಮಾಡಬೇಕಾಗುತ್ತದೆ. ಇಂದು ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ.

### ಮಿಥುನ ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ಇಂದು ಹಣ ನಿಮ್ಮ ಕೈಯಲ್ಲಿ ಉಳಿಯುದಿಲ್ಲ. ಇಂದು ನೀವು ಹಣವನ್ನು ಉಳಿಸುವಲ್ಲಿ ಅನೇಕ ತೊಂದರೆಗಳನ್ನು ಎದುರಿಸಬೇಕಾಗುತ್ತದೆ ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು. ನಿಮ್ಮ ಪ್ರೀತಿಪಾತ್ರರು ಸ್ವಲ್ಪ ಕಿರಿಕಿರಿಗೊಂಡಂತೆ ತೋರುತ್ತದೆ ಇದು ನಿಮ್ಮ ಮನಸ್ಸಿನ ಮೇಲೆ ಒತ್ತಡವನ್ನು ಹಚ್ಚಿಸುತ್ತದೆ.

### ಕರ್ಕ ರಾಶಿ

ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ. ಇದು ಜೀವನದ ಸುಗಂಧವನ್ನು ಹಾಳುಮಾಡುವ ಹಾಗೂ ಒಂದು ಸಮೃದ್ಧ ಜೀವನವನ್ನು ನಡೆಸುವ ಬಯಕೆಯನ್ನು ಸಾಯಿಸುವ ನೀಚ ಚಿಂತನೆಯಾಗಿದೆ. ವಿದೇಶದಲ್ಲಿ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಇಂದು ಸಾಕಷ್ಟು ಹಣದ ಲಾಭವನ್ನು ಪಡೆಯಬಹುದು.

### ಸಿಂಹ ರಾಶಿ

ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೋಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಯಾರಾದರೂ ನಿಮ್ಮ ನೆರೆಹೊರೆಯವರು ಇಂದು ನಿಮ್ಮ ಹತ್ತಿರ ಹಣ ಸಾಲ ಕೇಳಲು ಬರಬಹುದು, ಅವರಿಗೆ ಸಾಲ ಕೊಡುವುದಕ್ಕಿಂತ ಮುಂಚೆ ಅವರ ನಂಬಿಕೆಯನ್ನು ಅಗತ್ಯವಾಗಿ ಪರೀಕ್ಷಿಸಿ, ಇಲ್ಲದಿದ್ದರೆ ಹಣದ ನಷ್ಟವಾಗುವ ಸಾಧ್ಯತೆ ಇದೆ. ನಿಮ್ಮ ನಿರ್ಧಾರದಲ್ಲಿ ಪೋಷಕರ ಸಹಾಯ ನಿಮಗೆ ತುಂಬ ಸಹಾಯ ಮಾಡುತ್ತದೆ.

### ಕನ್ಯಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು ಮತ್ತು ಅವರ ಆರೋಗ್ಯದ ಮೇಲೆ ಬಹಳಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ.

### ತುಲಾ ರಾಶಿ

ನಿಮ್ಮ ವಿಚ್ಛಿದ್ರಕಾರಕ ಭಾವಗಳು ಮತ್ತು ಉದ್ವೇಗಗಳನ್ನು ಹತೋಟಿಯಲ್ಲಿರಿಸಿಕೊಳ್ಳಿ. ನಿಮ್ಮ ಸಾಂಪ್ರದಾಯಿಕ ಚಿಂತನೆ / ಹಳೆಯ ವಿಚಾರಗಳು ನಿಮ್ಮ ಪ್ರಗತಿಯನ್ನು ಕುಂಠಿತಗೊಳಿಸಬಹುದು ಅಭಿವೃದ್ಧಿಯನ್ನು ನಿಲ್ಲಿಸಬಹುದು ಮತ್ತು ಮುಂದೆ ಹೋಗಲು ಅಡೆತಡೆಗಳನ್ನು ರಚಿಸಬಹುದು. ನೀವು ದೀರ್ಘಕಾಲದ ಆಧಾರದ ಮೇಲೆ ಹೂಡಿಕೆ ಮಾಡಿದಲ್ಲಿ ಗಣನೀಯ ಲಾಭ ಮಾಡುತ್ತೀರಿ. ನೀವು ಕಾಳಜಿ ವಹಿಸುವ ಯಾರಾದರ ಜೊತೆಗಿನ ಸಂವಹನದ ಕೊರತೆ ನಿಮಗೆ ಖಿನ್ನತೆಯನ್ನು ಉಂಟುಮಾಡುತ್ತದೆ.

### ವೃಶ್ಚಿಕ ರಾಶಿ

ನಿಮ್ಮ ನಿರಾಶಾದಾಯಕ ನಡವಳಿಕೆಯಂದಾಗಿ ನೀವು ಯಾವುದೇ ಪ್ರಗತಿಯನ್ನು ಹೊಂದಲು ಸಾಧ್ಯವಾಗುವುದಿಲ್ಲ. ಚಿಂತೆ ನಿಮ್ಮ ಚಿಂತನಾ ಶಕ್ತಿ ಯನ್ನು ಕುಂಠಿತಗೊಳಿಸಿದೆಯಂದು ಕಂಡುಕೊಳ್ಳಲು ಇದು ಸಕಾಲ. ಸಕಾರಾತ್ಮಕವಾಗಿ ಆಲೋಚಿಸಿ ಮತ್ತು ನಿಮ್ಮ ವಿವೇಚನೆಯಲ್ಲಿ ಗಮನಾರ್ಹ ಬದಲಾವಣೆ ಕಾಣುತ್ತದೆ.

### ಧನು ರಾಶಿ

ಆರೋಗ್ಯದ ಬಗ್ಗೆ ಸ್ವಲ್ಪ ಗಮನ ನೀಡಬೇಕು. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು. ನಿಮ್ಮ ಅತಿಯಾದ ಜೀವನ ಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ. ನಿಮ್ಮ ಸಂಗಾತಿ ನಿಮ್ಮ ಬಗ್ಗೆ ಒಳ್ಳೆಯದನ್ನು ಯೋಚಿಸುತ್ತಾನೆ, ಆದ್ದರಿಂದ ಕೆಲವೊಮ್ಮೆ ನಿಮ್ಮ ಮೇಲೆ ಕೋಪವನ್ನು ಸಹ ತೋರಿಸಬಹುದು.

### ಮಕರ ರಾಶಿ

ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ದಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ ಮತ್ತು ಅಗತ್ಯವಿರುವ ಬೆಳಕನ್ನು ನೀಡುತ್ತದೆ. ಹಣಕಾಸು ಖಂಡಿತವಾಗಿಯೂ ವೃದ್ಧಿಯಾಗುತ್ತದೆ– ಆದರೆ ಅದೇ ಸಮಯದಲ್ಲಿ ಖರ್ಚೂ ತುಂಬಾ ಹೆಚ್ಚಾಗುತ್ತದೆ. ಅನಿರೀಕ್ಷಿತ ಅತಿಥಿಗಳು ಸಂಜೆ ನಿಮ್ಮ ಮನೆಯಲ್ಲಿ ತುಂಬಿರುತ್ತಾರೆ.

### ಕುಂಭ ರಾಶಿ

ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ಧೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ . ಆದ್ದರಿಂದ ಇಂದು ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ.

### ಮೀನ ರಾಶಿ

ದೇಹದ ನೋವು ಮತ್ತು ಒತ್ತಡ ಸಂಬಂಧಿತ ಸಮಸ್ಯೆಗಳನ್ನು ತಳ್ಳಿಹಾಕಲು ಸಾಧ್ಯವಿಲ್ಲ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ. ನೀವು ಮಕ್ಕಳೊಡನೆ ಸ್ವಲ್ಪ ಸಮಯ ಕಳೆಯಬೇಕು ಮತ್ತು ಅವರಿಗೆ ಒಳ್ಳೆಯ ಮೌಲ್ಯಗಳನ್ನು ಕಲಿಸಬೇಕು ಮತ್ತು ತಮ್ಮ ಜವಾಬ್ದಾರಿಗಳನ್ನು ಅರ್ಥ ಮಾಡಿಕೊಳ್ಳಲು ಕಲಿಸಬೇಕು. ತಪ್ಪು ಸಂವಹನೆ ಅಥವಾ ಒಂದು ಸಂದೇಶ ನಿಮ್ಮ ದಿನವನ್ನು ಅವರಿಸಬಹುದು.

# ಲೋಕಾಯುಕ್ತರ ಭೇಟಿ, ಪರಿಶೀಲಿನೆ



**ಮಾಯಕೊಂಡ;** ಇಲ್ಲಿನ ನಾಡ ಕಚೇರಿ ಸೇರಿ ವಿವಿಧ ಇಲಾಖೆಗಳಿಗೆ ಲೋಕಾಯುಕ್ತ ಎಸ್.ಪಿ ಕೌಲಾಪುರೆ ಭೇಟಿ ನೀಡಿ ಪರಿಶೀಲಿಸಿದರು.

ಮಾಯಕೊಂಡದ ಪಶು ಆಸ್ಪತ್ರೆಗೆ ಭೇಟಿ ನೀಡಿ ಔಷಧ, ಉಪಕರಣ ದಾಸ್ತಾನು, ಪರಿಶೀಲಿಸಿದರು. ದಾಸ್ತಾನು ಪುಸ್ತಕಕ್ಕೂ ಮತ್ತು ಅಮದು ರಿಜಿಸ್ಟರ್ ನಡುವೆ ತಾಳೆ ಇರಲಿಲ್ಲ. ಪ್ರತಿನಿತ್ಯ ಹೊರರೋಗಿ ಪಶುಗಳಿಗೆ ನೀಡಿದ ಔಷಧಗಳನ್ನು ಪರಿಶೀಲಿಸಿ, ಹೊಂದಾಣಿಕೆ ಬರಲಿಲ್ಲ. ಕೆಲವು ಅವಧಿ ಮೀರಿದ ಔಷಧಿ ಬಾಟಲ್ ಕಂಡುಬಂದವು. ಔಷಧ, ಉಪಕರಣ ಇತ್ಯಾದಿ ಸೂಕ್ತವಾಗಿ ಇಡದೇ ಇರುವುದು ಕಂಡುಬಂದಿತು.

ಲೋಕಾಯುಕ್ತ ಎಸ್ಪಿ ಕೌಲಾಪುರೆ,

ದಾಖಲೆ ಇಡುವ ರೀತಿ ಇದಲ್ಲ .ನಿಮ್ಮ ಇಲಾಖೆಯಲ್ಲಿ ಯಾರು ಕೇಳುವುದಿಲ್ಲವಾ

ಮೂಕ ಪ್ರಾಣಿ ಚಿಕಿತ್ಸೆ ಮಾಡುವ ಪುಣ್ಯದ ಕೆಲಸ ನಿಮ್ಮದು ನಿರ್ಲಕ್ಷ್ಯ ಸಲ್ಲದು.ಕನಿಷ್ಠ ನೇಮ್ ಪ್ಲೇಟ್ ಏಪ್ರಾನ್ ಕೂಡಾ ಧರಿಸಿಲ್ಲ ಎಂದು ಕಿಡಿಕಾರಿದರು. ಎಲ್ಲಾ ದಾಖಲೆ ವಹಿಗಳನ್ನು ಪರಿಶೀಲನೆಗೆ ತರಲು ಸೂಚಿಸಿದರು. ವೈದ್ಯಾಧಿಕಾರಿ ಡಾ.ವರುಣ್ ಈಚೆಗಷ್ಟೇ ತಾವು ನೇಮಕವಾಗಿದ್ದು, ಮುಂದೆ ಲೋಪಗಳನ್ನು ಸರಿಪಡಿಸುವುದಾಗಿ ನಿವೇದಿಸಿಕೊಂಡೆರು.

ಮಾಯಕೊಂಡ ನಾಢಕಚೇರಿಯಲ್ಲಿ ಚಲನವಲನ ವಹಿ ಮತ್ತಿತರ ದಾಖಲೆ ನಿರ್ವಹಿಸದೇ ಇರುವುದನ್ನು ಗಮನಿಸಿದ ಲೋಕಾಯುಕ್ತ ಅಧಿಕಾರಿ ಗುರು ಬಸವರಾಜ್, ಹೋಬಳಿ ಮಟ್ಟದ ತಮ್ಮ ಕಚೇರಿ ಸೂಕ್ತವಾಗಿ ನಿರ್ಹಣೆಯಾಗಬೇಕು. ದಾಖಲೆ, ಲೋಕಾಯುಕ್ತ ವಿಳಾಸದ ಬೋರ್ಡ್ ಕಡ್ಡಾಯ ಪ್ರದರ್ಶಿಸಬೇಕು ಎಂದು ಉಪ ತಹಶಿಲ್ದಾರ್ ಹಾಲೇಶಪ್ಪ ಅವರಿಗೆ ಸೂಚಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಹೊರ ರೋಗಿ ಪಟ್ಟಿ, ಔಷಧ ದಾಸ್ತಾನು ಪರಿಶೀಲಿಸಿದರು.

# ಭಾರತೀಯ ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿಯಾಗಿ ಸೈಯದ್ ಖಾಲಿದ್ ಅಹ್ಮದ್ ಪುನರಾಯ್ಕೆ

**ದಾವಣಗೆರೆ:** ಅಖಿಲ ಭಾರತ ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿಯಾಗಿ ದಾವಣಗೆರೆಯ ಸೈಯದ್ ಖಾಲಿದ್ ಅಹ್ಮದ್ ಅವರು ಪುನರಾಯ್ಕೆಯಾಗಿದ್ದಾರೆ.

ದೇಶಾದ್ಯಂತ ಒಟ್ಟು 62 ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿಗಳನ್ನು ನಿಯುಕ್ತಿಗೊಳಿಸಿ ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ಕೆ. ಸಿ. ವೇಣುಗೋಪಾಲ್ ಅವರು ಆದೇಶ ಹೊರಡಿಸಿದ್ದಾರೆ. ಕಳೆದ ಮೂರು ವರ್ಷಗಳಿಂದ ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿಯಾಗಿ ಅತ್ಯುತ್ತಮವಾಗಿ ಸೈಯದ್ ಖಾಲಿದ್ ಅಹ್ಮದ್ ಅವರು ಕಾರ್ಯನಿರ್ವಹಿಸಿದ ಹಿನ್ನೆಲೆಯಲ್ಲಿ ಪುನಾರಾಯ್ಕೆ ಮಾಡಲಾಗಿದೆ.

ತೆಲಂಗಾಣ ಪ್ರದೇಶ ಕಾಂಗ್ರೆಸ್ ಉಸ್ತುವಾರಿಯೂ ಆಗಿರುವ ಸೈಯದ್ ಖಾಲಿದ್ ಅಹ್ಮದ್ ಅವರು ಕಾಂಗ್ರೆಸ್ ಹಿರಿಯ ಮುಖಂಡ ಸೈಯದ್ ಸೈಫುಲ್ಲ ಅವರ ಪುತ್ರ. ಕಾಂಗ್ರೆಸ್ ಯುವ ಘಟಕ ಸೇರಿದಂತೆ ವಿವಿಧ ಜವಾಬ್ದಾರಿಗಳನ್ನು ಸಮರ್ಥವಾಗಿ ನಿಭಾಯಿಸಿರುವ ಸೈಯದ್ ಖಾಲಿದ್ ಅಹ್ಮದ್ ಅವರು ಸಂಘಟನಾ ಚತುರರು.

ತೆಲಂಗಾಣ, ಬಿಹಾರ, ಮಹಾರಾಷ್ಟ್ರ, ಕರ್ನಾಟಕ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಯಲ್ಲಿ ತಮಗೆ ವಹಿಸಿದ ಜವಾಬ್ದಾರಿ ನಿಭಾಯಿಸಿ ರಾಜ್ಯ ಮತ್ತು ರಾಷ್ಟ್ರ ನಾಯಕರ ಸೆಳೆದವರು. ತೆಲಂಗಾಣ ಯುವ ಕಾಂಗ್ರೆಸ್ ಉಸ್ತುವಾರಿಯೂ ಆಗಿರುವ ಸೈಯದ್ ಖಾಲಿದ್ ಅಹ್ಮದ್ ಬಿಡುವಿಲ್ಲದೇ ಕಾಂಗ್ರೆಸ್ ಸಭೆ, ಸಮಾರಂಭ, ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಂಡಿದ್ದಾರೆ.

**ಸಂತೋಷ ತಂದಿದೆ:**



ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿಯಾಗಿ ಪುನರಾಯ್ಕೆ ಮಾಡಿರುವುದು ಸಂತಸ ತಂದಿದೆ. ಕಾಂಗ್ರೆಸ್ ಪಕ್ಷವು ವಹಿಸಿರುವ ಜವಾಬ್ದಾರಿಗಳನ್ನು ಪ್ರಾಮಾಣಿಕವಾಗಿ ನಿಭಾಯಿಸಿದ್ದೇನೆ. ಪಕ್ಷದ ಆದೇಶ ಪಾಲಿಸುವೆ. ಬೇರೆ ಬೇರೆ ರಾಜ್ಯಗಳಲ್ಲಿಯೂ ಚುನಾವಣೆ ವೇಳೆ ಕೆಲಸ ಮಾಡಲು ಅನುವು ಮಾಡಿಕೊಟ್ಟಿದೆ. ಪಕ್ಷವು ಕೆಲಸ ಗುರುತಿಸಿ ಮುಂದುವರಿಸಿರುವುದು ಮತ್ತಷ್ಟು ಜವಾಬ್ದಾರಿ ಹೆಚ್ಚಿದೆ. ಪಕ್ಷದ ನಾಯಕರು, ಪಕ್ಷ ಸಂಘಟನೆಗೆ ಹಗಲಿರುಳು ಶ್ರಮಿಸುತ್ತೇನೆ. ಯುವಕರಲ್ಲಿ ಪಕ್ಷದ ತತ್ವ, ಸಿದ್ಧಾಂತ, ದೇಶಕ್ಕೆ ನೀಡಿರುವ ಕೊಡುಗೆ ತಿಳಿಸುವ ಕೆಲಸ ಮುಂದುವರಿಸುತ್ತೇನೆ ಎಂದು ಸೈಯದ್ ಖಾಲಿದ್ ಅಹ್ಮದ್ ಅವರು ತಿಳಿಸಿದ್ದಾರೆ.

### ಯೂರಿಯ ಗೊಬ್ಬರಕ್ಕಾಗಿ ರೈತ ಸಂಘಗಳಿಂದ ಅಂಬೇಡ್ಕರ್ ವೃತ್ತದಲ್ಲಿ ರಸ್ತೆ ತಡೆ

# ರೈತರಿಗೆ ಯೂರಿಯಾ ಗೊಬ್ಬರ ನೀಡಲು ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರ ವಿಫಲ :ಡಾ. ನವೀನ್ ಕುಮಾರ್

**ಜಗಳೂರು :** ರೈತರಿಗೆ ಯೂರಿಯಾ ಗೊಬ್ಬರ ನೀಡಲು ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರ ವಿಫಲವಾಗಿದ್ದು,ಇತ್ತ ರೈತರ ಬಗ್ಗೆ ಕಿಂಚಿತ್ತು ಕಾಳಜಿ ಇಲ್ಲದ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವಎಸ್ .ಎಸ್.ಮಲ್ಲಿಕಾರ್ಜು ನ್ನಿದ್ದೆಯಲ್ಲಿದ್ದಾರೆ ಎಂದು ಬಿಜೆಪಿ ರೈತ ಮೊರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ. ನವೀನ್ಕುಮಾ ಉಸ್ತುವಾರಿ ಸಚಿವರ ವಿರುದ್ದ ವಾಗ್ದಾಳಿ ಮಾಡಿದರು.

ಮಂಗಳವಾರ ಸಂಜೆ ಪಟ್ಟಣದ ಕೃಷಿ ಇಲಾಖೆಗೆ ಆಗಮಿಸಿ ಅಧಿಕಾರಿಗಳಿಂದ ಯೂರಿಯ ಗೊಬ್ಬರದ ಅಭಾವದ ಬಗ್ಗೆ ಮಾಹಿತಿ ಪಡಿದ ನಂತರ ರೈತರನ್ನುದ್ದೇಶಿಸಿ ಅವರು ಮಾತನಾಡಿದರು.

ಯೂರಿಯ ಗೊಬ್ಬರದ ಸಮಸ್ಯೆ ತಾರಕಕ್ಕೆರಿದ್ದು ರೈತರು ಊಟ ,ನೀರು ಇಲ್ಲದೇ ಯೂರಿಯಕ್ಕಾಗಿ ಕಾಯುವಂತ ಸ್ಥಿಯನ್ನು ಕಾಂಗ್ರೇಸ್ಸರ ಕಾರಮಾಡಿದೆ .ಪ್ರತಿನಿತ್ಯ ಟಿವಿಗಳಲ್ಲಿ ಜಗಳೂರು ರೈತರ ಸಮಸ್ಸೆ ಬರುತ್ತಿದೆ.ಸಮಸ್ಯೆ ಇಷ್ಟೊಂದಿದ್ದರು ಸಹ ನಿದ್ದೆಯಲ್ಲಿರುವ ಉಸ್ತುವಾರಿ ಸಚಿವರು ಕೆಲಸ ಮಾಡದ ಸ್ಥಳಿಯ ಶಾಸಕರು ರೈತರ ಸಮಸ್ಸೆಯನ್ನುಆಲಿಸುತ್ತಿಲ್ಲ ಇನ್ನೆರಡು ದಿನಗಳಲ್ಲಿ ಸಮಸ್ಸೆಗಳನ್ನು ಬಗೆಹರಿಸದೇ ಹೋದರೆ ಜಿಲ್ಲಾ ಉಸ್ತುವಾರಿ ಸಚಿವರ ಮನೆಯ ಮುಂದೆ ಪ್ರತಿಭಟನೆ ನಡೆಸಲಾಗವುದು.

ಕೃಷಿ ಇಲಾಖೆಯವರು ಹಳೆಯ ಅಂಕಿ ಸಂಖ್ಯೆಗಳನ್ನಿಟ್ಟು ಕೊಂಡಿದ್ದಾರೆ. ಇದರಿಂದ ಸಮಸ್ಸೆ ಉಲ್ಬಣಗೊಳ್ಳಲು ಕಾರಣವಾಗಿದೆ. ಜಗಳೂರು ತಾಲೂಕಿನಲ್ಲಿ ಯೂರಿಯ ಸಮಸ್ಸೆ ಇದೆ ಎಂದು ಟಿವಿಯಲ್ಲಿ ಬಂದರೆ ಕೃಷಿಇ ಲಾಖೆಯ ಮುಂಭಾಗದಲ್ಲಿ ಮಾಜಿ ಶಾಸಕ ರಾಜೇಶ್ನೇತೃತ್ವದಲ್ಲಿ ಅಮರಣಾಂತರ ಉಪವಾಸ ಸತ್ಯಾಗ್ರಹ ಮಾಡಲಾಗುವುದು ಎಂದು ಎಚ್ಚರಿಸಿದರು.



ರೈತಮೊರ್ಚಾ ರಾಜ್ಯ ಉಪಾಧ್ಯಕ್ಷ ಲೊಕಿಕೆರೆ ನಾಗರಾಜ್ಮತನಾಡಿ ಕೇಂದ್ರ ಸರಕಾರ ಜಿಲ್ಲೆಗೆ ನಿಗದಿಯಂತೆ 34 ಸಾವಿರ ಮೇಟ್ರೀಕ್ಟನ್ಯೂರಿಯ ಪೂರೈಸಿಬೇಕಾಗಿತ್ತು ಆದರೆ3 8ಸಾವಿರ ಮೇಟ್ರಿಕ್ಯೂರಿಯಸರಬರಾಜಗಿದೆ.ಇದನ್ನು ನೊಡಿದರೆ ಕಾಳಸಂತೆಯಲ್ಲಿ ಮಾರಾಟವಾಗುತ್ತಿದೆ ಎಂಬ ಅನುಮಾನಕಾಡುತ್ತಿದೆ ಎಂದು ದೂರಿದರು.

.ಬಾಕ್ಸ್ :

ಮಾಜಿ ಶಾಸಕ 'ಹೆಚ್.ಪಿ.ರಾಜೇಶ್ಮಾತನಾಡಿ ನಾನು ಸಚಿವ ಸ್ಥಾನದ ಆಕಾಂಕ್ಷಿ ಎಂದು ಹೇಳುವ ಶಾಸಕ ಬಿ.ದೇವೇಂದ್ರಪ್ಪ ಅವರು ರೈತರ ಸಮಸ್ಯೆಯನ್ನು ಮೊದಲು ಬಗೆಹರಿಸಲಿ.ಅವರಿ ಗೆರೈತ ಎಂದರೆ ಗೊತ್ತಿಲ್ಲ. ಯೂರಿಯಾ ಗೊಬ್ಬರದ ಸಮಸ್ಯೆ ಇದ್ದರೂಅಧಿಕಾರಿಗಳ ಸಭೆ ಮಾಡದೇ ನಿರ್ಲಕ್ಷೆ ಮಾಡುವ ಶಾಸಕರಿಗೆ ಈಸಮಸ್ಸೆ ಎಲ್ಲಿಬಗೆ ಹರಿಸುತ್ತಾರೆ. ರೈತರ ಸಮಸ್ಯೆ ಅವರಿಗೆ ತಿಳಿಯುತ್ತಿಲ್ಲ ಎಂದು ವಾಗ್ದಾಳಿ ಮಾಡಿದರು.

ಇನ್ನೊಂದಡೆ ಯೂರಿಯ ಗೊಬ್ಬರ ಬಾರದ ಹಿನ್ನಲೆಯಲ್ಲಿ ಅಂಬೇಡ್ಕರ್ವೃತ್ತದಲ್ಲಿ ದಿಡೀರನೇ ರಸ್ತೆ ತಡೆ ಮಾಡಿದ ಕರ್ನಾಟಕ ರಾಜ್ಯ ರೈತ ಸಂಘಗಳ ನೇತೃತ್ವದಲ್ಲಿ ನಡೆಸುತ್ತಿರುವ 'ಪ್ರತಿಭಟನೆ ಸ್ಥಳಕ್ಕೆ ದಾವಣಗೆರೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಜಯಾವುಲ್ಲಾ ಆಗಮಿಸಿ ಬುಧುವಾರ ಜಗಳೂರು ಪಟ್ಟಣಕ್ಕೆ 16 ಟನ್ ಯೂರಿಯಾದಾಸ್ತಾನು ಜಗಳೂರು ಎಪಿಎಂ.ಸಿ.ಆವರಣಕ್ಕೆ ಬರಲಿದ್ದು, ಗುರುವಾರ ರೈತರಿಗೆ ವಿತರಣೆ ಮಾಡಲಾಗುವುದು ಎಂದು ಯೂರಿಯಗೊಬ್ಬರ ಬಾರದ' ಹಿನ್ನಲೆಯಲ್ಲಿ ಅಂಬೇಡ್ಕರ್ವೃತ್ತದಲ್ಲಿ ದಿಡೀರನೇ ರಸ್ತೆ ತಡೆ ಮಾಡಿ ಕರ್ನಾಟಕ ರಾಜ್ಯ ರೈತ ಸಂಘಗಳಿಗೆ ಭರವಸೆ ನೀಡಿದ ಹಿನ್ನಲೆ ರಸ್ತೆ ತಡೆಯನ್ನು ಕೊನೆಗೊಳಿಸಿದರು.

ಈಸಂದರ್ಭದಲ್ಲಿ ದಾವಣಗೆರೆ ಕೃಷಿ ಇಲಾಖೆಯ ಉಪಕೃಷಿನಿರ್ದೇಶಕರು ದಾವಣಗೆರೆ ಅಶೋಕಎಸ್.,ಡಿ. ವೈ.ಎಸ್ಪಿ.ಬಸವರಾಜಪ್ಪ, ತಹಶೀಲ್ದಾರ್ಸೈಯದ ಕಲೀಂಉಲ್ಲಾ, ಪಿ.ಐ. ಸಿದ್ದರಾಮಯ್ಯ, ಜಗಳೂರು ಕೃಷಿ ಇಲಾಖೆಯ ಸಹಾಯಕ 'ನಿರ್ದೇಶಕರಾದಶ್ವೇತಾ, ಉಭಯಭಣದ 'ರೈತ 'ಸಂಘದ 'ಅಧ್ಯಕ್ಷರುಗಳು, ರೈತರು,ಪಟ್ಟಣ ಪಂಚಾಯಿತಿ ಅಧ್ಯಕ್ಷ ನವೀನ್ಕುಮಾರ್, ಪ.ಪಂಸದಸ್ಯ ಸಿದ್ದಪ್ಪ, ಮುಖಂಡರಾದ ಜೆ.ವಿ. ನಾಗರಾಜ್, ಬಿಸ್ತುವಳ್ಳಿಬಾಬು, ಬಿದರಕೆರೆರವಿ, ಕ್ಯಾಂ ಬಳೇಶ್ಸೇರಿದಂತೆಮತ್ತಿತರರುಹಾಜರಿದ್ದರು

### ಪಂಚಾಯತ ರಾಜ್ ವಿಭಾಗದ ಅಧಿಕಾರಿಗಳು ಹಾಗೂ ಸಂಘದ ಕಾರ್ಯಗಳು ಯಶಸ್ಸಿಗೆ ಕಾರಣ : ರಾಜ್ಯಾಧ್ಯಕ್ಷ ಬಸವರಾಜ ಹೆಚ್

# ಪಂಚಾಯತ ರಾಜ್ ವಿಭಾಗದ ಅಧಿಕಾರಿಗಳು ಮತ್ತು ನೌಕರರ ಸಂಘದ ರಾಜ್ಯಮಟ್ಟದ ವಾರ್ಷಿಕ ಮಹಾಸಭೆ ಯಶಸ್ವಿ..

**ಗದಗ:–** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆಯ ಪಂಚಾಯತ ರಾಜ್ ವಿಭಾಗದ ಅಧಿಕಾರಿಗಳು ಹಾಗೂ ನೌಕರರ ಸಂಘದ 2025–26ನೇ ಸಾಲಿನ ರಾಜ್ಯಮಟ್ಟದ ವಾರ್ಷಿಕ ಮಹಾಸಭೆಯು ಇತ್ತೀಚೆಗೆ ಚಿತ್ರದುರ್ಗ ಜಿಲ್ಲಾ ಪಂಚಾಯತ್ ಕಾರ್ಯಾಲಯದಲ್ಲಿ ರಾಜ್ಯಾಧ್ಯಕ್ಷರಾದ ಶ್ರೀ ಬಸವರಾಜ್ ಹೆಚ್ ಇವರ ಅಧ್ಯಕ್ಷತೆಯಲ್ಲಿ ಯಶಸ್ವಿಯಾಗಿ ನಡೆಯಿತು.

ರಾಜ್ಯಾಧ್ಯಕ್ಷರಾದ ಶ್ರೀ ಬಸವರಾಜ್ ಹೆಚ್, ಸಹಾಯಕ ನಿರ್ದೇಶಕರು (ಆಡಳಿತ), ಇವರು ಮಾತನಾಡಿ "ಸಾಧಿಸುವ ಛಲ, ತಾಳ್ಮೆ ಮತ್ತು ಪರಸ್ಪರ ನಂಬಿಕೆಯಿಂದ ಏನನ್ನು ಬೇಕಾದರೂ ಸಾಧಿಸಬಹುದು. ನಮ್ಮ ಸಂಘದ ಯಶಸ್ಸಿಗೆ ಇದು ಅತ್ಯುತ್ತಮ ಉದಾಹರಣೆ. ಈಗಾಗಲೇ ಸಾಧಿಸಿರುವುದು ಬಹಳಷ್ಟಿದ್ದರೆ, ಸಾಧಿಸಬೇಕಿರುವುದು ಇನ್ನೂ ಬೆಟ್ಟದಷ್ಟಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಬಂದಿರುವ ನೌಕರರ ಸಲಹೆ ಮತ್ತು ಸಹಕಾರವು ಈ ದಿಶೆಯಲ್ಲಿ ಅತ್ಯಗತ್ಯ" ಎಂದು ಹೇಳಿದರು. "ಜಿಲ್ಲಾ ಮತ್ತು ತಾಲೂಕು ಪಂಚಾಯತಿಗಳಲ್ಲಿ ಶೇ.75 ಕ್ಕೂ ಹೆಚ್ಚು ಲಿಪಿಕ ಹುದ್ದೆಗಳು ಖಾಲಿಯಿದ್ದರೂ, ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ವಿಳಂಬವಿಲ್ಲದೇ ಕೆಲಸ ನಿರ್ವಹಿಸುತ್ತಿದ್ದಾರೆ.ರಾಜ್ಯ ಪ್ರಧಾನ ಕಾರ್ಯದರ್ಶಿಯಾದ ಶ್ರೀ ದೇವರಾಜ್ ಸಿ. ಸಜ್ಜನಶೆಟ್ಟರ್, ವ್ಯವಸ್ಥಾಪಕರು, ಪ್ರಾಸ್ತಾವಿಕ ಭಾಷಣದಲ್ಲಿ, ಸಂಘದ ಅಧ್ಯಕ್ಷರಾದ ಶ್ರೀ ಬಸವರಾಜ್ ಹೆಚ್ ಅವರ ಮಾರ್ಗದರ್ಶನದಲ್ಲಿ 15–20 ವರ್ಷಗಳಿಂದ ಪದೋನ್ನತಿಯಿಲ್ಲದೇ ಸೊರಗಿದ್ದ ನೂರಾರು ನೌಕರರಿಗೆ 2020 ರಲ್ಲಿ ರಚಿತವಾದ ವೃಂದ ಮತ್ತು ನೇಮಕಾತಿ ನಿಯಮಗಳ ಮೂಲಕ ಪದೋನ್ನತಿಯ ದಾರಿ ತೆರೆದಿದ್ದನ್ನು ಶ್ಲಾಘಿಸಿದರು. ಜಿಲ್ಲಾ ಪಂಚಾಯತ್ ಮಟ್ಟದಲ್ಲಿ ಬಿ ವೃಂದದ ಪತ್ರಾಂಕಿತ ಹುದ್ದೆಗಳ ಸೃಜನೆಯ ಜೊತೆಗೆ,



35 ವರ್ಷಗಳಿಂದ ಲಿಪಿಕ ವರ್ಗದ ನೌಕರರಿಗೆ ಪದೋನ್ನತಿಯಲ್ಲಿ ಆಗಿರುವ ಅನ್ಯಾಯವನ್ನು ಸರಿಪಡಿಸಲು ಸಂಘದ ಹೋರಾಟ ಫಲಿಸಿದೆ ಎಂದು ತಿಳಿಸಿದರು.

ಸಂಘದ ಸಾಧನೆಗಳು:

ಸಂಘದ ನಿರಂತರ ಹೋರಾಟದ ಫಲವಾಗಿ, 2020 ರಲ್ಲಿ ರಚಿತವಾದ ವೃಂದ ಮತ್ತು ನೇಮಕಾತಿ ನಿಯಮಗಳ ಮೂಲಕ ರಾಜ್ಯದ ವಿವಿಧ ಜಿಲ್ಲಾ ಮತ್ತು ತಾಲೂಕು ಪಂಚಾಯತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೂರಾರು ಸರ್ಕಾರಿ ನೌಕರರಿಗೆ ಪದೋನ್ನತಿಯ ದಾರಿ ಸುಗಮವಾಯಿತು. ಸಂಘದ ಅಧ್ಯಕ್ಷರ ಮತ್ತು ತಂಡದ ತಂತ್ರಗಾರಿಕೆಯನ್ನು ಎಲ್ಲರೂ ಮುಕ್ತ ಕಂಠದಿಂದ ಶ್ಲಾಘಿಸಿದರು. ಒಂದೇ ಇಲಾಖೆಯಲ್ಲಿ ಮೂರು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿದ್ದು, ಒಂದು ಇಲಾಖೆ ಒಂದು ವೃಂದ ಮತ್ತು ನೇಮಕಾತಿ ನಿಯಮಗಳು ಎಂಬ ಕುರಿತು ಸರ್ಕಾರದ ಗಮನ ಸೆಳೆದು ಈ ದಿಸೆಯಲ್ಲಿ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.2025–2030 ರ ಅವಧಿಗೆ ಜಿಲ್ಲೆಗೊಬ್ಬರಂತೆ ನಿರ್ದೇಶಕರನ್ನು ಆಯ್ಕೆ ಮಾಡಿ, ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಜಿಲ್ಲಾ ಮತ್ತು ತಾಲೂಕು ಪಂಚಾಯತಗಳ ನೌಕರರ ಕುಂದುಕೊರತೆಗಳನ್ನು ಆಲಿಸಿ, ಅಧ್ಯಕ್ಷರು ಸಭೆಯಲ್ಲಿಯೇ ಕೆಲವು ಸಮಸ್ಯೆಗಳಿಗೆ ಪರಿಹಾರ ಸೂಚಿಸಿದರು. ಉಳಿದ ಸಮಸ್ಯೆಗಳಿಗೆ ಸರ್ಕಾರ ಮತ್ತು ಆಯುಕ್ತರ ಗಮನಕ್ಕೆ ತಂದು ಪರಿಹರಿಸುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಚಿತ್ರದುರ್ಗ ಜಿಲ್ಲೆಯಿಂದ ರಾಜ್ಯಾಧ್ಯಕ್ಷರು, ಪದಾಧಿಕಾರಿಗಳು ಮತ್ತು ಹೊಸದಾಗಿ ನೇಮಕಗೊಂಡ ನಿರ್ದೇಶಕರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ ಚಿತ್ರದುರ್ಗ ಜಿಲ್ಲಾ ಪಂಚಾಯತ್ ಕಾರ್ಯಾಲಯದ ಸಹಾಯಕ ನಿರ್ದೇಶಕರಾದ ಶ್ರೀ ದಾದಾಪೀರ್, ವ್ಯವಸ್ಥಾಪಕರಾದ ಶ್ರೀ ಸುನೀಲ್, ಶ್ರೀ ಷಣ್ಮುಖ ಮತ್ತು ಇತರ ನೌಕರರನ್ನು ಸಂಘದ ವತಿಯಿಂದ ಗೌರವಿಸಲಾಯಿತು.

ಕಾರ್ಯಕ್ರಮವು ಶ್ರೀ ತಿಪ್ಪೇಸ್ವಾಮಿ ಅವರ ಪ್ರಾರ್ಥನೆಯೊಂದಿಗೆ ಪ್ರಾರಂಭವಾಯಿತು. ಸಂಘದ ಉಪಾಧ್ಯಕ್ಷರಾದ ಶ್ರೀ ಭೈರೇಶ್ ವ್ಹಿ.ಎಸ್, ವ್ಯವಸ್ಥಾಪಕರು, ಸ್ವಾಗತ ಕಾರ್ಯಕ್ರಮವನ್ನು ನಡೆಸಿಕೊಟ್ಟರು.

ಸಭೆಯಲ್ಲಿ ರಾಜ್ಯ ಉಪಾಧ್ಯಕ್ಷರಾದ ಶ್ರೀ ವೆಂಕಟೇಶ್ ತಿಮ್ಮನಾಯ್ಕರ್, ಶ್ರೀ ಜಯಪ್ರಕಾಶ್ ಚವ್ಹಾಣ್, ಶ್ರೀ ಡಿ. ಲಕ್ಷ್ಮೀಕಾಂತ, ಖಜಾಂಚಿಯಾದ ಶ್ರೀ ಬಾಪುಗೌಡ ಪಾಟೀಲ್ ಸೇರಿದಂತೆ ರಾಜ್ಯದ ವಿವಿಧ ಜಿಲ್ಲಾ ಮತ್ತು ತಾಲೂಕು ಪಂಚಾಯತಗಳಿಂದ ನೂರಾರು ಅಧಿಕಾರಿಗಳು ಮತ್ತು ನೌಕರರು ಭಾಗವಹಿಸಿದ್ದರು. ಕೊನೆಯಲ್ಲಿ, ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು...

# ಶಿಷ್ಯ ವೇತನಕ್ಕೆ ಅರ್ಜಿ ಆಹ್ವಾನ


**ಹಾಸನ :** ಕರ್ನಾಟಕದ ಮೂಲನಿವಾಸಿ ಮಿಲಿಟರಿ ಪಿಂಚಣಿದಾರ/ಪಿಂಚಣಿರಹಿತ ಮಾಜಿ ಸೈನಿಕರ ಮಕ್ಕಳಿಂದ 2025–26ನೇ ಸಾಲಿನ ಶಿಷ್ಯವೇತನ ಮಂಜೂರಾತಿಗಾಗಿ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

1ನೇ ತರಗತಿಯಿಂದಅಂತಿಮ ಪದವಿ ಮತ್ತುಡಿಪ್ಲೋಮ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಾಜಿ ಸೈನಿಕರ/ ಅವಲಂಬಿತರ ಮಕ್ಕಳು ಈ ಸೌಲಭ್ಯವನ್ನು ಪಡೆಯಲುಅರ್ಹರಿರುತ್ತಾರೆ.

ಉಪ ನಿರ್ದೇಶಕರಕಾರ್ಯಾಲಯ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಂಕರೀಪುರಂ, ಬಿ.ಎಂರಸ್ತೆ, ಹಾಸನ ಇವರಿಂದ ಅರ್ಜಿಗಳನ್ನು ಪಡೆದು ಭರ್ತಿ ಮಾಡಿ ನಿಗದಿತ ಅಡಕಗಳೊಂದಿಗೆ ಈ ಕಾರ್ಯಾಲಯಕ್ಕೆ ಸಲ್ಲಿಸಲು ಅಕ್ಟೋಬರ್.31 ಕೊನೆಯ ದಿನವಾಗಿರುತ್ತದೆ.

ಕೃಷಿ/ತಾಂತ್ರಿಕ/ವೈದ್ಯಕೀಯ ಮತ್ತಿತರ ವೃತ್ತಿಪರ ಕೋರ್ಸುಗಳ ವಿದ್ಯಾರ್ಥಿಗಳು ಅರ್ಜಿಸಲ್ಲಿಸಲುನವೆಂಬರ್30 ಕೊನೆಯ ದಿನವಾಗಿರುತ್ತದೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರಕಾರ್ಯಾಲಯದಲ್ಲಿಖುದ್ದಾಗಿ ಸಂಪರ್ಕಿಸಿ ಮಾಹಿತಿಯನ್ನು ತಿಳಿಯಬಹುದಾಗಿದೆಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

# ಮೈದುಂಬಿ ಹರಿಯುತ್ತಿದೆ ತುಂಗಭದ್ರಾ




**ಹರಿಹರ:** ತುಂಗ ಮತ್ತು ಭದ್ರಾ ಜಲಾಶಯದ ನೀರನ್ನು ಬಿಟ್ಟಿರುವ ಕಾರಣ ತಾಲೂಕಿನ ತುಂಗಭದ್ರಾ ನದಿ ಮೈದುಂಬಿ ಹರಿಯುತ್ತಿದೆ. ಇದನ್ನು ಕಣ್ಣುಂಬಿಕೊಳ್ಳಲು ಸಾರ್ವಜನಿಕರು ತಂಡೋಪತಂಡವಾಗಿ ಆಗಮಿಸುತ್ತಿದ್ದಾರೆ. ರಾಘವೇಂದ್ರ ಮಠದ ಹಿಂಭಾಗದ ತಂಗಾಭದ್ರಾರತಿ ಮಂಟಪದ ಬಳಿ ಮಹಿಳೆಯರು, ಮಕ್ಕಳು ನದಿಯಲ್ಲಿ ಇಳಿದು ಮೋಜು– ಮಸ್ತಿ, ಸೆಲ್ವಿ ತೆಗೆದುಕೊಳ್ಳುತ್ತಿದ್ದ ದೃಶ್ಯ ಸೋಮವಾರ ಕಂಡುಬಂತು. ರಭಸವಾಗಿ ನದಿ ಹರಿಯುತ್ತಿದ್ದು, ಸಂಭವನೀಯ ಅನಾಹುತ ತಪ್ಪಿಸಲು ತಾಲೂಕು ಆಡಳಿತ ಸೂಕ್ತ ಬಂದೋಬಸ್ತ್ ಮಾಡಬೇಕು ಎಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ.

# ನಿಧನ ಸುದ್ದಿಗಳು

### ಸುರಹೊನ್ನೆ ಕೊಟ್ರಯ್ಯ ನಿಧನ

**ದಾವಣಗೆರೆ:** ನಗರದ ನಿಟುವಳ್ಳಿ ನಿವಾಸಿ ಸುರಹೊನ್ನೆ ಕೊಟ್ರಯ್ಯ (74) ಮಂಗಳವಾರ ನಿಧನರಾದರು. ಪತ್ನಿ, ನಾಲ್ವರು ಪುತ್ರಿಯರು ಇದ್ದಾರೆ. ಬುಧವಾರ ಗಾಂಧಿನಗರದ ಹಿಂದು ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನಡೆದಿದೆ.

### ದುರ್ಗದ ರಾಮಚಂದ್ರಪ್ಪ ನಿಧನ

**ಹರಿಹರ :** ತಾಲ್ಲೂಕು ಕುಂಬಳೂರು ಗ್ರಾಮದ ದುರ್ಗದ ರಾಮಚಂದ್ರಪ್ಪ ಇವರು ದಿನಾಂಕ: : 29.07.2025 ಮಂಗಳವಾರ ರಾತ್ರಿ 10.30ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 70 ವರ್ಷ ವಯಸ್ಸಾಗಿತ್ತು. ಅಪಾರ ಬಂಧು – ಬಳಗವನ್ನು ಅಗಲಿರುವ

ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 30.07.2025ರ ಬುಧವಾರ ಮಧ್ಯಾಹ್ನ 12.30ಕ್ಕೆ ಕುಂಬಳೂರಿನ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.

### ಶ್ರೀಮತಿ ಸರೋಜಮ್ಮ ನಿಧನ

**ದಾವಣಗೆರೆ :** ಸಿಟಿ, 3ನೇ ಮೇನ್, 8ನೇ ಕ್ರಾಸ್,. ಯಲ್ಲಮ್ಮ ನಗರ ವಾಸಿ ದಿ. ಗದ್ವಾಲ್ ದುಗ್ಗಪ್ಪ ಅವರ ಧರ್ಮಪತ್ನಿ, ಮಾರ್ಡನ್ ಹೇರ್‌ಡ್ರಸ್ಸಸ್ ಗದ್ವಾಲ್ ರಮೇಶ್ ದೊಡ್ಡಪೇಟೆ ಅವರ ತಾಯಿ ಶ್ರೀಮತಿ ಸರೋಜಮ್ಮ (90) ಅವರು ದಿನಾಂಕ : 29.07.2025 ರ ಮಂಗಳವಾರ ರಾತ್ರಿ 8.50ಕ್ಕೆ ನಿಧನರಾದರು ನಾಲ್ವರು ಪುತ್ರಿಯರು, ಇಬ್ಬರು ಪುತ್ರರು, ಸೊಸೆಯಂದಿರು, ಅಳಿಯಂದಿರು; ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ : 30.07.2025 ರ ಬುಧವಾರ ಮಧ್ಯಾಹ್ನ 2 ಗಂಟೆಗೆ 'ಗಾಂಧಿನಗರದ ಸಾರ್ವಜನಿಕ ರುದ್ರ ಭೂಮಿಯಲ್ಲಿ ನೆರವೇರಿದೆ.

# ಅಯ್ಯನಕೆರೆ ಅಭಿವೃದ್ಧಿಗೆ 5 ಕೋಟಿ ರೂ. ಮಂಜೂರು: ಶಾಸಕ ತಮ್ಮಯ್ಯ

**ಚಿಕ್ಕಮಗಳೂರು, ಜು.30:** ಪ್ರವಾಸೋದ್ಯಮದ ಅಭಿವೃದ್ಧಿ ದೃಷ್ಟಿಯಿಂದ ಅಯ್ಯನಕೆರೆಯಲ್ಲಿ ತೂಬು ಮತ್ತು ಕೆರೆ ದುರಸ್ತಿಗೆ ಐದು ಕೋಟಿ ಹಣವನ್ನು ಒದಗಿಸಲಾಗಿದ್ದು, ಮಳೆಗಾಲ ಮುಗಿದ ಕೂಡಲೇ ಏರಿಯನ್ನು ಸೌಂದರ್ಯ ವರ್ಧಿಸಿ ಪ್ರವಾಸಿಗರನ್ನು ಹೆಚ್ಚು ಆಕರ್ಷಣೀಯಗೊಳಿಸಲಾಗುವುದು ಎಂದು ಕ್ಷೇತ್ರದ ಶಾಸಕ ಹೆಚ್.ಡಿ.ತಮ್ಮಯ್ಯ ತಿಳಿಸಿದರು.

ಕಡೂರು ತಾಲ್ಲೂಕಿನ ಸಖರಾಯಪಟ್ಟಣ ಸಮೀಪವಿರುವ ಅಯ್ಯನಕೆರೆಗೆ ಇಂದು ಬಾಗಿನ ಅರ್ಪಿಸಿದ ಬಳಿಕ ಮಾತನಾಡಿದ ಅವರು, ಸಣ್ಣ ನೀರಾವರಿ ಇಲಾಖೆಯಿಂದ ಇಂದು ನಗರದ ಅಯ್ಯನಕೆರೆಗೆ ಬಾಗಿನ ಅರ್ಪಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು ಈ ಕೆರೆ ಸುಮಾರು ಐದು ಸಾವಿರಕ್ಕೂ ಹೆಚ್ಚು ಹೆಕ್ಟೇರ್‌ಗಳಷ್ಟು ಅಚ್ಚುಕಟ್ಟುದಾರರಿದ್ದಾರೆ, ಅದರ ಜೊತೆ ಅಧಿಕೃತವಾಗಿ ಇನ್ನೂ ಐದು ಸಾವಿರ ಅಚ್ಚುಕಟ್ಟುದಾರರಿದ್ದಾರೆ. ಈ ಕೆರೆಯನ್ನು ಇಲಾಖೆ ವತಿಯಿಂದ ಸ್ವಚ್ಚಗೊಳಿಸಿ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಇಲ್ಲಿ ಬಲ್ಲಾಳೇಶ್ವರ ದೇವಸ್ಥಾನವಿದ್ದು ದೇವರ ಅನುಗ್ರಹ ಹಾಗೂ ಎಲ್ಲ ಯತಿವರ್ಯರ ಆಶೀರ್ವಾದಿಂದ ಇಲ್ಲಿನ ಎಲ್ಲಾ ಅಚ್ಚುಕಟ್ಟುದಾರರ ಸಹಕಾರದೊಂದಿಗೆ ಅಭಿವೃದ್ಧಿಪಡಿಸುವುದಾಗಿ ತಿಳಿಸಿದರು.

ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೆಗೌಡ ಮಾತನಾಡಿ, ಪ್ರತೀ ವರ್ಷದಂತೆ ಈ ವರ್ಷವೂ ಗುರುಗಳು ಹಾಗೂ ಗ್ರಾಮಸ್ಥರು ಸೇರಿದಂತೆ ಸರ್ವರ ಸಮ್ಮುಖದಲ್ಲಿ ಇಂದು ಬಾಗಿನ ಅರ್ಪಣೆಯಾಗಿದೆ. ನಮ್ಮ ಹಿರಿಯರು ಅಂದು ಸ್ಥಾಪನೆ ಮಾಡಿರುವ ಕೆರೆಯಿದು. ಈ ಕೆರೆಗೆ ಪ್ರಕೃತಿಯೇ ಹೆಚ್ಚು ಸಹಾಯ ಮಾಡಿದೆ. ಇಂತಹ ನೈಸರ್ಗಿಕ ಮೂಲ ಹೊಂದಿದ ಕೆರೆ ಇದಾಗಿದೆ. ರೈತರು ಈ ಕೆರೆಯ ಸ್ವಚ್ಚತೆಯನ್ನು ಕಾಪಾಡಿಕೊಳ್ಳಬೇಕು. ಈ ನೀರನ್ನು ಸರಿಯಾಗಿ ಬಳಕೆ ಮಾಡಿದರೆ ಐದು ಹದ ಮಾಡಬಹುದು. ಆದರೆ ಇದು ಎರಡೇ ಹದವಾಗಿದೆ. ಆದ್ದರಿಂದ ಇದು ನಮ್ಮ ಜೀವಾಳ ಮುಂದಿನ ದಿನಗಳಲ್ಲಿ



ಅಚ್ಚುಕಟ್ಟುದಾರರು ಜಾಗರೂಕತೆಯಿಂದ ನೋಡಿಕೊಳ್ಳಬೇಕು. ನೀರಾವರಿ ಇಲಾಖೆಯವರು ಚಾನಲ್ ಹಾಗೂ ಕೆರೆಯನ್ನು ಪ್ರತಿ ತಿಂಗಳಿಗೊಮ್ಮೆ ಸ್ವಚ್ಚತೆ ಮಾಡಬೇಕು. ಕುಡಿಯುವ ನೀರಿನ ಸೌಲಭ್ಯ ಸುತ್ತಮುತ್ತಲ ಜನರಿಗೆ ಈ ಕೆರೆಯಿಂದ ಒದಗಿಸಲಾಗಿದ್ದು, ನೀರಾವರಿಗೆ ಇದನ್ನು ಬಳಸಿಕೊಳ್ಳುವುದರಿಂದ ಈ ಕೆರೆಯನ್ನು ಅಭಿವೃದ್ಧಿಪಡಿಸುವಂತೆ ಶಾಸಕರನ್ನು ಕೋರಿದರು.

ಬಸವ ತತ್ವ ಪೀಠದ ಪೀಠಾಧ್ಯಕ್ಷರಾದ ಶ್ರೀ ಡಾ.ಬಸವ ಮರುಳಸಿದ್ಧ ಸ್ವಾಮೀಜಿ ಮಾತನಾಡಿ ನಿರ್ವಾಣ ಸ್ವಾಮಿಗಳ ಆಶೀರ್ವಾದದಿಂದ ನಿರ್ಮಾಣವಾಗಿರುವ ಅಯ್ಯನಕೆರೆ ಈ ಕೆರೆಕಟ್ಟೆ ಒಡೆಯುತ್ತಿರುವ ಸಂದರ್ಭದಲ್ಲಿ ತಮ್ಮ ಜೀವವನ್ನು ಪಣಕಿಟ್ಟು ಪವಾಡ ಸದೃಶರಾಗಿ ಬದುಕಿ ಈ ಕೆರೆಯನ್ನು ಉಳಿಸಿರುವುದರಿಂದ ಈ ಭಾಗದ ಸುತ್ತಮುತ್ತಲಿನ ಎಲ್ಲಾ ಜನರ ಜೀವನಾಡಿಯಾಗಿದೆ. ಕೆರೆಯನ್ನು ಆಶೀರ್ವದಿಸಿದ ಕಾರಣಕ್ಕೆ ಇದಕ್ಕೆ ಅಯ್ಯನಕೆರೆ ಎಂಬ ಹೆಸರು ಬಂದಿದೆ ಎಂದರು.

ಎಲ್ಲಿ ನೀರಿನ ಸೌಕರ್ಯ ಇದೆಯೋ ಅಲ್ಲಿ ವಿಶೇಷವಾಗಿ ನಾಗರಿಕತೆಗಳು ಬೆಳೆದಿವೆ. ಆ ಹಿನ್ನೆಲೆಯಲ್ಲಿ ಸಖರಾಯಪಟ್ಟಣ ಸುತ್ತಮುತ್ತ ಒಂದಿಷ್ಟು ಸಮೃದ್ಧಿಯಾಗಿರುವ ಜನರು ಇದ್ದಾರೆ ಎಂಬುದಕ್ಕೆ ಇಂತಹ ಅಯ್ಯನಕೆರೆಯೇ ಕಾರಣ. ಕೆರೆಯನ್ನು ಅವಲಂಬಿಸಿ ಸಾವಿರಾರು ಜೀವರಾಶಿಗಳು ವಾಸವಾಗಿರುವುದು ನಾವು ಗಮನಿಸಬಹುದು ಇದರಿಂದ ಜೀವ ವೈವಿಧ್ಯತೆ, ಪ್ರಾಕೃತಿಕ ಸಂಪನ್ಮೂಲ ಹೆಚ್ಚಳವಾಗಿರುವುದನ್ನು ನಾವು ಮರೆಯಬಾರದು ಎಂದರು.

ಮುಖಂಡ ಮಹಡಿ ಮನೆ ಸತೀಶ ಸ್ವಾಗತಿಸಿದ ಈ ಕಾರ್ಯಕ್ರಮದಲ್ಲಿ ಹುಲಿಕೆರೆ ಶ್ರೀ ವೀರಪ್ಪ ಲಿಂಗ ಸ್ವಾಮೀಜಿ, ಶ್ರೀ ಕಡೂರಿನ ಜ್ಞಾನಪ್ರಭ ಸಿದ್ಧರಾಮ ದೇಶೀಕೇಂದ್ರ ಸ್ವಾಮೀಜಿ, ಶ್ರೀ ಶಿವಯೋಗಿ ಶಂಕರ ಸ್ವಾಮೀಜಿ, ಗ್ರಾ.ಪಂ. ಅಧ್ಯಕ್ಷರಾದ ರಾಜಮ್ಮ, ಮಂಗಳ ಹೆಚ್.ಡಿ.ತಮ್ಮಯ್ಯ, ಹೆಚ್.ಪಿ.ಮಂಜೇಗೌಡ, ಪ್ರವೀಣ್ ಮತ್ತಿತರ ಮುಖಂಡರು ಭಾಗವಹಿಸಿದ್ದರು.

## ಆನೆ ದೊಡ್ಡಿ ನಿರ್ಮಾಣಕ್ಕೆ ಕೇಂದ್ರ ಸಚಿವರಿಗೆ ಸಂಸದರ ಮನವಿ

**ಚಿಕ್ಕಮಗಳೂರು, ಜು 30:** ಜಿಲ್ಲೆಯಲ್ಲಿ ಇತ್ತೀಚೆಗೆ ಐವರಿಗೂ ಹೆಚ್ಚು ಮಂದಿ ಸಾವನ್ನಪ್ಪಿದ್ದು ಕಳೆದ ಒಂದು ವಾರದಲ್ಲಿ ದಿನನಿತ್ಯ ಮಾನವ ಪ್ರಾಣಿ ಸಂಘರ್ಷದಿಂದ ಜನ ಜೀವನಕ್ಕೆ ಬೆದರಿಕೆ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ತಮ್ಮ ಲೋಕಸಭಾ ಕ್ಷೇತ್ರವಾದ ಚಿಕ್ಕಮಗಳೂರಿನಲ್ಲಿ ಕಾಡುಪ್ರಾಣಿಗಳ ಅದರಲ್ಲೂ ಆನೆದಾಳಿಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಬೇಕಾಗಿದೆ ಎಂದು ಉಡುಪಿ–ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಕೇಂದ್ರ ಅರಣ್ಯ ಮತ್ತು ಪರಿಸರ ಸಚಿವ ಭೂಪೇಂದ್ರ ಯಾದವ್ ಅವರನ್ನು ಭೇಟಿ ಮಾಡಿ ಖುದ್ದು ಮನವಿ ಸಲ್ಲಿಸಿದರು.

ಆನೆಗಳ ಸಂತತಿ ವೇಗವಾಗಿ ಬೆಳೆಯುತ್ತಿದ್ದು, ಕಾಡಾನೆಗಳು ರೈತಾಪಿ ವರ್ಗದ ಬೆಳೆ ಮಾತ್ರವಲ್ಲ, ಕೃಷಿ ಕಾರ್ಯದಲ್ಲಿ ನಿರತರಾದ ರೈತರನ್ನು ಹತ್ಯೆ ಮಾಡುತ್ತಿವೆ. ಇಂತಹ ಸಂಕಷ್ಟ ಸಂದರ್ಭದಲ್ಲಿ ಕೇಂದ್ರ, ರಾಜ್ಯ ಸರ್ಕಾರಗಳು ಒಟ್ಟಾಗಿ ಆನೆಗಳ ನಿಯಂತ್ರಣ ಮತ್ತು ಆನೆ ದೊಡ್ಡಿಗಳ ನಿರ್ಮಾಣದ ಶಾಶ್ವತ ಪರಿಹಾರದ ಯೋಜನೆ ರೂಪಿಸಬೇಕೆಂದು ಮನವಿಯಲ್ಲಿ ಉಲ್ಲೇಖಿಸಿದ್ದಾರೆ.

# ಹದಿಹರೆಯದ ಮಕ್ಕಳಿಗೆ ಸರಿಯಾದ ಮಾರ್ಗದರ್ಶನ ಶಿಕ್ಷಣ ಅಗತ್ಯ : ಮಂಜುಳ



**ಚಿಕ್ಕಮಗಳೂರು :** ಕಾಯ, ವಾಚ, ಮನಸಾ ಪ್ರಾಚಾರ್ಯರು ಮತ್ತು ಉಪನ್ಯಾಸಕರು ಸೇವೆ ಸಲ್ಲಿಸಿ ವೃತ್ತಿ ಇರುವುದೇ ಮಕ್ಕಳ ಅಭಿವೃದ್ಧಿಗಾಗಿ–ಶ್ರೇಯಸ್ಸಿಗಾಗಿ ಅನ್ನುವುದನ್ನು ಅರ್ಥಮಾಡಿಕೊಂಡು ಶ್ರಮವಹಿಸಿದರೆ ಮಕ್ಕಳಲ್ಲಿರುವ ಪ್ರತಿಭೆ ಸಹಕಾರಿ ಎಂದು ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಉಪನಿರ್ದೇಶಕರಾದ ಮಂಜುಳ.ಕೆ ಅಭಿಪ್ರಾಯಿಸಿದರು.

ಅವರು ಇಂದು ಜೆವಿಎಸ್ ಕಾಲೇಜು ಕುವೆಂಪು ಸಭಾಂಗಣದಲ್ಲಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ನಿವೃತ್ತ ಪ್ರಾಚಾರ್ಯರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಹದಿಹರೆಯದ ಮಕ್ಕಳಿಗೆ ಸರಿಯಾದ ಮಾರ್ಗದರ್ಶನದ ಶಿಕ್ಷಣ ಕೊಡುವ ಜವಾಬ್ದಾರಿ ಕಾಲೇಜುಗಳಿಗಿದೆ. ವಿದ್ಯಾಪ್ರತಿಭೆ, ಕ್ರೀಡಾ, ಸಾಂಸ್ಕೃತಿಕ ಪ್ರತಿಭೆಗಳೂ ಸೇರಿದಂತೆ ಎಲ್ಲವೂ ಹೊರಬರಲು ಕಾರಣವಾಗಿ ಪ್ರತಿಭಾ ಶಕ್ತಿಯಾಗಿ ರೂಪುಗೊಳ್ಳುತ್ತದೆ, ಪ್ರೇರಣೆಯಾಗುತ್ತದೆ ಎಂದು ಹೇಳಿದರು.

ಕಳೆದ ಎರಡು ವರ್ಷದಲ್ಲಿ ದ್ವಿತೀಯ ಪಿಯುಸಿಯಲ್ಲಿ ವಾಣಿಜ್ಯ, ಕಲಾ, ವಿಜ್ಞಾನ ವಿಭಾಗದಲ್ಲಿ ಶಿಕ್ಷಣ ಪಡೆದು ಅತೀ ಹೆಚ್ಚು ಅಂಕ ಪಡೆದ ಜಿಲ್ಲಾ ಮಟ್ಟ, ತಾಲ್ಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿ–ವಿದ್ಯಾರ್ಥಿನಿಯರನ್ನು ಆಹ್ವಾನಿಸಿ ಪ್ರೋತ್ಸಾಹಧನದೊಂದಿಗೆ ಗೌರವಿಸುವ ಕೆಲಸವನ್ನು ಪ್ರಾಚಾರ್ಯರ ಸಂಘ ಮಾಡುತ್ತಿರುವುದು ಅಭಿನಂದನೀಯ ಎಂದರು.

ಕಳೆದ 35 ವರ್ಷಗಳಿಂದ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಪ್ರಾಚಾರ್ಯರನ್ನು ಕರೆದು ಜಿಲ್ಲಾಮಟ್ಟದಲ್ಲಿ ಗೌರವಿಸುತ್ತಿರುವುದು ಅವರಿಗೆ ತೃಪ್ತಿ ನೀಡಿದೆ ಎಂದು ಭಾವಿಸುತ್ತೇನೆ ಎಂದು ತಿಳಿಸಿದರು.

ಶಿಕ್ಷಣ ಕ್ಷೇತ್ರ ಅತ್ಯಂತ ಪವಿತ್ರವಾಗಿದ್ದು, ಸಮಾಜದ ಒಳಿತಿಗೆ ಈ ನಮ್ಮ ಕ್ಷೇತ್ರ ಪ್ರಮುಖ ಪಾತ್ರವಹಿಸಬೇಕು. ಶಿಕ್ಷಕರು, ಉಪನ್ಯಾಸಕರು, ಪ್ರಾಚಾರ್ಯರು ಸನ್ನಡತೆಯಿಂದ ಸದ್ಗುಣ, ಸಹನೆಯಿಂದ ವರ್ತಿಸಿದರೆ ಸಮಾಜವೂ ಕಲಿಯುತ್ತದೆ ಎಂಬುದನ್ನು ನಂಬಿದ್ದೇನೆ ಎಂದು ಹೇಳಿದರು.

### ಬಿ.ಎಚ್. ರಸ್ತೆಯ ಅವೈಜ್ಞಾನಿಕ ಕಾಮಗಾರಿ

# ಸಾಲುಮರದಮ್ಮ ದೇವಸ್ಥಾನದ ಆವರಣಕ್ಕೆ ಚರಂಡಿ ನೀರು



**ತರೀಕೆರೆ:** ಪಟ್ಟಣದಲ್ಲಿ ನಡೆಯುತ್ತಿರುವ ಬಿ.ಎಚ್. ರಸ್ತೆಯ ಅಗಲೀಕರಣ ಕಾಮಗಾರಿ ನಡೆಯುತ್ತಿದ್ದು, ಕಾಮಗಾರಿಯ ನಿರ್ವಹಣೆ ಮುಂಜಾಗ್ರತೆ ಕೊರತೆಯಿಂದ ಚರಂಡಿಯಲ್ಲಿ ಹರಿವ ನೀರು ನಿಂತು ಗ್ರಾಮ ದೇವತೆ ಶ್ರೀ ಸಾಲುಮರದಮ್ಮ ದೇವಸ್ಥಾನದ ಮುಂಭಾಗದ ಆವರಣದಲ್ಲಿ ಸುಮಾರು ಎರಡು ಅಡಿ ನೀರು ನಿಂತಿದೆ.

ನರಗರದಲ್ಲಿ ಕಳೆದೆರಡು ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಚರಂಡಿಯಲ್ಲಿ ಅತಿಯಾದ ನೀರು ಹರಿದುಬರುತ್ತಿದೆ. ಇದರಿಂದ ರಸ್ತೆಯಲ್ಲಿ ಬಾರಿ ನೀರು ನಿಂತು ವಾಹನಗಳ ಸಂಚಾರಕ್ಕೂ ಸಾಕಷ್ಟು ತೊಂದರೆ–ಯಾಗುತ್ತಿದೆ.

ದೇವಸ್ಥಾನದ ಆವರಣವೂ ಕಲುಷಿತಗೊಂಡು ದೇವಸ್ಥಾನಕ್ಕೆ ಬರುವ ಭಕ್ತಾಧಿಗಳು ಮೂಗು ಮುಚ್ಚುವ ವಾತಾವರಣ ಸೃಷ್ಟಿಯಾಗಿದ್ದು, ಸಂಬಂಧಿಸಿದ ಜನಪ್ರತಿನಿಧಿ ಹಾಗೂ ಅಧಿಕಾರಿಗಳು ಸೂಕ್ತಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಕಾಯುತ್ತಾ ಕೂರದೇ ಅವಕಾಶಗಳ ನೀವೇ ಸೃಷ್ಟಿಸಿಕೊಳ್ಳಿ : ಜೆ.ಬಿ. ವಿನಯ್‌ಕುಮಾರ್ ಕರೆ

**ದಾವಣಗೆರೆ:** ರಾಜಕಾರಣ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲಿಯೂ ಯಾರೂ ಅವಕಾಶ ಕೊಡುವುದಿಲ್ಲ. ಅವಕಾಶಗಳನ್ನು ನಾವೇ ಸೃಷ್ಠಿ ಮಾಡಿಕೊಳ್ಳಬೇಕು. ಅವಕಾಶ ಅನ್ನೋದು ನಮ್ಮ ಸುತ್ತಮುತ್ತ ಇರುತ್ತದೆ. ವ್ಯಕ್ತಿತ್ವ ಆಕರ್ಷಕವಾಗಿದ್ದರೆ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ ಎಂದು ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕರು ಹಾಗೂ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅವರು ಕರೆ ನೀಡಿದರು.

ಹೊನ್ನಾಳಿ ಪಟ್ಟಣದ ಹಿರೇಕಲ್ಮಠದಲ್ಲಿ ಏರ್ಪಡಿಸಿದ್ದ ಹೊನ್ನಾಳಿ – ನ್ಯಾಮತಿ ಅವಳಿ ತಾಲೂಕಿನ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಯಲ್ಲಿ ಶೇಕಡಾ 90ಕ್ಕೂ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಾನು ಲೋಕಸಭೆ ಚುನಾವಣೆಗೆ ಸ್ಪರ್ಧೆ ಮಾಡಿದ ಬಳಿಕ ಎಲ್ಲಾ ಕಾರ್ಯಕ್ರಮಗಳಿಗೂ ರಾಜ್ಯಾದ್ಯಂತ ಆಹ್ವಾನ ನೀಡುತ್ತಿದ್ದಾರೆ. ಮೊದಲೆಲ್ಲಾ ಈ ಕಾರ್ಯಕ್ರಮಕ್ಕೆ ಕರೆಯುತ್ತಿರಲಿಲ್ಲ ಎಂದು ತಿಳಿಸಿದರು.

ಇಂದು ದೇಶದಲ್ಲಿ ಅಸಮಾನತೆ ಇದೆ. ನೀವೆಲ್ಲರೂ ಅಸಮಾನತೆ ಸಂತ್ರಸ್ತರು. ನಿಮ್ಮೊಳಗಿರುವ ಸಾಮರ್ಥ್ಯ ಹೊರ ಬರಬೇಕು. ನಮ್ಮೊಳಗೆ ವಿಶ್ವವಿದೆ, ಸಾಮರ್ಥ್ಯ ಇದೆ. ಇದನ್ನು ಅರ್ಥ ಮಾಡಿಕೊಂಡು ಮುನ್ನಡೆಯಬೇಕು ಎಂದು ವಿವೇಕಾನಂದ ಅವರು ಹೇಳಿದ್ದರು. ಅದರಂತೆ ನಾವು ಸಾಮರ್ಥ್ಯ, ಜ್ಞಾನ, ಮಾನವೀಯ ಗುಣಗಳು, ಆಕರ್ಷಕ ವ್ಯಕ್ತಿತ್ವ ರೂಢಿಸಿಕೊಂಡರೆ ಸಾಧನೆ ಕಷ್ಟವಾಗದು.



ಸಮಸ್ಯೆಗಳ ಸುಳಿಯಲ್ಲಿ ಸಿಲುಕಿ ಇವತ್ತಿನ ಕಷ್ಟ ಜೀವನದ ದೊಡ್ಡ ಕಷ್ಟ ಎಂದು ನೀವೆಲ್ಲರೂ ನೋವು ಅನುಭವಿಸುತ್ತಿದ್ದೀರಾ. ಧೈರ್ಯದಿಂದ ಹೊರಬರಬೇಕು. ಆಗ ಅರ್ಥ ಯಶಸ್ಸು ಖಂಡಿತ ಸಿಗುತ್ತದೆ ಎಂದು ಸಲಹೆ ನೀಡಿದರು.

ಇನ್‌ಸೈಟ್ಸ್ ಐಎಸ್ ಸಂಸ್ಥೆ ಹುಟ್ಟು ಹಾಕಿ 11 ವರ್ಷಗಳಾಗಿವೆ. 1500 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಐಎಎಸ್ ಮಾಡಿದ್ದಾರೆ. ಜಮ್ಮು ಕಾಶ್ಮೀರ, ಹೈದರಾಬಾದ್, ಲಕ್ನೋ, ಬೆಂಗಳೂರಿನಲ್ಲಿಯೂ ನಮ್ಮ ಸಂಸ್ಥೆ ಇದೆ. ಬೆಂಗಳೂರಿನಲ್ಲಿ ಆರು ಸಾವಿರ ವಿದ್ಯಾರ್ಥಿಗಳು ಈಗ ತರಬೇತಿ ಪಡೆಯುತ್ತಿದ್ದಾರೆ. ಕರ್ನಾಟಕದಿಂದ 30 ವಿದ್ಯಾರ್ಥಿಗಳು ಐಎಎಸ್ ಆದರೆ ಅದರಲ್ಲಿ 25 ರಿಂದ 27 ವಿದ್ಯಾರ್ಥಿಗಳು ನಮ್ಮ ಸಂಸ್ಥೆಯವರೇ ಇದ್ದಾ–ರೆ. ಯಾವುದೋ ಒಂದು ತರಬೇತಿ ನಮ್ಮಲ್ಲಿಯೇ ಪಡೆದಿರುತ್ತಾರೆ. ಇದು ನಮ್ಮ ಸಂಸ್ಥೆಯ ಹೆಗ್ಗಳಿಕೆ ಎಂದು ತಿಳಿಸಿದರು.

ಹತ್ತನೇ ತರಗತಿ ಓದಿದವರು ಐಎಎಸ್ ಮಾಡಬೇಕೆಂಬ ಕನಸು ಹೊಂದಿದ್ದರೆ ಸೈನ್ಸ್ ಆಯ್ದುಕೊಳ್ಳಿ. ಪುಸ್ತಕ ಮತ್ತು ಪ್ರತಿನಿತ್ಯ ಎದ್ದ ತಕ್ಷಣ ಕನ್ನಡ ಹಾಗೂ ಇಂಗ್ಲೀಷ್ ಪತ್ರಿಕೆ ಓದುವ ಹವ್ಯಾಸ ರೂಢಿಸಿಕೊಳ್ಳಿ. ಪುಸ್ತಕ ಓದಬೇಕೆಂದರೆ ನಮ್ಮೂರಲ್ಲಿ ಪುಸ್ತಕ ಓದುವ ಸಂಸ್ಕೃತಿ ಇರಬೇಕು. ಶಿವಮೊಗ್ಗ ಸಾಹಿತ್ಯದ ತವರು. ಹೊನ್ನಾಳಿ ಹತ್ತಿರವಿದ್ದರೂ ಯಾಕೆ ಕಡಿಮೆಯಾಗಿದೆ ಎಂಬ ಪ್ರಶ್ನೆ ಕಾಡುತ್ತಿದೆ. ಪುಸ್ತಕಗಳ ಜೊತೆಗೆ ಬಾಂಧವ್ಯ ಬೆಳೆದರೆ ಓದುವ ಹವ್ಯಾಸ ಬೆಳೆದೇ ಬೆಳೆಯುತ್ತದೆ. ಪುಸ್ತಕದ ಮೇಲೆ ಪ್ರೀತಿ ಓದು ಬೆಳೆದರೆ ವ್ಯಕ್ತಿತ್ವದಲ್ಲಿ ಅಗಾಧ ಜ್ಞಾನ ಬರುತ್ತದೆ. ಸಂಸ್ಕೃತಿ, ಮಾನವೀಯ ಗುಣ, ಜ್ಞಾನ ಸಂಪಾದನೆಯೂ ಆಗುತ್ತದೆ ಎಂದು ಹೇಳಿದರು.

ನನ್ನ ಮೇಲೆ ಒಂದೂ ಎಫ್ ಐ ಆರ್ ಇಲ್ಲ. ನನ್ನ ವಿರುದ್ಧ ಯಾವುದೇ ಋಣಾತ್ಮಕ ಆರೋಪ ಇಲ್ಲ. ಕಪ್ಪು ಚುಕ್ಕೆಗಳಿಲ್ಲ. ನನ್ನ ತಂದೆ ಹೇಳಿದ್ದ ಮಾತು ಈಗಲೂ ನೆನಪಿದೆ, ಊರಿಗೆ ಕೆಟ್ಟ ಹೆಸರು ತರಬೇಡ, ಏನೇ ಕೆಲಸ ಮಾಡು, ಒಳ್ಳೆಯನಾಗಿರು ಎಂದಿದ್ದರು. ನಾನು ದೊಡ್ಡ ಮನುಷ್ಯನಾಗುವುದು ಇಷ್ಟವಿರಲಿಲ್ಲ. ಆದ್ರೆ, ಒಳ್ಳೆಯವನಾಗಿ ಬಾಳಬೇಕು ಎಂಬ ಆಸೆ ಅವರಲ್ಲಿ ಇತ್ತು. ಅವರ ಮಾತಿನಂತೆ ನಡೆದೆ. ಹಾಗಾಗಿ ಸಾಧನೆ ಮಾಡಲು ಸಾಧ್ಯವಾಯಿತು ಎಂದು ಹೇಳಿದರು.

ಪಿಯುಸಿ, ಪದವಿ ಓದಲು ಒಳ್ಳೆಯ ಶಿಕ್ಷಣ ಸಂಸ್ಥೆ ಆಯ್ಕೆ ಮಾಡಿಕೊಳ್ಳಿ. ಮೆಡಿಕಲ್, ಎಂಜಿನಿಯರಿಂಗ್ ಮಾಡಿ. ಇದೇ ಕ್ಷೇತ್ರದಲ್ಲಿ ಹೋಗುವ ಆಸೆ ಇರಲಿ. ಅವಕಾಶಗಳು ಸಿಕ್ಕಾಗ ಬಿಡಬೇಡಿ. ಈಗಿನ ಮಕ್ಕಳಿಗೆ ಹವ್ಯಾಸಗಳೇ ಇಲ್ಲ. ಎಸ್. ಎಸ್. ಎಲ್. ಸಿ, ಪಿಯುಸಿ ಆದ ಬಳಿಕ ಪೋಷಕರು ಹವ್ಯಾಸಗಳನ್ನು ಬಿಡಿಸಿಬಿಡುತ್ತಾರೆ. ಇದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು.

ನನಗೆ ಎಂಪಿ ಆಗಬೇಕೆಂಬ ಕನಸು ಇತ್ತು. ಜನಸೇವೆ ಮಾಡಬೇಕೆಂಬ ಹೆಬ್ಬಯಕೆ ಇತ್ತಾದರೂ ಸಾಧ್ಯವಾಗಲಿಲ್ಲ. ಹಾಗೆಂದು ನಾನು ಸುಮ್ಮನಾಗಿಲ್ಲ. ರಾಜ್ಯಾದ್ಯಂತ ಓಡಾಡುತ್ತಿದ್ದೇನೆ. ಜನರಲ್ಲಿ ಸ್ವಾಭಿಮಾನದ ಕಿಚ್ಚು ಬಡಿದೆಬ್ಬಿಸುವ ಕೆಲಸ ಮಾಡುತ್ತಿರುವೆ. ಉತ್ತಮ ಪ್ರತಿಕ್ರಿಯೆಯೂ ವ್ಯಕ್ತವಾಗುತ್ತಿದೆ. ಸವಾಲುಗಳು ಎದುರಾಗುವುದು ಸಹಜ. ಧೈರ್ಯವಾಗಿ ಮುನ್ನಡೆಯುತ್ತೇನೆ, ಸಾಧಿಸಿಯೇ ತೀರುತ್ತೇನೆ ಎಂಬ ಅಚಲವಾದ ವಿಶ್ವಾಸ, ದೃಢ ನಿಶ್ಚಯ ನಿಮ್ಮಲ್ಲಿದ್ದರೆ ಎಲ್ಲವನ್ನೂ ಸಾಧ್ಯವಾಗಿ ಸಬಹುದು ಎಂದು ಜಿ. ಬಿ. ವಿನಯ್ ಕುಮಾರ್ ಹೇಳಿದರು.

ಹಿರೇಕಲ್ಮಠದ ಶ್ರೀ ಚನ್ನಮಲ್ಲಿಕಾರ್ಜುನ ಸ್ವಾಮೀಜಿ ಅವರು ಸಾನಿಧ್ಯ ವಹಿಸಿದ್ದರು. ವೀರಶೈವ ಲಿಂಗಾಯತ ಸಮಾಜದ ಮುಖಂಡ ಪಿ. ವೀರೇಶ್, ಪಂಚಮಸಾಲಿ ಸಮಾಜದ ಹೊನ್ನಾಳಿ ತಾಲೂಕು ಘಟಕದ ಅಧ್ಯಕ್ಷ ವೀರಣ್ಣ, ಮಡಿವಾಳ ಮಾಚಿದೇವ ಸಮಾಜದ ಅಧ್ಯಕ್ಷ ಎಂ. ಆರ್. ಮಹಾಂತೇಶ್, ಬಂಜಾರ ಸಮಾಜದ ಅಧ್ಯಕ್ಷ ಅಂಜುನಾಯ್ಕ, ಮುಸ್ಲಿಂ ಸಮಾಜದ ಮುಖಂಡ ಅಮಾನ್ ಸಾಬ್, ಪ್ರೊಫೆಸರ್ ಹೆಚ್. ಪಾಂಡುರಂಗ, ಡಿ. ಸಿ. ಪಾಟೀಲ್, ಉಬೇದ್ ಉಲ್ಲಾ ಸಾಬ್, ಹಾಲುಮತ ಸಮಾಜದ ವೀರಣ್ಣ ಮತ್ತಿತರರು ಹಾಜರಿದ್ದರು.

ಸಮಾರಂಭದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಲಾಯಿತು.

## ಗರ್ಭಿಣಿ ಪತ್ನಿಯ ಕೊಂದು, ಶವದೊಂದಿಗೆ 2 ದಿನ ಕಳೆದ ಹಂತಕ ಬಂಧನ

**ಬೆಂಗಳೂರು:** ಗರ್ಭಿಣಿ ಪತ್ನಿಯ ಕೊಂದ ಆರೋಪದ ಮೇಲೆ ಉತ್ತರಪ್ರದೇಶ ಮೂಲಕ ವ್ಯಕ್ತಿಯೊಬ್ಬನನ್ನು ಪೊಲೀಸರು ಗುರುವಾರ ಬಂಧನಕ್ಕೊಳಪಡಿಸಿದ್ದಾರೆ.

ಹೆಣ್ಣೂರು ಪೊಲೀಸ್ ಠಾಣಾ ವ್ಯಾಪ್ತಿಯ ಥಣಿಸಂದ್ರದಲ್ಲಿ ಘಟನೆ ನಡೆದಿದೆ. ಮೃತ ಮಹಿಳೆಯನ್ನು ಸುಮನ್ ಎಂದು ಗುರ್ತಿಸಲಾಗಿದೆ. ಪತ್ನಿ ಕೊಂದ ಆರೋಪದ ಮೇಲೆ ಶಿವಂ ಸಹಾನೆ ಎಂಬಾತನನ್ನು ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.

ಆರೋಪಿ ಶಿವಂ ಉತ್ತರ ಪ್ರದೇಶದ ಕುಶಿನಗರದ ಮೂಲದವನರಾಗಿದ್ದು, ಆರು ತಿಂಗಳ ಹಿಂದಷ್ಟೇ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದ. ಮದ್ಯವ್ಯಸನಿಯಾಗಿದ್ದ ಶಿವಂ ಆಗಾಗ್ಗೆ ಪತ್ನಿಯೊಂದಿಗೆ ಜಗಳವಾಡುತ್ತಿದ್ದ ಎಂದು ತಿಳಿದುಂದಿದೆ.

ಸೋಮವಾರ ನಡೆದ ಜಗಳದ ಸಮಯದಲ್ಲಿ, ಶಿವಂ, ಸುಮನ್‌ಗೆ ಕಪಾಳಕ್ಕೆ ಹೊಡೆದಿದ್ದು, ನಂತರ ಪತ್ನಿಯಿಂದ ಶಿವಂ ಪ್ರತ್ಯೇಕವಾಗಿ ಮಲಗಿದ್ದಾನೆ. ರಾತ್ರಿ ಮಹಿಳೆ ಸಾವನ್ನಪ್ಪಿದ್ದು, ಇದನ್ನು ಅರಿಯದ ಶಿವಂ ಮಂಗಳವಾರ ಬೆಳಿಗ್ಗೆ ಕೆಲಸಕ್ಕೆ ಹೋಗಿದ್ದಾನೆ. ಮನೆಗೆ ಹಿಂದಿರುಗಿದಾಗ ಆಕೆ ಸಾವನ್ನಪ್ಪಿರುವುದು ತಿಳಿದುಬಂದಿದೆ. ಆದರೆ, ಪೊಲೀಸರಿಗೆ ಈ ಬಗ್ಗೆ ಮಾಹಿತಿ ನೀಡುವ ಬದಲು ಶವದೊಂದಿಗೆ 2 ದಿನ ಕಾಲ ಕಳೆದಿದ್ದಾನೆ.

ಬಳಿಕ ಮೃತದೇಹವನ್ನು ವಿಲೇವಾರಿ ಮಾಡಲು ಯೋಚಿಸಿದ್ದಾನೆ. ಆದರೆ, ಸಿಕ್ಕಿಬೀಳುವ ಭಯದಿಂದ ಆಲೋಚನೆನಯ್ನು ಕೈಬಿಟ್ಟಿದ್ದಾನೆ. ಬುಧವಾರ ಬೆಳಿಗ್ಗೆ ಮನೆಯಿಂದ ದುರ್ವಾಸನೆ ಬರುವುದನ್ನು ಕಂಡ ಮನೆ ಮಾಲೀಕ ಮಹೇಶ್ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಮಹಿಳೆ ಮೂರು ದಿನಗಳ ಹಿಂದೆ ಸಾವನ್ನಪ್ಪಿದ್ದು, ದೇಹದ ಮೇಲೆ ಯಾವುದೇ ಬಾಹ್ಯಗಾಯಗಳಿಲ್ಲ. ಆದರೆ, ಮೂಗಿನಿಂದ ರಕ್ತಸ್ರಾವವಾಗಿದ್ದು, ಬಲವಾದ ಹೊಡೆತದಿಂದಾಗಿರಬಹುದು ಎಂದು ಅಧಿಕಾರಿಗಳು ಹೇಳಿದ್ದಾರೆ. ಪ್ರಕರಣ ಸಂಬಂಧ ಶಿವಂ ವಿರುದ್ಧ ಬಿಎನ್‌ಎಸ್ 103(1) ಅಡಿಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ.


# ಸತ್ಯದ ಆಚರಣೆ ಮಾಡುವವರ ಬದುಕು ಎತ್ತರದಲ್ಲಿರುತ್ತದೆ

## ಹೊಳೆಸಿರಿಗೆರೆ : ಸತ್ಯನಾರಾಯಣ ಪೂಜೆಯ ಧಾರ್ಮಿಕ ಸಭೆಯಲ್ಲಿ ರಟ್ಟೀಹಳ್ಳಿ ಸ್ವಾಮೀಜಿ

**ಮಲೇಬೆನ್ನೂರು :** ಮಹಿಳೆ ಭೂಮಿ ಇದ್ದಂತೆ, ಭೂಮಿಯಂತೆ ಅವಳಿಗೂ ಎಲ್ಲವನ್ನು ಸಹಿಸುವ ಶಕ್ತಿ ಇದೆ. ಹಾಗಾಗಿಯೇ ಅವಳು ಉಪವಾಸ, ವ್ರತ, ಪೂಜೆ, ಆಚರಣೆಗಳ ಮೂಲಕ ನಮಗೆಲ್ಲಾ ಒಳ್ಳೆಯದನ್ನೇ ಬಯಸುತ್ತಾಳೆ ಎಂದು ರಟ್ಟೀಹಳ್ಳಿ ಕಬ್ಬಿಣಕಂತಿ ಮಠದ ಶ್ರೀ ಶಿವಲಿಂಗ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಹೊಳೆಸಿರಿಗೆರೆ ಗ್ರಾಮದ ಶ್ರೀ ಕಲ್ಲೇಶ್ವರ ಸಮುದಾಯ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಬುಧವಾರ ಸಾಮೂಹಿಕ ಸತ್ಯನಾರಾಯಣ ಪೂಜೆ ಅಂಗವಾಗಿ ಹಮ್ಮಿಕೊಂಡಿದ್ದ ಧಾರ್ಮಿಕ ಸಮಾರಂಭದ ದಿವ್ಯಸಾನ್ನಿಧ್ಯವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಆಷಾಢ ಮಾಸದಲ್ಲಿ ಪೂಜೆಗಳು ಮತ್ತು ಶ್ರಾವಣ ಮಾಸದಲ್ಲಿ ವ್ರತಾಚರಣೆಗಳು ಹೆಚ್ಚು ನಡೆಯಲಿದ್ದು ವಾರಕೊಮ್ಮೆ ಉಪವಾಸ ವ್ರತ ಮಾಡುವುದರಿಂದ ಮನಸ್ಸಿಗೆ ಮತ್ತು ಶರೀರಕ್ಕೆ ರೋಗ ನಿರೋಧಕ ಶಕ್ತಿ ಹೆಚ್ಚಾಗಿ ಆಯುಸ್ಸು ವೃದ್ಧಿಯಾಗಲಿದೆ. ವಿಷ್ಣುವಿನ ಸ್ವರೂಪ ಸತ್ಯನಾರಾಯಣನಾಗಿದ್ದು ಅವನ ಪೂಜೆಯಿಂದ ಹೆಚ್ಚು ಫಲ ಸಿಗಲಿದೆ. ಅದರಲ್ಲೂ ಸಾಮೂಹಿಕ ಸತ್ಯನಾರಾಯಣ ಪೂಜೆಯಿಂದ ಗ್ರಾಮದಲ್ಲಿ ಶಾಂತಿ, ಸಾಮರಸ್ಯ ನೆಲೆಸಲಿದೆ. ಸತ್ಯ ಎಲ್ಲಾ ಧರ್ಮಕ್ಕೂ ಮೂಲವಾಗಿದ್ದು, ಸತ್ಯದ ಮಹತ್ವ ಗೊತ್ತಿದ್ದರೂ ನಾವು ಸುಳ್ಳಿನ



ಸರಮಾಲೆಯನ್ನು ಕಟ್ಟಿಕೊಂಡಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದ ಸ್ವಾಮೀಜಿ, ಸತ್ಯದ ಆಚರಣೆ ಮಾಡುವವರ ಬದುಕು ಬಹಳ ಎತ್ತರದಲ್ಲಿರುತ್ತದೆ ಎಂದು ಕಳ್ಳ ಮತ್ತು ರಾಜನ ಕಥೆ ಹೇಳಿ ಸಭೆಯ ಗಮನ ಸೆಳೆದರು. ಸತ್ಯವನ್ನು ಮಾತನಾಡಬೇಕಾದರೆ ಮೊದಲು ನಾವು ಮೌನವಾಗಿರುವುದನ್ನು ಕಲಿಯಬೇಕು. ಮೌನದಿಂದ ಶಕ್ತಿ, ಚೈತನ್ಯದ ಜೊತೆಗೆ ಉತ್ತಮ ಸಾಧನೆ ಕೂಡಾ ಸಾಧ್ಯ ಎಂದು ಪ್ರತಿಪಾದಿಸಿದರು.

ಧರ್ಮಸ್ಥಳ ಯೋಜನೆಯ ಜಿಲ್ಲಾ ನಿರ್ದೇಶಕ ಎಂ.ಲಕ್ಷ್ಮಣ ಪ್ರಾಸ್ತಾವಿಕವಾಗಿ ಮಾತನಾಡಿ, ದುಡ್ಡು ಇಲ್ಲದವನು ಬಡವನಲ್ಲ, ಗುರಿ ಮತ್ತು ಕನಸು ಇಲ್ಲದವನು ನಿಜವಾದ ಬಡವ ಎಂಬ ವೀರೇಂದ್ರ ಹೆಗ್ಗಡೆ ಅವರ ಮಾತನ್ನು ಉಲ್ಲೇಖಿಸಿದರು. ದುಡಿಮೆ ಮತ್ತು ಉಳಿತಾಯದಿಂದ ಮಾತ್ರ ನಾವು ಅಭಿವೃದ್ಧಿ ಸಾಧಿಸಲು ಸಾಧ್ಯ ಎಂದರು. ಅಧ್ಯಾತ್ಮಿಕ ಚಿಂತಕ ಡಿ.ಕೆ. ಸಿದ್ದೇಶ್, ಗ್ರಾಮದ ಮುಖಂಡ ಎಂ.ಜಿ. ಪರಮೇಶ್ವರ ಗೌಡ, ವಕೀಲ ಕೆ.ಎನ್. ಹಳ್ಳಿ ನಾಗನಗೌಡ, ಪ್ರಗತಿಪರ ಕೃಷಿಕ ಕುಂದೂರು ಮಂಜಪ್ಪ ಮಾತನಾಡಿದರು. ಗ್ರಾಮದ ಹಿರಿಯ ಮುತ್ಸದ್ದಿ ಎನ್.ಜಿ. ನಾಗನಗೌಡ್ರು ಸಮಾರಂಭವನ್ನು ಉದ್ಘಾಟಿಸಿದರು. ಗ್ರಾ.ಪಂ. ಅಧ್ಯಕ್ಷ ಬಂಡೇರ ಪ್ರಭು ಅಧ್ಯಕ್ಷತೆ ವಹಿಸಿದ್ದರು. ಚಾಮರಾಜನಗರ ಶ್ರೀ ಶಿವಮೂರ್ತಿ ಸ್ವಾಮೀಜಿ, ಜಿಲ್ಲಾ ಜನ ಜಾಗೃತಿ ವೇದಿಕೆಯ ಉಪಾಧ್ಯಕ್ಷ ಕೊಮಾರನಹಳ್ಳಿಯ ಜಿ. ಮಂಜುನಾಥ್ ಪಟೇಲ್, ಸದಸ್ಯರಾದ ಜಿಗಳಿ ಪ್ರಕಾಶ್, ಕೊಕ್ಕನೂರಿನ ಹನುಮಂತರಾಯ, ಮಲೇಬೆನ್ನೂರಿನ ನಂದಿ ಬ್ಯಾಂಕ್ ಮಾಜಿ ಅಧ್ಯಕ್ಷ ಬಿ. ವೀರಯ್ಯ, ಗ್ರಾ.ಪಂ. ಸದಸ್ಯ ಹೊಸಳ್ಳಿ ನಾಗಪ್ಪ ಹಾ.ಉ. ಸಂಘದ ಅಧ್ಯಕ್ಷ ಬ್ಯಾಲದಹಳ್ಳಿ ಶಿವಕುಮಾರ್, ಮಾಜಿ ಯೋಧ ಪರಶುರಾಮ್, ಎನ್.ಜಿ. ಮಹಾಂತೇಶ್, ಕೆ.ಎನ್. ಹಳ್ಳಿಯ ಜಿ.ಕೆ. ಶಿವರಾಜ್, ಸಾಹಿತಿ ಪಾಳ್ಯದ ನಾಗೇಂದ್ರಪ್ಪ ಸೇರಿದಂತೆ ಹೊಳೆಸಿರಿಗೆರೆ ವಲಯದ ಒಕ್ಕೂಟ ಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಈ ವೇಳೆ ಗ್ರಾಮದ ಹಿರಿಯರಾದ ಮಾಗೋಡ್ ನಂಜುಂಡಪ್ಪ, ಮಹಾದೇವಮ್ಮ, ವಿದ್ಯಾರ್ಥಿ ಚಿರಂಜೀವಿ ಅವರನ್ನು ಗೌರವಿಸಲಾಯಿತು. ಕು. ವರ್ಷಿಣಿ ಯ. ಭರತ ನಾಟ್ಯ ಎಲ್ಲರ ಮನಸೂರೆಗೊಂಡಿತು.

ವಲಯ ಮೇಲ್ವಿಚಾರಕ ರಂಗಸ್ವಾಮಿ ಅವರು ವಲಯದ ಪ್ರಗತಿ ವರದಿಯನ್ನು ಓದಿ ತಿಳಿಸಿದರು.

## ಲಿವ್ ಇನ್ ದುರಂತ;
# ಪೊಲೀಸ್ ಅಧಿಕಾರಿಯಾಗಿದ್ದ ಪ್ರೇಯಸಿಯನ್ನು ಕೊಂದಯೋಧ



ಗುಜರಾತ್‌ನ ಕಚ್ ಜಿಲ್ಲೆಯಲ್ಲಿ ಮಹಿಳಾ ಪೊಲೀಸ್ ಅಧಿಕಾರಿಯೊಬ್ಬರನ್ನು ಅವರ ಲಿವ್-ಇನ್ ಗೆಳೆಯ ದಿಲೀಪ್ ಎಂಬಾತ ಕೊಲೆ ಮಾಡಿದ್ದಾನೆ. ಆರೋಪಿ ದಿಲೀಪ್ ಸಿಆರ್‌ಪಿಎಫ್ ಕಾನ್‌ಸ್ಟೆಬಲ್ ಆಗಿ ಸೇವೆ ಸಲ್ಲಿಸುತ್ತಿದ್ದರು. ಕೊಲೆ ನಡೆಸಿದ ಬಳಿಕ ದಿಲೀಪ್ ಡಾಂಗ್ಚಿಯಾ, ಅಂಜರ್ ಪೊಲೀಸ್ ಠಾಣೆಗೆ ಬಂದು ಶರಣಾಗಿದ್ದಾನೆ ಎಂದು ತಿಳಿದು ಬಂದಿದೆ. ಕೊಲೆಯಾದ ಅರುಣಾಬೆನ್ ನಟುಭಾಯ್ ಜಾದವ್ ಅಂಜರ್ ಪೊಲೀಸ್ ಠಾಣೆಯಲ್ಲಿ ಸಹಾಯಕ ಸಬ್-ಇನ್‌ಸ್ಪೆಕ್ಟರ್ (ಎಎಸ್‌ಐ) ಆಗಿ ಸೇವೆ ಸಲ್ಲಿಸುತ್ತಿದ್ದರು. ಶುಕ್ರವಾರ ರಾತ್ರಿ, 25 ವರ್ಷದ ಅರುಣಾಬೆನ್ ಮತ್ತು ದಿಲೀಪ್ ಜಗಳವಾಡಿದ್ದರು.

ಜಗಳದಲ್ಲಿ ಅರುಣಾಬೆನ್ ನಟುಭಾಯ್ ಜಾದವ್, ದಿಲೀಪ್ ತಾಯಿ ಕುರಿತು ಅವಹೇಳನಕಾರಿಯಾಗಿ ಮಾತನಾಡಿದ್ದಾಳೆ. ಇದರಿಂದ ಕೋಪಗೊಂಡ ಆತ ಅರುಣಾಬೆನ್‌ಳನ್ನು ಕತ್ತು ಹಿಸುಕಿ ಕೊಲೆ ಮಾಡಿದ್ದಾನೆ. ಮಣಿಪುರದಲ್ಲಿ ಕೇಂದ್ರ ಮೀಸಲು ಪೊಲೀಸ್ ಪಡೆ (ಅಖಕಈ)ಯಲ್ಲಿ ನಿಯೋಜಿತನಾಗಿರುವ ಆರೋಪಿಯು ಅರುಣಾ ಜೊತೆ ದೀರ್ಘಕಾಲದ ಸಂಬಂಧ ಹೊಂದಿದ್ದನು. ಇಬ್ಬರೂ ಮದುವೆಯಾಗಲು ಯೋಜಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. 2021ರಿಂದ ಇನ್‌ಸ್ಟಾಗ್ರಾಮ್ ಮೂಲಕ ಪರಸ್ಪರ ಸಂಪರ್ಕದಲ್ಲಿದ್ದರು. ಅಂದಿನಿಂದ ಇಲ್ಲಿಯ ವರೆಗೆ ಅವರು ಲಿವ್ ಇನ್ ಸಂಬಂಧದಲ್ಲಿದ್ದರು ಎಂದು ಹೇಳಲಾಗಿದೆ.

ಅಂಜಾರ್ ವಿಭಾಗದ ಉಪ ಪೊಲೀಸ್ ವರಿಷ್ಠಾಧಿಕಾರಿ (ಡಿವೈಎಸ್‌ಪಿ) ಮುಖೇಶ್ ಚೌಧರಿ ಈ ಕುರಿತು ಮಾತನಾಡಿ, ಅಖಕಈ ನಲ್ಲಿ ಸೇವೆ ಸಲ್ಲಿಸುತ್ತಿರುವ ದಿಲೀಪ್ ಮಹಿಳಾ ಅಧಿಕಾರಿಯನ್ನು ಕೊಲೆ ಮಾಡಿರುವುದನ್ನು ಧೃಡಪಡಿಸಿದ್ದಾರೆ. ಸದ್ಯ ಪ್ರಕರಣದ ತನಿಖೆ ನಡೆಯುತ್ತಿದ್ದು, ಆರೋಪಿಯನ್ನು ವಿಚಾರಣೆ ಮಾಡಲಾಗುತ್ತಿದೆ ಎಂದು ಹೇಳಿದರು. 2021ರಲ್ಲಿ ಇನ್‌ಸ್ಟಾಗ್ರಾಮ್ ಮೂಲಕ ಪರಸ್ಪರ ಸಂಪರ್ಕಕ್ಕೆ ಬಂದ ದಿಲೀಪ್ ಮತ್ತು ಅರುಣಾವೆನ್, ಅಂದಿನಿಂದ ಒಟ್ಟಿಗೆ ವಾಸಿಸುತ್ತಿದ್ದರು" ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಮನೆಯವರನ್ನು ಒಪ್ಪಿಸಿ ಮದುವೆಯಾಗಬೇಕು ಎಂದುಕೊಂಡಿದ್ದ ಈ ಜೋಡಿ, ಕ್ಷುಲ್ಲಕ ಕಾರಣಕ್ಕೆ ಜಗಳವಾಡಿಕೊಂಡು ಕೊಲೆ ನಡೆದಿದೆ ಎಂದು ಅವರು ಹೇಳಿದ್ದಾರೆ.

# ಚಿಕ್ಕೋಡಿ: ಹೃದಯಾಘಾತದಿಂದ 32 ವರ್ಷದ ಯೋಗ ಶಿಕ್ಷಕಿ ಸಾವು

**ಚಿಕ್ಕೋಡಿ:** 32 ವರ್ಷದ ಯೋಗ ಶಿಕ್ಷಕಿಯೊಬ್ಬರು ಹಠಾತ್ ಕುಸಿದು ಬಿದ್ದು ತಮ್ಮ ಮನೆಯಲ್ಲಿ ಸಾವನ್ನಪ್ಪಿರುವ ಘಟನೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿಯ ಭೀಮ್ ನಗರ ಲೇಔಟ್‌ನಲ್ಲಿ ನಡೆದಿದೆ.

ಆರತಿ ದಿಲೀಪ್ ಜೋಗಲೆ ಮೃತ ಶಿಕ್ಷಕಿ, ಅವರಿಗೆ ಯಾವುದೇ ರೀತಿಯ ಅನಾರೋಗ್ಯದ ಲಕ್ಷಣಗಳು ಕಂಡುಬಂದಿಲ್ಲ ಎಂದು ವರದಿಯಾಗಿದೆ. ಕುಸಿದು ಬಿದ್ದ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು, ಪರೀಕ್ಷಿಸಿದ ವೈದ್ಯರು ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ ಎಂದು ದೃಢಪಡಿಸಿದರು.

ಆರತಿ ಮಹರ್ಷಿ ಯೋಗ ಆರೋಗ್ಯ ಪ್ರತಿಷ್ಠಾನದಲ್ಲಿ ಯೋಗ ತರಬೇತಿ ಪಡೆದಿದ್ದರು. ಪಟ್ಟಣದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಯೋಗವನ್ನು ಕಲಿಸುತ್ತಿದ್ದರು. ಅವರ ಪೋಷಕರು, ಇಬ್ಬರು ಸಹೋದರರು ಮತ್ತು ಒಬ್ಬ ಸಹೋದರಿಯನ್ನು ಅಗಲಿದ್ದಾರೆ.

ಶನಿವಾರ ವರದಿಯಾದ ಎರಡನೇ ಘಟನೆ ಇದು. ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಸರ್ಕಾರಿ ಶಾಲೆಯ 48 ವರ್ಷದ ಶಿಕ್ಷಕ ತರಗತಿಯಲ್ಲಿ ಕುಸಿದು ಬಿದ್ದು ಹೃದಯಾಘಾತದಿಂದ ಸಾವನ್ನಪ್ಪಿದ್ದರು.

## ಹಾ ಲಾಂಗ್ ಕೊಲ್ಲಿಯಲ್ಲಿ ಭಾರೀ ದುರಂತ;
# ಪ್ರವಾಸಿ ಬೋಟ್ ಮುಳುಗಿ 34 ಮಂದಿ ಸಾವು, ಹಲವರು ನಾಪತ್ತೆ



**ಹನೋಯ್:** ವಿಯೆಟ್ನಾಂನ ಜನಪ್ರಿಯ ಹಾ ಲಾಂಗ್ ಕೊಲ್ಲಿಯಲ್ಲಿ ಶನಿವಾರ 53 ಜನರನ್ನು ಹೊತ್ತೊಯ್ಯುತ್ತಿದ್ದ ಪ್ರವಾಸಿ ಬೋಟ್ (ಃಠಚಿಣ ಅಚಿಥಿಘಜ) ಒಂದು ತೀವ್ರ ಹವಾಮಾನ ವೈಪರೀತ್ಯದ ಪರಿಣಾಮವಾಗಿ ಮಗುಚಿಬಿದ್ದಿದೆ. ಘಟನೆಯಲ್ಲಿ ಕನಿಷ್ಠ 34 ಜನರು ಮೃತಪಟ್ಟಿದ್ದಾರೆ ಮತ್ತು ಹಲವಾರು ಜನರು ಕಾಣೆಯಾಗಿದ್ದಾರೆ. ವಿಫಾ ಚಂಡಮಾರುತದ ಪ್ರಭಾವದಿಂದ ಬಲವಾದ ಗಾಳಿ ಮತ್ತು ಭಾರೀ ಮಳೆಯಿಂದಾಗಿ ಈ ದುರಂತ ಸಂಭವಿಸಿದೆ ಎಂದು ವರದಿಯಾಗಿದೆ. ಕ್ವಾಂಗ್ ನಿನ್ಹ್‌ನಲ್ಲಿರುವ ಪ್ರಾಂತೀಯ ಅಧಿಕಾರಿಗಳ ಪ್ರಕಾರ, ವಂಡರ್ ಸೀ ಕ್ರೂಸ್ ದೋಣಿ ಸ್ಥಳೀಯ ಸಮಯ ಸುಮಾರು ಮಧ್ಯಾಹ್ನ 1:45 ಕ್ಕೆ ಪ್ರಸಿದ್ಧ ಡೌ ಗೋ ಗುಹೆಯ ಬಳಿ ಪಲ್ಟಿಯಾಗಿದೆ. ದೋಣಿಯಲ್ಲಿ 48 ಪ್ರವಾಸಿಗರು ಮತ್ತು 5 ಸಿಬ್ಬಂದಿ ಇದ್ದರು.

ಇಲ್ಲಿಯವರೆಗೆ 11 ರಿಂದ 12 ಜನರನ್ನು ರಕ್ಷಿಸಲಾಗಿದೆ. ಸದ್ಯ ಕಾರ್ಯಾಚರಣೆ ಮುಂದುವರಿದಿದ್ದು, ರಕ್ಷಣಾ ಕಾರ್ಯ ನಡೆಯುತ್ತಿದೆ. ಮೃತಪಟ್ಟ 34 ಜನರ ಪೈಕಿ ಕನಿಷ್ಠ ಎಂಟು ಮಕ್ಕಳು ಸೇರಿದ್ದಾರೆ ಎಂದು ವಿಯೆಟ್ನಾಂ ಸರ್ಕಾರಿ ಸುದ್ದಿ ಸಂಸ್ಥೆ ದೃಢಪಡಿಸಿದೆ. ಹದಗೆಡುತ್ತಿರುವ ಹವಾಮಾನದ ನಡುವೆಯೂ ಬದುಕುಳಿದವರನ್ನು ಪತ್ತೆ ಹಚ್ಚುವ ಆಶಯದೊಂದಿಗೆ ರಕ್ಷಣಾ ತಂಡಗಳು ತಮ್ಮ ಕಾರ್ಯಾಚರಣೆಯನ್ನು ತುರ್ತಾಗಿ ಮುಂದುವರಿಸಿವೆ. ಈ ಅಪಘಾತಕ್ಕೆ ಬಲವಾದ ಗಾಳಿ ಮತ್ತು ಪ್ರದೇಶದಲ್ಲಿನ ಪ್ರಕ್ಷುಬ್ಧ ನೀರು ಕಾರಣ ಎಂದು ಅಧಿಕಾರಿಗಳು ಹೇಳಿದ್ದಾರೆ.

ಹವಾಮಾನ ವೈಪರೀತ್ಯವು ವಿಮಾನ ಪ್ರಯಾಣ-ಕ್ಕೂ ಅಡ್ಡಿಪಡಿಸಿದೆ. ಪ್ರತಿಕೂಲ ಪರಿಸ್ಥಿತಿಯಿಂದಾಗಿ ಹನೋಯ್‌ನ ನೋಯ್ ಬಾಯಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣವು ಒಳಬರುವ ಒಂಬತ್ತು ವಿಮಾನಗಳನ್ನು ಪರ್ಯಾಯ ವಿಮಾನ ನಿಲ್ದಾಣಗಳಿಗೆ ತಿರುಗಿಸಲಾಗಿದೆ ಮತ್ತು ಮೂರು ನಿರ್ಗಮನಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ವರದಿ ಮಾಡಿದೆ. ಘಟನೆಯ ನಂತರ ವಿಯೆಟ್ನಾಂ ಪ್ರಧಾನಿ ಫಾಮ್ ಮಿನ್ಹ್ ಚಿನ್ಹ್ ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ರಾಷ್ಟ್ರೀಯ ರಕ್ಷಣಾ ಸಚಿವಾಲಯ ಮತ್ತು ಸಾರ್ವಜನಿಕ ಭದ್ರತಾ ಸಚಿವಾಲಯಕ್ಕೆ ತಕ್ಷಣವೇ ಪೂರ್ಣ ಪ್ರಮಾಣದ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗಳನ್ನು ಪ್ರಾರಂಭಿಸಲು ಆದೇಶಿಸಿದ್ದಾರೆ.

ಹಾ ಲಾಂಗ್ ಕೊಲ್ಲಿಯಲ್ಲಿ ಇಂತಹ ವಿನಾಶ ಸಂಭವಿಸಿರುವುದು ಇದೇ ಮೊದಲಲ್ಲ. 2024 ರ ಆರಂಭದಲ್ಲಿ, ಟೈಫೂನ್ ಯಾಗಿಯಿಂದಾಗಿ ಅದೇ ಪ್ರದೇಶದಲ್ಲಿ 30 ಹಡಗುಗಳು ಮುಳುಗಿವೆ ಎಂದು ವರದಿಯಾಗಿತ್ತು. ಯುನೆಸ್ಕೋ ವಿಶ್ವ ಪರಂಪರೆಯ ತಾಣವಾದ ಹಾ ಲಾಂಗ್ ಕೊಲ್ಲಿ, ಹನೋಯಿಯ ಈಶಾನ್ಯಕ್ಕೆ ಸುಮಾರು 200 ಕಿಲೋಮೀಟರ್ ದೂರದಲ್ಲಿದೆ ಮತ್ತು 1,500 ಚದರ ಕಿಲೋಮೀಟರ್‌ಗಿಂತಲೂ ಹೆಚ್ಚು ವ್ಯಾಪಿಸಿದೆ, ಸುಮಾರು 2,000 ಸುಣ್ಣದಕಲ್ಲು ದ್ವೀಪಗಳಿಂದ ಕೂಡಿದೆ. ಕೊಲ್ಲಿಯಲ್ಲಿ ದೋಣಿ ಪ್ರವಾಸಗಳು ದೇಶೀಯ ಮತ್ತು ಅಂತರರಾಷ್ಟ್ರೀಯ ಪ್ರವಾಸಿಗರಿಗೆ ಪ್ರಮುಖ ಆಕರ್ಷಣೆಯಾಗಿದೆ.

# ಬೇಂದ್ರೆ ಕಾವ್ಯವನ್ನು ಕೊಲ್ಲುವ ಪ್ರಯತ್ನ ನಡೆದಿತ್ತೆನ್ನುವುದು ಬೇಸರ: ಡಾ. ಹರೀಶ



**ಬೆಂಗಳೂರು:** ಬೇಂದ್ರೆಯವರ ಕಾವ್ಯದ ಆಳಕ್ಕಿಳಿದು ಅರ್ಥ ಮಾಡಿಕೊಳ್ಳಲಾಗದೆ, ಬೇಂದ್ರೆ ಕಾವ್ಯದಲ್ಲಿ ಏನೂ ಇಲ್ಲ ಎಂದು ಕೊಲ್ಲುವ ಪ್ರಯತ್ನ ಕನ್ನಡ ಸಾರಸ್ವತ ಲೋಕದಲ್ಲಿ ನಡೆದಿದ್ದು ಬೇಸರದ ಸಂಗತಿ ಎಂದು ಕವಿ, ಕಾದಂಬರಿಕಾರ ಡಾ. ಜಿ.ಬಿ. ಹರೀಶ ಹೇಳಿದರು.

ಅಖಿಲ ಭಾರತೀಯ ಸಾಹಿತ್ಯ ಪರಿಷದ್ (ಅಭಾಸಾಪ) ಬೆಂಗಳೂರು ದಕ್ಷಿಣ ಘಟಕದ ವತಿಯಿಂದ ಸುಬ್ರಹ್ಮಣ್ಯಪುರದ ರಾಜಾ ಗಾರ್ಡೇನಿಯಾ ಲೇಔಟ್‌ನ ಭಾರದ್ವಾಜ ಸಭಾಂಗಣದಲ್ಲಿ ಆಯೋಜಿಸಿದ್ದ ನಾಕುತಂತಿ ಷಷ್ಟ್ಯಬ್ದಿ ಸರಣಿಯ 'ನಾದ-6' ಕಾರ್ಯಕ್ರಮದಲ್ಲಿ ಮಾತನಾಡಿದರು.

ಬೇಂದ್ರೆಯವರು ಗ್ರಾಮೀಣ ಸೊಗಡಿನಿಂದ ವೇದಗಳವರೆಗೆ ಎಲ್ಲ ವಿಚಾರಗಳನ್ನೂ ತಮ್ಮ ಕಾವ್ಯಗಳಲ್ಲಿ ತಂದಿದ್ದಾರೆ. ಆದರೆ ಬೇಂದ್ರೆಯವರನ್ನು ವಿಮರ್ಶೆ ಮಾಡಿದ ಅನೇಕರು ಅವರ ಕಾವ್ಯದ ಆತ್ಮವನ್ನು ಪ್ರವೇಶಿಸಿಯೇ ಇಲ್ಲ. ಕವಿಯನ್ನು ಮೇಲೆಮೇಲೆ ಅರ್ಥಮಾಡಿಕೊಂಡು ಮುಂದೆ ಹೋಗಿದ್ದಾರೆ. ಯಾವುದೇ ರಸಿಕ, ವಿಮರ್ಶಕರಿಗೆ ಕವಿಯ ದೃಷ್ಟಿ, ಕೃಪೆ ಸಿಕ್ಕರೆ ಮಾತ್ರ ಕಾವ್ಯ ಅರ್ಥವಾಗುತ್ತದೆ. ಇಲ್ಲದಿದ್ದರೆ ವಿಮರ್ಶೆಯ ಮೇಲೆ ವಿಮರ್ಶೆ ನಡೆಯುತ್ತದೆಯೇ ಹೊರತು ಆಳಕ್ಕೆ ಇಳಿಯುವುದಿಲ್ಲ. ಬರೆದ್ದದ್ದರಲ್ಲೇ ಏನೇನೋ ಕಲ್ಪನೆ ಮಾಡಿಕೊಂಡು ಆಹಾ ಓಹೋ ಎಂದು ಹೇಳುತ್ತಿದ್ದ ನವ್ಯ ಕವಿಗಳನ್ನು ಸ್ವತಃ ಬೇಂದ್ರೆ 'ಊಹೆ' ಕವನದಲ್ಲಿ ಟೀಕಿಸಿದ್ದಾರೆ. ವ್ಯರ್ಥವಾದ ಒಂದು ಕವನವನ್ನೂ ಬೇಂದ್ರೆಯವರು ಬರೆದಿಲ್ಲ.

ಬೇಂದ್ರೆಯವರ ಕವನದಲ್ಲಿ ಸತ್ವವಿಲ್ಲ ಎಂದು ಚಂದ್ರಶೇಖರ ಕಂಬಾರರು ಒಮ್ಮೆ ಬಾಷಣ ಮಾಡಿದ್ದರು. ಬೇಂದ್ರೆಯವರ ಕಾವ್ಯದಲ್ಲಿ ಸತ್ವವಿತ್ತು ಎನ್ನುವುದು ಅವರು ನಿಧನರಾದ ದಶಕದ ನಂತರವೂ ಅವರನ್ನು ಸ್ಮರಿಸುತ್ತಿರುವುದೇ ಸಾಕ್ಷಿ. ಕಂಬಾರರ ಸಾಹಿತ್ಯದಲ್ಲಿ ಸತ್ವ ಇದೆಯೇ ಇಲ್ಲವೇ ಎಂದು ಕಾಲವೇ ಉತ್ತರಿಸಲಿದೆ. ಹೀಗೆ ಅನೇಕ ಸಂದರ್ಭಗಳಲ್ಲಿ ಬೇಂದ್ರೆ ಕಾವ್ಯವನ್ನು ಕೊಲ್ಲುವ ಪ್ರಯತ್ನ ಕನ್ನಡದಲ್ಲಿ ನಡೆದದ್ದು ಬೇಸರದ ಸಂಗತಿ ಎಂದರು.

# ಕಾರಿನ ಮೇಲೆ ಬಿದ್ದ ಮರ: ಮಹಿಳೆ ಸಾವು



**ಕಾರವಾರ:** ರಸ್ತೆಯಲ್ಲಿ ನಿಲ್ಲಿಸಲಾಗಿದ್ದ ಕಾರಿನ ಮೇಲೆ ಮರ ಬಿದ್ದು, ಕಾರಿನಲ್ಲಿದ್ದ ಮಹಿಳೆಯನ್ನು ಆಸ್ಪತ್ರೆಗೆ ಸಾಗಿಸುವಾಗಲೇ ಮೃತಪಟ್ಟಿರುವ ಘಟನೆ ಉತ್ತರ ಕನ್ನಡ ಜಿಲ್ಲೆಯ ಕಾರವಾರ ನಗರದ ಪಿಕಳೆ ರಸ್ತೆಯಲ್ಲಿ ನಡೆದಿದೆ.

ಮೃತ ಮಹಿಳೆ ಮಲ್ಲಾಪುರ ಗ್ರಾಮದ ಲಕ್ಷ್ಮೀ ನಾರಾಯಣ ಮಮ್ತೆಕರ (55) ಎಂದು ಗುರುತಿಸಲಾಗಿದೆ. ಗರ್ಭಿಣಿ ಸೊಸೆಯನ್ನು ಆಸ್ಪತ್ರೆಗೆ ಕರೆದುಕೊಂಡು ಬಂದಿದ್ದರು. ಆಕೆಯ ಅತ್ತೆ ಲಕ್ಷ್ಮೀ ಮಮ್ತೆಕರ ಕಾರಿನೊಳಗೆ ಕುಳಿತುಕೊಂಡಿದ್ದರು. ಈ ವೇಳೆಗ ಬುಡ ಸಮೇತ ಬೃಹತ್ ಮರ ಕಾರಿನ ಮೇಲೆ ಉರುಳಿ ಬಿದ್ದಿದೆ..

ಘಟನೆಯಿಂದಾಗಿ ಲಕ್ಷ್ಮೀ ಮಮ್ತೆಕರ ಕಾರಿನೊಳಗೆ ಸಿಲುಕಿದರು. ಸ್ಥಳಕ್ಕೆ ಅಗ್ನಿಶಾಮಕದಳ ಹಾಗೂ ಕಾರವಾರ ನಗರ ಪೊಲೀಸ್ ಠಾಣೆಯ ಸಿಬ್ಬಂದಿ ಧಾವಿಸಿ, ಮರವನ್ನು ತೆರವುಗೊಳಿಸಿ ಗಾಯ ಗೊಂಡಿದ್ದ ಅವರನ್ನು ತಕ್ಷಣ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದರು. ಆದರೆ ಆಸ್ಪತ್ರೆಗೆ ಸಾಗಿಸುವಾಗಲೇ ಮೃತಪಟ್ಟಿದ್ದಾರೆ, ಆಸ್ಪತ್ರೆಯಲ್ಲಿ ವೈದ್ಯರು ಸಾವನ್ನು ದೃಢಪಡಿಸಿದರು. ಕಾರವಾರದಲ್ಲಿ ಪದೆ ಪದೆ ಮರ ಉರುಳು ಬಿಳುವ ಘಟನೆ ನಡೆಯುತ್ತಿದ್ದು, ರಸ್ತೆ ಬದಿಯಲ್ಲಿ ನಿಲ್ಲುವುದು, ವಾಹನ ನಿಲ್ಲಿಸು ವುದಕ್ಕೆ ಭಯ ಪಡುವಂತಾಗಿದೆ.

# ಕೆಆರ್‌ಎಸ್ ಹಿನ್ನೀರಿನಲ್ಲಿ ಮೂವರು ನರ್ಸಿಂಗ್ ವಿದ್ಯಾರ್ಥಿಗಳು ನೀರುಪಾಲು



**ಮೈಸೂರು:** ಮೈಸೂರಿನಲ್ಲಿ ಘೋರ ದುರಂತ ನಡೆದಿದೆ. ಕೆಆರ್‌ಎಸ್ ಹಿನ್ನೀರಿನಲ್ಲಿ ಮುಳುಗಿ ಮೂವರು ವಿದ್ಯಾರ್ಥಿಗಳು ನೀರು ಪಾಲಾಗಿದ್ದಾರೆ. ಮೈಸೂರು ತಾಲೂಕಿನ ಮೀನಾಕ್ಷಿಪುರ ಬಳಿ ಘಟನೆ ನಡೆದಿದೆ. ಮಂಡ್ಯದ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ನಾಪತ್ತೆಯಾಗಿದ್ದಾರೆ ಎಂದು ತಿಳಿದುಬಂದಿದೆ.

ಪ್ರವಾಸಕ್ಕೆ ಹೋಗಿದ್ದ ವೇಳೆ ಪ್ರಶಾಂತ್, ಸಿದ್ಧ ಮತ್ತು ಕೃಷ್ಣ ಎನ್ನುವ ಮೂವರು ವಿದ್ಯಾರ್ಥಿಗಳು ನೀರು ಪಾಲಾಗಿದ್ದಾರೆ. ಘಟನಾ ಸ್ಥಳಕ್ಕೆ ಅಗ್ನಿಶಾಮಕದಳ ಸಿಬ್ಬಂದಿ ತೆರಳಿ ಮೂವರು ವಿದ್ಯಾರ್ಥಿಗಳಿಗಾಗಿ ಶೋಧ ಕಾರ್ಯಾಚರಣೆ ನಡೆಸಿದ್ದಾರೆ. ಘಟನೆ ಕುರಿತಂತೆ ಇಲವಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಪ್ರೀತಿಸುವಂತೆ ವಿವಾಹಿತ ಮಹಿಳೆಗೆ ಕಿರುಕುಳ; ಬುದ್ಧಿ ಹೇಳಿದ ವ್ಯಕ್ತಿಯ ಕತ್ತು ಕೊಯ್ದ ಪಾಗಲ್ ಪ್ರೇಮಿ!

**ಬೆಂಗಳೂರು:** ಇನ್ಸ್ಟಾಗ್ರಾಮ್‌ನಲ್ಲಿ ಪರಿಚಯವಾಗಿದ್ದ ವಿವಾಹಿತ ಮಹಿಳೆಗೆ ಪ್ರೀತಿಸುವಂತೆ ಕಿರುಕುಳ ಕೊಡುತ್ತಿದ್ದ ಯುವಕನಿಗೆ ಬುದ್ಧಿ ಹೇಳಲು ಬಂದಿ ವ್ಯಕ್ತಿಯ ಕತ್ತು ಸೀಳಿ ಕೊಲೆಗೆ ಯತ್ನಿಸಿದ ಘಟನೆ ಎಚ್‌ಎಎಲ್‌ನಲ್ಲಿ ನಡೆದಿದೆ. ಮಹಿಳೆಯೊಬ್ಬರಿಗೆ ತಮಿಳುನಾಡು ತಿರಪ್ಪತ್ತೂರು ಮೂಲದ ಯುವಕ ಸೆಲ್ವ ಕಾರ್ತಿಕ್ ಪ್ರೀತಿಸುವಂತೆ ಪೀಡಿಸುತ್ತಿದ್ದ. ಇದೇ ವಿಚಾರಕ್ಕೆ ಯುವಕನನ್ನು ಮಾತನಾಡಲು ಎಚ್‌ಎಎಲ್ ಬಳಿ ಬರಲು ಮಹಿಳೆಯ ತಂದೆ ಹಾಗೂ ಸಂಬಂಧಿಯೊಬ್ಬರು ಹೇಳಿದ್ದರು. ಈ ವೇಳೆ ಆರೋಪಿ ಕೊಲೆಗೆ ಯತ್ನಿಸಿದ್ದಾನೆ. ಮಾತುಕತೆಗೆ ಕರೆಸಿದ್ದ ಮಹಿಳೆ ತಂದೆ ಹಾಗೂ ಸಂಬಂಧಿ, ಸೆಲ್ವ ಕಾರ್ತಿಕ್‌ನನ್ನು ಬೈಕ್‌ನಲ್ಲಿ ಕೂರಿಸಿಕೊಂಡು ಹೋಗುತ್ತಿದ್ದರು.

## ಧರ್ಮಸ್ಥಳ ರಹಸ್ಯ ಅಂತ್ಯಕ್ರಿಯೆ ಪ್ರಕರಣ
# ಎಸ್‌ಐಟಿ ತನಿಖೆಯಲ್ಲಿ ಸೌಜನ್ಯ ಕೇಸ್ ಸೇರ್ಪಡೆಯಿಲ್ಲ: ರಾಜ್ಯ ಸರ್ಕಾರ ಸ್ಪಷ್ಟನೆ



**ಬೆಂಗಳೂರು:** ಧರ್ಮಸ್ಥಳದಲ್ಲಿ ನಡೆದ ಅತ್ಯಾಚಾರ ಮತ್ತು ಕೊಲೆ ಪ್ರಕರಣಗಳ ತನಿಖೆಗಾಗಿ ರಾಜ್ಯ ಸರ್ಕಾರ ಹೊಸದಾಗಿ ರಚಿಸಲಾದ ವಿಶೇಷ ತನಿಖಾ ತಂಡ (ಎಸ್‌ಐಟಿ)ದಲ್ಲಿ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣವನ್ನು ಸೇರಿಸಲಾಗುವುದಿಲ್ಲ ಎಂದು ರಾಜ್ಯ ಸರ್ಕಾರ ಸ್ಪಷ್ಟಪಡಿಸಿದೆ.

ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಜಿ. ಪರಮೇಶ್ವರ ಅವರು, ಎಸ್‌ಐಟಿಯ ಕಾರ್ಯಸೂಚಿಯಲ್ಲಿ ಸೌಜನ್ಯ ಪ್ರಕರಣ ಸೇರಿಲ್ಲ ಎಂದು ಸ್ಪಷ್ಟಪಡಿಸಿದರು.

ಧರ್ಮಸ್ಥಳ ಪ್ರಕರಣದಲ್ಲಿ ದೂರಿನ ಆಧಾರದ ಮೇಲೆ ಪ್ರಾಥಮಿಕ ತನಿಖೆ ನಡೆಸಬೇಕೆಂದು ಬಯಸಿದ್ದೆವು. ಅಗತ್ಯವಿದ್ದರೆ, ತನಿಖೆಯನ್ನು ಉನ್ನತ ತನಿಖಾ ಸಂಸ್ಥೆಗೆ ಹಸ್ತಾಂತರಿಸುತ್ತೇವೆಂದೂ ಹೇಳಿದ್ದೆವು. ಇದೀಗ ಮುಖ್ಯಮಂತ್ರಿ, ನಾನು ಮತ್ತು ಪೊಲೀಸ್ ಮಹಾನಿರ್ದೇಶಕರು ಎಸ್‌ಐಟಿ ರಚಿಸಲು ನಿರ್ಧರಿಸಿದ್ದೇವೆ. ಪ್ರಣಬ್ ಮೊಹಂತಿ ಹಿರಿಯ ಅಧಿಕಾರಿಯಾಗಿದ್ದು, ಕಾಲಕಾಲಕ್ಕೆ ಡಿಜಿ ಮತ್ತು ಐಜಿಪಿ ಸಲೀಂ ಅವರಿಗೆ ವರದಿ ಮಾಡುವ ಎಸ್‌ಐಟಿಯ ನೇತೃತ್ವ ವಹಿಸುತ್ತೇವೆ. ಅಂತಿಮ ವರದಿಯನ್ನು ಸಹ ಅವರಿಗೆ ಸಲ್ಲಿಸಲಾಗುತ್ತದೆ ಎಂದು ಹೇಳಿದರು.

ಒತ್ತಡದಿಂದ ಎಸ್‌ಐಟಿ ರಚಿಸಲಾಗಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿ, ಇದು ಯಾವುದೇ ಒತ್ತಡದಿಂದಾಗಿ ಮಾಡಿಲ್ಲ. ಪ್ರಕರಣದ ಸಾಧಕ-ಬಾಧಕಗಳನ್ನು ಮತ್ತು ಅದರ ಸ್ಥಿತಿಗತಿಗಳನ್ನು ನಾವು ನೋಡಬೇಕು. ಮೊದಲು ಪ್ರಾಥಮಿಕ ತನಿಖೆಯನ್ನು ಬಯಸುತ್ತೇವೆ. ಇದರಲ್ಲಿ ಮರೆಮಾಚುವ ಯಾವುದೇ ಪ್ರಶ್ನೆ ಇಲ್ಲ. ಪ್ರಾಥಮಿಕ ತನಿಖೆಗೆ ನಾವು ಸಮಯ ತೆಗೆದುಕೊಂಡಿದ್ದೇವೆ. ಅಂತಿಮ ವರದಿಯ ಬಳಿಕ ಮುಂದಿನ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಧರ್ಮಸ್ಥಳ ಪ್ರಕರಣವನ್ನು ಸಣ್ಣ ದೂರು ಎಂದು ಅವರು ಭಾವಿಸಿಲ್ಲ. ಸಾಮಾನ್ಯವಾಗಿ ಯಾವುದೇ ಪ್ರಕರಣವಾದರೂ ಪೊಲೀಸ್ ಠಾಣೆ ಮಟ್ಟದಲ್ಲಿ, ಪ್ರಾಥಮಿಕ ತನಿಖೆ ಪ್ರಾರಂಭವಾಗುತ್ತದೆ. ಅದು ಬೆಳೆದಾಗ, ತನಿಖೆ ವಿಭಿನ್ನ ತಿರುವು ಪಡೆಯುತ್ತದೆ ಎಂದು ಹೇಳಿದರು.

ಎಸ್‌ಐಟಿ ಸೌಜನ್ಯ ಪ್ರಕರಣವನ್ನು ತನಿಖೆ ನಡೆಸುವುದಿಲ್ಲ. ಇಲ್ಲಿ ಈಗ ದೂರು ನೀಡಿರುವ ಪ್ರಕರಣದ ಕುರಿತು ಮಾತ್ರ ತನಿಖೆಯಾಗುತ್ತದೆ. ಈ ಬಗ್ಗೆ ಎಸ್‌ಐಟಿ ರಚನೆ ವೇಳೆಯೇ ನಿಬಂಧನೆಗಳನ್ನೂ ತಿಳಿಸಿದ್ದೇವೆಂದು ತಿಳಿಸಿದರು.

# 'ಬಾಯ್ಮುಚ್ಚಿಕೊಂಡಿರಿ'
## ಕಾಂಗ್ರೆಸ್ ಸಚಿವರು, ಶಾಸಕರಿಗೆ ಮಲ್ಲಿಕಾರ್ಜುನ ಖರ್ಗೆ ವಾರ್ನಿಂಗ್!



**ಬೆಂಗಳೂರು:** ನಾಯಕತ್ವದ ಬಗ್ಗೆ ಗೊಂದಲ ಮೂಡಿಸುವ ಹೇಳಿಕೆ ನೀಡುವುದನ್ನು ನಿಲ್ಲಿಸಬೇಕು. ಈ ವಿಚಾರವನ್ನು ಹೈಕಮಾಂಡ್ ನೋಡಿಕೊಳ್ಳುತ್ತದೆ ಎಂದು ರಾಜ್ಯ ಕಾಂಗ್ರೆಸಿಗರಿಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಖಡಕ್ ವಾರ್ನಿಂಗ್ ಕೊಟ್ಟಿದ್ದಾರೆ.

ತಾವೇ ಪೂರ್ಣಾವಧಿ ಮುಖ್ಯಮಂತ್ರಿಯೆಂದು ದಿಲ್ಲಿಯಲ್ಲಿಸಿದ್ದರಾಮಯ್ಯ ಅವರು ನೀಡಿದ ಹೇಳಿಕೆ, ಪಕ್ಷದ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ನಡೆಸಿದ ಸಭೆಗಳಿಂದ ಆಡಳಿತಾರೂಢ ಕಾಂಗ್ರೆಸ್‌ನಲ್ಲಿಏನೋ ಆಗುತ್ತಿದೆ ಎಂಬ ಚರ್ಚೆಗೆ ಆಸ್ಪದವಾಗಿದೆ. ಪಕ್ಷ, ಸರಕಾರ-ಕ್ಕೆ ಮುಜುಗರ ತರುವ ಹೇಳಿಕೆ ನೀಡದಂತೆ ಹೈಕಮಾಂಡ್ ಹತ್ತಾರು ಬಾರಿ ಕಟ್ಟಪ್ಪಣೆ ಮಾಡಿದರೂ ಬಣ ರಾಜಕೀಯದ ತಾಕಲಾಟ ನಿಂತಿಲ್ಲ.

ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಇಬ್ಬರಿಗೂ ಎಐಸಿಸಿ ಅಧ್ಯಕ್ಷರು ಕಿವಿಮಾತು ಹೇಳಿದ್ದಾರೆ. ಚುನಾವಣಾ ಪೂರ್ವ ಭರವಸೆ ಈಡೇರಿಸುವುದು ಮತ್ತು ಉತ್ತಮ ಆಡಳಿತ ನೀಡುವುದು ಸರಕಾರದ ಆದ್ಯತೆಯಾಗಬೇಕು. ಪಕ್ಷದಲ್ಲಿ ಗುಂಪುಗಾರಿಕೆ, ಸ್ಥಾನಮಾನಕ್ಕಾಗಿ ಪೈಪೋಟಿ ನಡೆಯುತ್ತಿದ್ದರೆ ಜನರಿಗೆ ಕೊಟ್ಟ ಮಾತನ್ನು ಉಳಿಸಿಕೊಳ್ಳಲು ಆಗುವುದಿಲ್ಲಎಂದು ನೇರವಾಗಿ ಹೇಳಿದ್ದಾರೆ ಎನ್ನಲಾಗಿದೆ.

ರಾಜ್ಯ ಸರಕಾರದ ಮೇಲೆ ಹೈಕಮಾಂಡ್ ಬಹಳ ನಿರೀಕ್ಷೆ ಇರಿಸಿಕೊಂಡಿದೆ. ಹಾಗಿರುವಾಗ ಕುರ್ಚಿ ಕಲಹ ಮುಂದುವರಿದರೆ ಸರಕಾರದ ಸ್ಥಿರತೆಯ ಪ್ರಶ್ನೆಯೂ ಉದ್ಭವವಾಗುತ್ತದೆ. ಇಂಥದ್ದಕ್ಕೆ ಅವಕಾಶ ನೀಡಲೇಬಾರದು. ಯಾವ ಕಾಲದಲ್ಲಿಯಾವ ನಿರ್ಧಾರ ಕೈಗೊಳ್ಳಬೇಕು ಎಂಬುದನ್ನು ಹೈಕಮಾಂಡ್ ನಿರ್ಣಯಿಸುತ್ತದೆ. ಅದರ ಬಗ್ಗೆ ರಾಜ್ಯ ಘಟಕ ತಲೆಕೆಡಿಸಿಕೊಳ್ಳುವುದು ಬೇಡ ಖರ್ಗೆ ಸೂಚನೆ ಕೊಟ್ಟಿದ್ದಾರೆ ಎಂದು ತಿಳಿದು ಬಂದಿದೆ.

ಸಚಿವರಿಗೆ ಮಲ್ಲಿಕಾರ್ಜುನ ಖರ್ಗೆ ಎಚ್ಚರಿಕೆ

ಸಚಿವ ಸಂಪುಟದ ಸದಸ್ಯರಿಗೂ ಎಚ್ಚರಿಕೆ ನೀಡಿರುವ ಎಐಸಿಸಿ ಅಧ್ಯಕ್ಷರು, "ಸಚಿವರುಗಳು ಬಾಯಿ ಮುಚ್ಚಿಕೊಂಡು ತಮ್ಮ ಇಲಾಖೆಯ ಕೆಲಸ ಮಾಡುವ ಮೂಲಕ ಸರಕಾರ, ಪಕ್ಷದ ವರ್ಚಸ್ಸು ಹೆಚ್ಚಿಸಬೇಕು. ಅದನ್ನು ಬಿಟ್ಟು ನಾಯಕತ್ವದ ಚರ್ಚೆಯನ್ನು ಚಾಲ್ತಿಯಲ್ಲಿಟ್ಟರೆ ಹೈಕಮಾಂಡ್ ಗಂಭೀರವಾಗಿ ಪರಿಗಣಿಸುತ್ತದೆ. ಇಂಥವರನ್ನು ಮುಲಾಜಿಲ್ಲದೇ ಸಂಪುಟದಿಂದ ಹೊರಗಟ್ಟಲು ಸೂಚಿಸಲಾಗುತ್ತದೆ.

# ಸಣ್ಣ ವ್ಯಾಪಾರಿಗಳಿಗೆ ಜಿಎಸ್‌ಟಿ ನೋಟಿಸ್ ಗೊಂದಲಕ್ಕೆ ಕೇಂದ್ರ ಸರ್ಕಾರವೇ ಹೊಣೆ: ಸಿಎಂ ಸ್ಪಷ್ಟನೆ



**ಬೆಂಗಳೂರು:** ಸಣ್ಣ ವ್ಯಾಪಾರಿಗಳಿಗೆ ಜಿಎಸ್‌ಟಿ ತೆರಿಗೆಯ ನೋಟಿಸ್ ನೀಡಿರುವ ಸಂಬಂಧ ಪಟ್ಟಂತೆ ರಾಜ್ಯಸರ್ಕಾರ ಯಾವುದೇ ಜವಾಬ್ದಾರಿ ಹೊಂದಿಲ್ಲ. ಕೇಂದ್ರ ಸರ್ಕಾರವೇ ಹೊಣೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ.


ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಜಿಎಸ್‌ಟಿ ಕಾಯ್ದೆ ಮಾಡಿರುವುದು ಕೇಂದ್ರ ಸರ್ಕಾರ. ಜಿಎಸ್‌ಟಿ ಕೌನ್ಸಿಲ್ ಕೂಡ ರಾಜ್ಯ ಸರ್ಕಾರದ ಅಧೀನದಲ್ಲಿ ಇಲ್ಲ. ಹೀಗಾಗಿ ಕೇಂದ್ರ ಸರ್ಕಾರವೇ ಹೊಣೆಗಾರಿಕೆ ಹೊಂದಿದೆ ಎಂದರು.

ರಾಜ್ಯ ಸರ್ಕಾರದಿಂದ ಸಣ್ಣ ವ್ಯಾಪಾರಿಗಳಿಗೆ ಅನುಕೂಲ ಮಾಡಲು ಯಾವುದಾದರೂ ಅವಕಾಶಗಳು ಇದ್ದರೆ ಅದರ ಬಗ್ಗೆ ರಾಜ್ಯ ಸರ್ಕಾರದ ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚೆ ಮಾಡುತ್ತೇವೆ. ಕೇಂದ್ರ ಸರ್ಕಾರದ ಜೊತೆಗೂ ಈ ಬಗ್ಗೆ ಸಮಾಲೋಚನೆ ನಡೆಸುವುದಾಗಿ ಹೇಳಿದರು.

ಡಿ.ಕೆ.ಶಿವಕುಮಾರ್ ಅಪಮಾನ ಮಾಡಿಲ್ಲ: ನಿನ್ನೆ ಮೈಸೂರಿನಲ್ಲಿ ನಡೆದ ಸಾಧನ ಸಮಾವೇಶದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಅಪಮಾನ ಮಾಡಿಲ್ಲ. ಬಿಜೆಪಿ ಈ ವಿಚಾರವನ್ನು ದುರ್ಬಳಕೆ ಮಾಡಿಕೊಂಡು ರಾಜಕೀಯ ಲಾಭ ಮಾಡಿಕೊಳ್ಳಲು ಪ್ರಯತ್ನಿಸುತ್ತಿದೆ. ಆದರೆ ಅದರಿಂದ ಯಾವುದೇ ಪ್ರಯೋಜನವಾಗುವುದಿಲ್ಲ ಎಂದರು.

ಡಿ.ಕೆ. ಶಿವಕುಮಾರ್ ಅವರು ಕಾರ್ಯಕ್ರಮದಲ್ಲಿ ಇರಲಿಲ್ಲ. ಹಾಗಾಗಿ ಅವರ ಹೆಸರನ್ನು ಕರೆಯಲಿಲ್ಲ. ಬಿಜೆಪಿ ಮೊಸರಲ್ಲಿ ಕಲ್ಲು ಹುಡುಕುವ ಪ್ರಯತ್ನ ಮಾಡುತ್ತಿದೆ. ಯಾರು ಇರುತ್ತಾರೋ ಅವರ ಹೆಸರನ್ನು ಕರೆಯುವುದು ರೂಢಿ ಎಂದರು.

# ಅಕ್ರಮ ವಲಸಿಗರ ವಿರುದ್ಧ ಕ್ರಮಕ್ಕೆ ಆಗ್ರಹ
## ನಗರ ಪೊಲೀಸ್ ಆಯುಕ್ತರಿಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪತ್ರ



**ಬೆಂಗಳೂರು:** ಹೆಬ್ಬಾಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಅಮಾನಿಕೆರೆ ಗ್ರಾಮದಲ್ಲಿ ನೆಲೆಸಿರುವ ಅಕ್ರಮ ವಲಸಿಗರ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರಿಗೆ ಪತ್ರ ಬರೆದಿದ್ದಾರೆ.


ಪತ್ರದಲ್ಲಿ 'ಹೆಬ್ಬಾಳದಲ್ಲಿ ಬಿಎಂಆರ್‌ಸಿಎಲ್ ಕಾಮಗಾರಿ ಪರಿಶೀಲನೆ ವೇಳೆ ಅಮಾನಿಕೆರೆ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದಾಗ, ಅಕ್ರಮ ವಲಸಿಗರು ವಾಸಿಸುತ್ತಿರುವುದು ಗಮನಕ್ಕೆ ಬಂದಿತು. ಬಾಂಗ್ಲಾದೇಶದ ಅಂದಾಜು 3,500 ಪ್ರಜೆಗಳನ್ನು ಗುತ್ತಿಗೆದಾರರು ನಗರಕ್ಕೆ ಕರೆತಂದಿದ್ದಾರೆ.

ಅವರ ಬಳಿ ನಕಲಿ ಆಧಾರ್ ಕಾರ್ಡ್, ಗುರುತಿನ ಚೀಟಿ ಇದೆ. ಅಕ್ರಮವಾಗಿ ಶೆಡ್ ಹಾಕಿಕೊಂಡು, ವಿದ್ಯುತ್ ಸಂಪರ್ಕ ಪಡೆದುಕೊಂಡಿದ್ದಾರೆ. ರಾಷ್ಟ್ರೀಯ ಭದ್ರತಾ ಹಿತದೃಷ್ಟಿಯಿಂದ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ನಿಯಮಬಾಹಿರವಾಗಿ ಪ್ಲಾಸ್ಟಿಕ್, ತ್ಯಾಜ್ಯವನ್ನು ಇಲ್ಲಿ ಶೇಖರಿಸಿ ಸುಡುವ ಕೆಲಸ ಮಾಡುತ್ತಿದ್ದಾರೆ. ಕಸದ ತಾಣವಾಗಿ ಮಾರ್ಪಟ್ಟಿದೆ. ಇದರಿಂದ ಪರಿಸರ ಹಾಳಾಗುತ್ತಿದೆ. ಇದು ಹೆಬ್ಬಾಳ ನಿವಾಸಿಗಳಿಗೆ ತೀವ್ರಆರೋಗ್ಯಮತ್ತುಪರಿಸರಅಪಾಯಗಳನ್ನುಂಟುಮಾಡುತ್ತಿದೆ.

ಹೀಗಾಗಿ ತಕ್ಷಣ ಪೊಲೀಸರು ವಿಶೇಷ ಕಾರ್ಯಾಚರಣೆ ನಡೆಸಬೇಕು. ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿ (ಎಫ್‌ಆರ್‌ಆರ್‌ಒ) ಅಧಿಕಾರಿಗಳು ಕೂಡಲೇ ವಲಸಿಗರ ದಾಖಲೆ ಪರಿಶೀಲನೆ ನಡೆಸಬೇಕು. ವಲಸಿಗರನ್ನು ನಗರಕ್ಕೆ ಕರೆತಂದು, ನಕಲಿ ಆಧಾರ್, ಗುರುತಿನ ಚೀಟಿ ನೀಡಿರುವ ಗುತ್ತಿಗೆದಾರರು ಮತ್ತು ಏಜೆಂಟರನ್ನು ಪತ್ತೆ ಹಚ್ಚಿ ಕ್ರಮ ಕೈಗೊಳ್ಳಬೇಕು. ಹೆಚ್ಚುವರಿಯಾಗಿ, ಈ ಪ್ರದೇಶದಲ್ಲಿ ಕಸ ಸುಡುವುದನ್ನು ನಿಲ್ಲಿಸಲು ಮತ್ತು ಅಕ್ರಮ ಅತಿಕ್ರಮಣಗಳನ್ನು ತೆರವುಗೊಳಿಸಲು ಬಿಬಿಎಂಪಿ ಮಧ್ಯಪ್ರವೇಶಿಸಬೇಕೆಂದು ಒತ್ತಾಯಿಸಿದ್ದಾರೆ.

# 'ದೂರಾಗದ ಸ್ನೇಹಿತರು ನಾವು'
## ವೈಮನಸ್ಸು ಬದಿಗೊತ್ತಿ ಮತ್ತೆ ಒಂದಾದ ಜನಾರ್ಧನ ರೆಡ್ಡಿ - ಶ್ರೀರಾಮುಲು!



**ಕೊಪ್ಪಳ:** ಸಂಡೂರು ಉಪಚುನಾವಣೆಯ ಫಲಿತಾಂಶದ ಬಳಿಕ ಪರಸ್ಪರ ಟೀಕಾಪ್ರಹಾರಗಳಲ್ಲಿ ತೊಡಗಿ ಮುನಿಸಿಕೊಂಡಿದ್ದ ಬಿಜೆಪಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಮತ್ತು ಮಾಜಿ ಸಚಿವ ಬಿ. ಶ್ರೀರಾಮುಲು ಅವರು, ವೈಮನಸ್ಸು ಬದಿಗೊತ್ತಿ ಮತ್ತೆ ಒಂದಾಗಿದ್ದಾರೆ.

ತಾಲ್ಲೂಕಿನ ಮರಳಿ ಗ್ರಾಮದ ಸಮೀಪದಲ್ಲಿ ಭಾನುವಾರ ನಡೆದ ಪಕ್ಷದ ಅವಲೋಕನಾ ಸಭೆಯಲ್ಲಿ ಒಂದೇ ವೇದಿಕೆಯಲ್ಲಿ ಇಬ್ಬರೂ ನಾಯಕರು ಕಾಣಿಸಿಕೊಂಡರು. ಈ ಮೂಲಕ ನಾವಿಬ್ಬರೂ ದೂರಾಗದ ಸ್ನೇಹಿತರು ಎಂಬ ಸಂದೇಶವನ್ನು ಸಾರಿದರು.

ನರೇಂದ್ರ ಮೋದಿ ಅವರು ಪ್ರಧಾನಿಯಾಗಿ 11 ವರ್ಷಗಳಾಗಿದ್ದರಿಂದ ಅವರ ಸಾಧನೆ ತಿಳಿಸಲು ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಸಭೆ ನಡೆಯಿತು.

ವಿಜಯೇಂದ್ರ ಅವರಿಬ್ಬರ ಕೈಗಳನ್ನೂ ಎತ್ತಿ ಹಿಡಿದು ಮುನಿಸು ಮರೆಯುವಂತೆ ಮಾಡಿದರು. ಕಾರ್ಯಕ್ರಮದಲ್ಲಿ ರೆಡ್ಡಿ ಮತ್ತು ಶ್ರೀರಾಮುಲು ಅಕ್ಕಪಕ್ಕದಲ್ಲಿಯೇ ಕುಳಿತರು.

ಬಳಿಕ ಮಾತನಾಡಿದ ವಿಜಯೇಂದ್ರ ಅವರು, ಪಕ್ಷವನ್ನು ಬೇರಿನಿಂದಲೇ ಗಟ್ಟಿಯಾಗಿ ನಿಲ್ಲುವಂತೆ ಮಾಡಲು ಸ್ಥಳೀಯ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರಿಗೆ ಸಲಹೆ ನೀಡಿದರು.

ಜನಾರ್ದನ ರೆಡ್ಡಿ ಮಾತನಾಡಿ 'ನಮ್ಮ ನಡುವೆ ಮಧ್ಯಸ್ಥಿಕೆ ಮಾಡಲು ಯಾರಾದರೂ ಮುಂದಾದರೆ ಅವರಂಥ ಮೂರ್ಖರು ಯಾರೂ ಇಲ್ಲ. ನಮಗೆ ಸಂಧಾನದ ಅಗತ್ಯವಿಲ್ಲ. ನಮ್ಮದು ಸ್ನೇಹದ ಜಗಳ. ಇದರ ಲಾಭ ಪಡೆಯಲು ಪ್ರಯತ್ನಿಸಿದವರಿಗೆ ಏನೂ ಸಿಗುವುದಿಲ್ಲ. ಅದೊಂದು ಕೆಟ್ಟ ಘಳಿಗೆ. ನಾನು, ರಾಮುಲು ಮತ್ತು ವಿಜಯೇಂದ್ರ ಓಡಾಡಿ ನಮ್ಮ ಪಕ್ಷ ಅಧಿಕಾರಕ್ಕೆ ತರುತ್ತೇವೆ ಎಂದರು.

ಶ್ರೀರಾಮುಲು ಮಾತನಾಡಿ ಪಕ್ಷದ ವಿಚಾರ ಬಂದಾಗ ನಾವು ಮಾದರಿಯಾಗಬೇಕು. ಕಾಂಗ್ರೆಸ್ಸಿಗರ ರೀತಿಯಲ್ಲಿ ಹರಕೆಯ ಕುರಿ ಆಗಬಾರದು. ಪಕ್ಷ ಸಂಘಟನೆಗಾಗಿ ಎಲ್ಲರೂ ಒಂದಾಗಿ ಕೆಲಸ ಮಾಡುತ್ತೇವೆ. ಜನಾರ್ದನ ರೆಡ್ಡಿ ಜೊತೆ ಯಾವುದೇ ಮುನಿಸು ಇಲ್ಲ' ಎಂದು ಹೇಳಿದರು.

ಜನಾರ್ದನ ರೆಡ್ಡಿ ಹಾಗೂ ಶ್ರೀರಾಮುಲು ಒಂದಾಗಿರುವ ಹಿನ್ನೆಲೆಯಲ್ಲಿ ಕೊಪ್ಪಳ ಮತ್ತು ವಿಜಯನಗರದ ಬಿಜೆಪಿ ಕಾರ್ಯಕರ್ತರು ಸಂತೋಷವನ್ನು ವ್ಯಕ್ತಪಡಿಸಿದ್ದು, ಪಕ್ಷವನ್ನು ನಿರ್ಮಿಸುವಲ್ಲಿ ಒಗ್ಗೂಡಿ, ಸಕ್ರಿಯವಾಗಿ ಕಾರ್ಯನಿರ್ವಹಿಸುವುದಾಗಿ ಹೇಳಿದ್ದಾರೆ.

## ರಂಗ ತರಗತಿಗಳು ಪ್ರಾರಂಭ

**ದಾವಣಗೆರೆ:** ಇಲ್ಲಿನ ಸರಸ್ವತಿ ನಗರದಲ್ಲಿರುವ ಬಸವ ಬಳಗದ ವಿಕಸಂ ರಂಗಶಾಲೆಯಲ್ಲಿ1 ರಿಂದ 9 ನೇ ತರಗತಿಯ ಮಕ್ಕಳಿಗೆ ಪ್ರತೀ ಶನಿವಾರ ಮತ್ತು ಭಾನುವಾರ ರಂಗ ತರಗತಿಗಳು ನಡೆಯಲಿದ್ದು, ಇದು 8 ತಿಂಗಳ ತರಬೇತಿಯಾಗಿದೆ ಆಸಕ್ತರು ಸಂಪರ್ಕಿಸುವಂತೆ ತಿಳಿಸಲಾಗಿದೆ.ಇದೀಗ ಪ್ರವೇಶ ಪ್ರಾರಂಭವಾಗುತ್ತಿದ್ದು, ಸ್ಪಷ್ಟ ಕನ್ನಡ ಬರುವ ಆಸಕ್ತ ಮಕ್ಕಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು. ತಜ್ಞ ರಂಗ ಕಲಾವಿದರಿಂದ ತರಬೇತಿ ನೀಡಲಾಗುವುದು. ತರಬೇತಿಯ ಅವಧಿಯಲ್ಲಿ ಯೋಗ, ಧ್ಯಾನ, ಚಿತ್ರರಚನೆ, ನೃತ್ಯ, ಸಂಗೀತ, ಮೇಕಪ್, ರಂಗ ಪರಿಕರ ತಯಾರಿಕೆ, ರಂಗ ಸಜ್ಜಿಕೆ ನಿರ್ಮಾಣ, ನಟನೆ, ನೃತ್ಯರೂಪಕ ಮತ್ತು ನಾಟಕಗಳ ತರಬೇತಿಯನ್ನು ನೀಡಲಾಗುವುದು. ಸಂದರ್ಶನವು ಆ.10 ರಂದು ಬೆಳಿಗ್ಗೆ 10 ಗಂಟೆಗೆ ಏರ್ಪಡಿಸಲಾಗಿದ್ದು, ಹೆಚ್ಚಿನ ಮಾಹಿತಿಗೆ 9900566309, 9743940220 ಸಂಪರ್ಕಿಸಲು ಕೋರಿದೆ.

## ವಿದ್ಯಾರ್ಥಿಗಳಿಗೆ ಭಾಷಣ ಸ್ಪರ್ಧೆ

**ದಾವಣಗೆರೆ:** ದಾವಣಗೆರೆ ನೇತ್ರಾಲಯ ಕಣ್ಣಿನ ಆಸ್ಪತ್ರೆ ಘಟಕದ ವತಿಯಿಂದ ಅಂತರಾಷ್ಟೀಯ ಯುವ ದಿನ ಹಾಗೂ ಸ್ವಾಮಿ ವಿವೇಕಾನಂದರ 163 ನೇ ಜನ್ಮ ದಿನಾಚರಣೆಯ ಪ್ರಯುಕ್ತ ವಿದ್ಯಾರ್ಥಿಗಳಿಗೆ ಭಾಷಣ ಸ್ಪರ್ಧೆ ಆಯೋಜಿಸಲಾಗಿದೆ.

ಯುವ ಪೀಳಿಗೆ ಎದುರಿಸುತ್ತಿರುವ ಸಮಸ್ಯೆಗಳು ವಿಷಯ ಕುರಿತು ಮೂರು ನಿಮಿಷದ ಒಳಗಿರುವ ಭಾಷಣದ ವೀಡಿಯೋವನ್ನು ಆಗಸ್ಟ್ 9 ರೊಳಗಾಗಿ ವಾಟ್ಸಪ್ ಮೊ: 8310160894 ಗೆ ಕಳಿಸುವಂತೆ ಕೋರಲಾಗಿದ್ದು, ಅತ್ಯುತ್ತಮ ಭಾಷಣ ವಿಜೇತರಿಗೆ ಆ.12 ರಂದು ಸಂಜೆ 5 ಗಂಟೆಗೆ ನಗರದ ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪದ ಪಕ್ಕದಲ್ಲಿರುವ ದಾವಣಗೆರೆ ನೇತ್ರಾಲಯದಲ್ಲಿ ಕೊಡಮಾಡಲಾಗುವುದು ಎಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ: 08192222565 ಸಂಪರ್ಕಿಸಬಹುದಾಗಿದೆ. ಭಾಷಣ ಮಾಡಿದ ಮೊದಲ ಮೂರು ವಿದ್ಯಾರ್ಥಿಗಳಿಗೆ ವಿಶೇಷ ಬಹುಮಾನ ಹಾಗೂ ಈ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲಾ ಮಕ್ಕಳಿಗೆ ಪ್ರಶಸ್ತಿ ಪತ್ರ ಹಾಗೂ ಸಮಾಧಾನ ಬಹುಮಾನ ನೀಡಲಾಗುವುದು ಎಂದು ತಿಳಿಸಲಾಗಿದೆ.

## ಶ್ರೀ ಮಹರ್ಷಿ ವಾಲ್ಮೀಕಿ ಕಂಚಿನ ಪ್ರತಿಮೆ ನಿರ್ಮಾಣ : ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**ದಾವಣಗೆರೆ:** ಜಿಲ್ಲೆಯ ಹರಿಹರ ತಾಲ್ಲೂಕಿನ ಜಿಗಳಿ ಗ್ರಾಮದ ಅಗಸಿಬಾಗಿಲ ಬಳಿ ಪೂರ್ವ-ಪಶ್ಚಿಮ 12.50 ಹಾಗೂ ಉತ್ತರ-ದಕ್ಷಿಣವಾಗಿ 14 ಅಡಿ ಶ್ರೀ ಮಹರ್ಷಿ ವಾಲ್ಮೀಕಿ ಕಂಚಿನ ಪ್ರತಿಮೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಕುರಿತು ಸ್ಥಳೀಯವಾಗಿ ಯಾವುದೇ ದೂರು ಮತ್ತು ಆಕ್ಷೇಪಣೆಗಳು ಇದ್ದಲ್ಲಿ ಆಗಸ್ಟ್ 20ರೊಳಗಾಗಿ ಲಿಖಿತವಾಗಿ ಜಿಗಳಿ ಗ್ರಾಮ ಪಂಚಾಯಿತಿ ಕಾರ್ಯಾಲಯಕ್ಕೆ ಸಲ್ಲಿಸಬಹುದು ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾಸಂತ ಗೋಸ್ವಾಮಿ ತುಲಸೀದಾಸರು

**ಶ್ರಾ**ವಣ ಶುದ್ಧ ಸಪ್ತಮಿ ಅಂದರೆ ಈ ವರ್ಷ ಜುಲೈ 31 ರಂದುಸಂತ ಗೋಸ್ವಾಮಿ ತುಲಸೀದಾಸರ ಜಯಂತಿಯಿದೆ. ಅವರು ಉತ್ತರಪ್ರದೇಶದ ಮಹಾನ್ ಸಂತರಾಗಿದ್ದು, ಅವರನ್ನು ಮಹರ್ಷಿ ವಾಲ್ಮೀಕಿಋಷಿಯ ಅವತಾರವೆಂದು ಹೇಳಲಾಗುತ್ತದೆ. ಅವರು ರಾಮಚರಿತಮಾನಸ, ಅಯೋಧ್ಯಾಕಾಂಡ, ಸುಂದರಕಾಂಡ ಮತ್ತು ಹಲವಾರು ಮಹಾನ್ ಆಧ್ಯಾತ್ಮಿಕ ಗ್ರಂಥಗಳನ್ನು ರಚಿಸಿದ್ದಾರೆ. ಅವರಜಯಂತಿಯ ಪ್ರಯುಕ್ತ ಅವರ ಜೀವನದ ಸಂಕ್ಷಿಪ್ತ ಪರಿಚಯಮಾಡಿಕೊಳ್ಳೋಣ.

**ಸಂತ ತುಲಸೀದಾಸರು:**

ಜನನ:ಇಸವಿ 1511, ಆಗಸ್ಟ್ 16 (ವಿಕ್ರಮ್ ಸಂವತ್ಸರ 1568)

ದೇಹತ್ಯಾಗ:ಇಸವಿ 1623, ಜುಲೈ 30 (ವಿಕ್ರಮ್ ಸಂವತ್ಸರ 1680)

ಉತ್ತರಪ್ರದೇಶದ ಹಸ್ತಿನಾಪುರದಲ್ಲಿ ಶ್ರಾವಣ ಶುಕ್ಲ ಸಪ್ತಮಿಗೆ, ಮಾತೆ ಹುಲಸಿಯ ಮನೆಯಲ್ಲಿ ತುಲಸೀದಾಸರು ಜನಿಸಿದರು. ಅವರು ತಾಯಿಯ ಗರ್ಭದಲ್ಲಿ 12 ತಿಂಗಳುಗಳಿದ್ದರು. ಜನನದಸಮಯದಲ್ಲಿ, ಅದುಮೂಲಾನಕ್ಷತ್ರ, ಅವನಬಾಯಿಯಲ್ಲಿಮೂವತ್ತೆರಡುಹಲ್ಲುಗಳಿದ್ದವು, ಅವನಎತ್ತರಐದುವರ್ಷದಮಗುವಿನಂತಿತ್ತು. ಜನನದಸಮಯದಲ್ಲಿ, ಮಗುಅಳಲಿಲ್ಲ,ಅವನಬಾಯಿಂದ 'ರಾಮ' ಎಂಬಹೆಸರುಹೊರಬಂದಿತು. ಅಂತಹಅದ್ಭುತಆದರೆಅಶುಭಲಕ್ಷಣನೋಡಿದಪೋಷಕರುಮಗುವನು ಚಿನ್ನದಜೊತೆಗೆಚುನಿಯಾಎಂಬಸೇವಕಿಗೆಒಪ್ಪಿಸಿದರು.ನಂತರಅವರತಾಯಿಹುಲಸಿಕೂಡನಿಧನರಾದರು. ಚುನಿಯಾದಾಸಿಅವರನ್ನುಐದುವರ್ಷಗಳಕಾಲಬೆಳೆಸಿದರು. ನಂತರಚುನಿಯಾಕೂಡನಿಧನರಾದರು. ಮಗುಒಂಟಿಜೀವನನಡೆಸುತ್ತಿತ್ತು, ನಂತರಜಗಜ್ಜನನಿಪಾರ್ವತಿಸ್ವತಃಬ್ರಾಹ್ಮಣಮಹಿಳೆಯವೇಷದಲಿ ಬಂದುಮಗುವನ್ನುನರಸಿಂಹದಾಸಎಂಬಸಂತರಿಗೆ ಒಪ್ಪಿಸಿದರು.ನರಸಿಂಹದಾಸರುಅವನನ್ನುಬೆಳೆಸಿದರು. ಉಪನಯನಮಾಡಿದನಂತರ, ಆಹುಡುಗನಿಗೆ 'ರಾಮಬೋಲಎಂದುಹೆಸರಿಡಲಾಯಿತು. ಅವರೇ ತುಲಸೀದಾಸರು.

**ಅಧ್ಯಯನ:**

ಅಯೋಧ್ಯೆಯಲ್ಲಿ 12 ವರ್ಷಗಳ ಕಾಲ ಗುರುಸಾನ್ನಿಧ್ಯದಲ್ಲಿ ವೇದ-ಶಾಸ್ತ್ರಗಳ ಅಧ್ಯಯನ ಮಾಡಿ ಹಸ್ತಿನಾಪುರಕ್ಕೆ ಹಿಂದಿರುಗಿದರು. ಅಲ್ಲಿ ತಮ್ಮ ತಂದೆ ಆತ್ಮಾರಾಮ ದುಬೆಯವರನ್ನು ಭೇಟಿಯಾದರು. ಆತ್ಮಾರಾಮ ಅವರು ಅಕ್ಬರ್ನ ದರ್ಬಾರಿನಲ್ಲಿದ್ದರು. ಅವರು ಒಮ್ಮೆತುಲಸೀದಾಸರನ್ನು ಅಕಬರ್ನ ಬಳಿಗೆ ಕರೆದೊಯ್ದರು. ಅಕಬರ್ ಗೆ ತುಳಸಿದಾಸರು ಅತ್ಯಂತ ಪ್ರಿಯರಾದರು. ಅವರು ಬೇಟೆಗೆ ಹೋದಾಗಲೂ ಇವರನ್ನು ಜೊತೆಗೆ ಕರೆದೊಯ್ಯುತ್ತಿದ್ದರು.


ವಿವಾಹ ಮತ್ತು ವೈರಾಗ್ಯ:

ತುಲಸೀದಾಸರ ತಂದೆ ಆತ್ಮಾರಾಮರು ಅವರ ವಿವಾಹವನ್ನು ಶ್ರೀಮಂತ ವ್ಯಕ್ತಿಯ ಪುತ್ರಿ ರತ್ನಾವಳಿಯೊಂದಿಗೆ ನಿಶ್ಚಯಿಸಿದರು. ಅದ್ದೂರಿಯಾಗಿ ಮದುವೆ ಮಾಡಿದರು.ಇಬ್ಬರಿಗೂ ಪರಸ್ಪರ ಅಪಾರ ಪ್ರೇಮವಿತ್ತು. ತುಲಸೀದಾಸರಿಗೆ ರತ್ನಾವಳಿಯನ್ನು ಬಿಟ್ಟಿರಲು ಆಗುತ್ತಿರಲಿಲ್ಲ.

ಒಂದು ದಿನ, ತುಲಸೀದಾಸರು ಅಕ್ಬರನೊಂದಿಗೆ ದೂರ ದೇಶಕ್ಕೆ ಹೋಗಿದ್ದರು. ರತ್ನಾವಳಿ ಸಹ ತನ್ನ ತವರಿಗೆ ಹೋಗಿದ್ದಳು, ಇದು ತಿಳಿದತುಲಸೀದಾಸರು ರಾತ್ರೋರಾತ್ರಿ ಅವರ ಮಾವನಮನೆ ತಲುಪಿದರು. ಮನೆ ಬಾಗಿಲುಗಳೆಲ್ಲ ಮುಚ್ಚಿದ್ದವು. ತುಲಸೀದಾಸರು ಒಳಗೆ ಹೇಗೆ ಪ್ರವೇಶ ಮಾಡುವುದೆಂದು ಯೋಚಿಸತೊಡಗಿದರು. ಅವರು ರತ್ನಾವಳಿಯನ್ನು ಭೇಟಿ ಮಾಡಲು ಅತ್ಯಂತ ಆತುರರಾಗಿದ್ದರು. ಅವರು ಹತ್ತಿರದ ಕಿಟಕಿಯಲ್ಲಿದ್ದ ಒಂದು ಸರ್ಪವನ್ನು ಹಗ್ಗವೆಂದು ತಿಳಿದು ಅದನ್ನು ಹಿಡಿದು ಒಳಗೆ ಹೋದರು. ಮನೆಯವರೆಲ್ಲ ಎಚ್ಚರಗೊಂಡರು, ತುಲಸೀದಾಸರು ಬಂದ ವಿಷಯವನ್ನು ರತ್ನಾವಳಿಗೆ ಅವರ ತಾಯಿ ತಿಳಿಸಿದರು. ರತ್ನಾವಳಿ ತುಲಸೀದಾಸರ ಬಳಿ ಬಂದು ಎಲ್ಲ ಬಾಗಿಲು ಮುಚ್ಚಿರುವಾಗ ನೀವು ಒಳಗೆ ಹೇಗೆ ಬಂದಿರೆಂದು ಕೇಳಿದಳು, ಅದಕ್ಕೆ ತುಲಸೀದಾಸರು, 'ನೀನು ಕಟ್ಟಿದ್ದ ಹಗ್ಗದ ಸಹಾಯ ಪಡೆದು ನಾನು ಬಂದೆ ಎಂದರು, ಇದನ್ನು ಕೇಳಿ ರತ್ನಾವಳಿ ಆಶ್ಚರ್ಯಗೊಂಡಳು. ಮತ್ತು ಕಿಟಕಿ ಬಳಿ ಹೋಗಿ ಸರ್ಪವನ್ನು ಕಂಡಳು. ನಂತರ ಅವಳು ತುಲಸೀದಾಸರಿಗೆ "ಪ್ರಾಣನಾಥ, ನೀವು ನನ್ನನ್ನು ಎಷ್ಟು ಪ್ರೀತಿಸುವಿರೋ, ಅಷ್ಟು ಪ್ರೀತಿ ಪ್ರಭು ಶ್ರೀರಾಮನ ಮೇಲಿಟ್ಟರೆ ತಮ್ಮ ಜೀವನ ಸಾರ್ಥಕಗೊಳ್ಳುವುದು" ಎಂದಳು. ಇದನ್ನು ಕೇಳಿದ ತುಲಸೀದಾಸರು ವಿರಕ್ತರಾದರು. ಅವರ ಮನದಲ್ಲಿ ವೈರಾಗ್ಯ ನಿರ್ಮಾಣವಾಯಿತು. ಮತ್ತು ಅವರು ಅಲ್ಲಿಂದ ಹೊರಟು ಆನಂದವನ ತಲುಪಿದರು. ಅಲ್ಲಿ ಅವರು 12 ವರ್ಷ ತಪಸ್ಸು ಮಾಡಿದರು. ನಂತರ ಅವರು ರಾಮಕಥೆ ಹೇಳಲಾರಂಭಿಸಿದರು.

**ರಾಮದರ್ಶನಕ್ಕಾಗಿ ತುಲಸೀದಾಸರ ಬಯಕೆ:**

ಒಂದು ಬಾರಿ ತುಲಸೀದಾಸರಿಗೆ ಪಿಶಾಚಿಯೊಂದರ ಭೇಟಿಯಾಯಿತು. ಮತ್ತು ಅವನು ತುಲಸೀದಾಸರನ್ನು ನೋಡಿ 'ನಿನಗೆ ಏನು ಬೇಕು ?' ಎಂದು ಕೇಳಿದನು.ತುಳಸೀದಾಸರು ರಾಮನದರ್ಶನ ಮಾಡಿಸೆಂದು ಹೇಳಿದಾಗ, ಪಿಶಾಚಿ ಮುಂದೆ ಮುಂದೆ ಹೋಗಿ "ನೀನು ಪ್ರತಿದಿನ ರಾಮಕಥೆ ಹೇಳುವ ಜಾಗದಲ್ಲಿ ಒಬ್ಬ ವೃದ್ಧ ಬ್ರಾಹ್ಮಣ ಕೈಯಲ್ಲಿ ಲಾಠಿ ಹಿಡಿದು ಎಲ್ಲರಿಗಿಂತ ಮೊದಲು ಬಂದು ಕೂರುತ್ತಾನೆ. ಮತ್ತು ಎಲ್ಲರೂ ಹೋದ ಮೇಲೆ ಹೊರಡುತ್ತಾನೆ, ಅವನೇ ನಿನಗೆ ರಾಮನ ದರ್ಶನ ಮಾಡಿಸಬಹುದು, ಅವನು ವಾಸ್ತವದಲ್ಲಿ ಹನುಮಂತನಾಗಿದ್ದಾನೆ" ಎಂದು ಹೇಳಿಅದೃಶ್ಯವಾಯಿತು. ಮರುದಿನ, ಪುರಾಣಮುಗಿದು, ಬ್ರಾಹ್ಮಣನುಹೊರಡುತ್ತಿದ್ದಾಗತುಲಸೀದಾಸನುದಾರಿಯಲ್ಲಿಅವನನ್ನುತಡೆದುಅವನಿಗೆನಮಸ್ಕರಿಸಿದನು. ಬ್ರಾಹ್ಮಣನು, "ನಾನುಬಡಬ್ರಾಹ್ಮಣ, ನಿನಗೆಕೊಡಲುನನ್ನಲ್ಲಿಏನೂಇಲ್ಲ"ಎಂದುಹೇಳಿದನು.



ತುಲಸೀದಾಸನು, "ನೀನುಹನುಮಾನ್. ನೀನುಮಾತ್ರನನಗೆಶ್ರೀರಾಮನನ್ನುತೋರಿಸಬಲ್ಲೆ"ಎಂದನು.ಹನುಮಂತನುತುಲಸೀದಾಸರನ್ನುವಾಲ್ಮೀಕಿಯಅವತಾರವೆಂದುಗುರುತಿಸಿದನು. ಅವನುತುಲಸೀದಾಸರನ್ನುಪ್ರೀತಿಯಿಂದಅಪ್ಪಿಕೊಂಡನು. ಶೀಘ್ರದಲ್ಲೇರಾಮನದರ್ಶನಮಾಡಿಸುವುದಾಗಿಭರವಸೆನೀಡಿಕಣ್ಮರೆಯಾದನು.ಹನುಮಂತನುಶ್ರೀರಾಮಚಂದ್ರನಿಗೆ, "ನಿಮ್ಮಆದೇಶದಂತೆವಾಲ್ಮೀಕಿತುಲಸೀದಾಸರರೂಪವನ್ನುಪಡೆದಿದ್ದಾನೆ. ಅವನುನಿನ್ನನ್ನುನೋಡಲುತುಂಬಾಕಾತುರನಾಗಿದ್ದಾನೆ"ಎಂದುಹೇಳಿದನು. ಆಗಭಗವಾನ್ಶ್ರೀರಾಮನುವಾಲ್ಮೀಕಿವಿವರಿಸಿದರೂಪದಲ್ಲಿತುಲಸೀದಾಸರಿಗೆಕಾಣಿಸಿಕೊಂಡುಅವರನ್ನುಅಪ್ಪಿಕೊಂಡುಹಣೆಯಮೇಲೆಕೈಯಿಟ್ಟುಕಣ್ಮರೆಯಾದನು.

**ರಚಿಸಿದ ಕೃತಿಗಳು:**

ಹಿಂದಿಸಾಹಿತ್ಯದಲ್ಲಿಕವಿಯಾಗಿಸಂತತುಲಸೀದಾಸರಿಗೆಮಹತ್ತರವಾದಸ್ಥಾನವಿದೆ. ಮಧ್ಯಕಾಲೀನಭಾರತದಲ್ಲಿಸಂತತುಲಸೀದಾಸರಂತಹಜನಪ್ರಿಯಕವಿಬೇರೆಯಾರೂಇರಲಿಲ್ಲ. ಅವರಕೃತಿಗಳುಬಡವರ ಗುಡಿಸಲುಗಳುಮತ್ತುಶ್ರೀಮಂತರ ಅರಮನೆಗಳನ್ನು ಸಮಾನವಾಗಿ ತಲುಪಿವೆ.ಅವರುರಾಮಚರಿತಮಾನಸ, ಅಯೋಧ್ಯಾಕಾಂಡ, ಸುಂದರಕಾಂಡಮುಂತಾದಮಹಾಆಧ್ಯಾತ್ಮಿಕಗ್ರಂಥಗಳಲೇಖಕರು. ತುಲಸೀದಾಸರು "ಹನುಮಾನ್ಚಾಲೀಸಾ"ವನ್ನುರಚಿಸಿದರು. ಹನುಮಂತನವರಿಗೆವಿನಯಪದವನ್ನುಬರೆಯಲುಆದೇಶಿಸಿದರು, ಅದನ್ನುಅವರುಸ್ವೀಕರಿಸಿ 'ವಿನಯ-ಪತ್ರಿಕಾ' ಎಂಬ ಮಹಾಕಾವ್ಯವನ್ನುರಚಿಸಿದರು.ಸಂತತುಲಸೀದಾಸರು ವಾಲ್ಮೀಕಿರಾಮಾಯಣವನ್ನುಹಿಂದಿಯಲ್ಲಿ ಪ್ರಸ್ತುತಪಡಿಸಿದರು. ಅದೇತುಲಸೀದಾಸರುಬರೆದಶ್ರೀರಾಮಚರಿತಮಾನಸ. ಸಂತತುಲಸೀದಾಸರುಕ್ರಿ.ಶ. 1574 ರರಾಮನವಮಿಯಂದು (ಸಂವತ್ 1631) ಶ್ರೀರಾಮಚರಿತಮಾನಸವನ್ನುಬರೆಯಲುಪ್ರಾರಂಭಿಸಿದರು. ಈರಚನೆಯುಎರಡುವರ್ಷ, ಏಳುತಿಂಗಳುಮತ್ತುಇಪ್ಪತ್ತೇಳುದಿನಗಳಲ್ಲಿಪೂರ್ಣಗೊಂಡಿತು.ಎಲ್ಲಾಏಳುಅಧ್ಯಾಯಗಳು1576ರಲ್ಲಿಮಾರ್ಗಶಿರಶುಕ್ಲಪಕ್ಷದ (ಸಂವತ್1633) ಶ್ರೀರಾಮಮತ್ತುಸೀತೆಯವಿವಾಹದ ದಿನದಂದುಪೂರ್ಣಗೊಂಡವು.

ಭಗವಾನ್ಶ್ರೀರಾಮನಆಜ್ಞೆಯಂತೆ, ತುಲಸೀದಾಸರುಕಾಶಿಯನ್ನುತಲುಪಿಶ್ರೀವಿಶ್ವನಾಥಮತ್ತುಅನ್ನಪೂರ್ಣರಿಗೆತಮ್ಮಕಾವ್ಯವನ್ನುಪಠಿಸಿದರು. ಅವರುಗ್ರಂಥವನ್ನುವಿಶ್ವನಾಥದೇವಾಲಯದಗರ್ಭಗುಡಿಯಲ್ಲಿಇರಿಸಿದರು.ಮರುದಿನಆಪುಸ್ತಕದಮೇಲೆ – "ಸತ್ಯಂಶಿವಂಸುಂದರಂ"ಎಂದುಬರೆಯಲಾಗಿತ್ತು, ಅದರಕೆಳಗೆ 'ಶ್ರೀಶಂಕರ್' ಎಂದುಬರೆಯಲಾಗಿತ್ತು.

ದೇವರೊಬ್ಬನೇರಕ್ಷಕ :ಕೆಲವುದುಷ್ಟರುತುಲಸೀದಾಸರಈಕಾವ್ಯವನ್ನುನಾಶಮಾಡಲುಪ್ರಯತ್ನಿಸಿದರು. ಕಳ್ಳರನ್ನುಅವರಮನೆಗೆ ಸಹ ಕಳುಹಿಸಲಾಯಿತು. ಆದರೆ ಇಬ್ಬರು ಬಿಲ್ಲುಗಾರರುಅಲ್ಲಿ ಕಾವಲು ಕಾಯುತ್ತಿದ್ದರು. ಇದನ್ನುನೋಡಿಕಳ್ಳರುಓಡಿಹೋದರು.ನಂತರ ತುಲಸೀದಾಸರು ಆಪುಸ್ತಕವನ್ನು ತಮ್ಮ ಆಪ್ತಮಿತ್ರತೋದರಮ[illegible]ವರಬಳಿಗೆ ಕೊಟ್ಟರು.

**ಅವತಾರಿಕಾರ್ಯ** : ಗೋಸ್ವಾಮಿ ತುಲಸೀದಾಸರುಭಾರತದಾದ್ಯಂತ ಪ್ರವಾಸ ಮಾಡಿದರು. ಆಕಾಲದ ಹಿಂದೂ ಸಮಾಜದ ಮೇಲಿನ ದಾಳಿಗಳಿಂದಅವರು ತೀವ್ರವಾಗಿ ದುಃಖಿತರಾಗಿದ್ದರು. ಅವರು ಭಾರತದ ಎಲ್ಲಾ ರಾಜರನ್ನು ಒಟ್ಟುಗೂಡಿಸಲು ಪ್ರಯತ್ನಿಸಿದರು. ಅವರುಸಾಮಾನ್ಯ ಜನರಲ್ಲಿ ಜಾಗೃತಿ ಮೂಡಿಸಿದರು. ತುಲಸೀದಾಸರು ರಾಮಲೀಲಾನಾಟಕವನ್ನುಪ್ರಾರಂಭಿಸಿದರು.

ತುಲಸೀದಾಸರ ಬೋಧನೆಗಳು:ತುಲಸೀದಾಸರಭಕ್ತಿಯಲ್ಲಿವಿನಯಕ್ಕೆಬಹಳಉನ್ನತಸ್ಥಾನವಿದೆ. ಅಹಂಕಾರವನ್ನು ನಾಶ ಮಾಡದೆ ಮತ್ತು ವಿನಮ್ರರಾಗದೆ ಭಕ್ತಿಯ ಆನಂದವನ್ನುಅನುಭವಿಸಲು ಸಾಧ್ಯವಿಲ್ಲಎಂದುಅವರುನಂಬಿದ್ದರು. ಈಅಹಂಕಾರವನ್ನುನಾಶಮಾಡಲು, ನಮ್ಮದೋಷಗಳನ್ನುಸ್ವಯಂಪರೀಕ್ಷಿಸಿಕೊಂಡುನಾಶಮಾಡಿಕೊಂಡುನಮ್ಮಸದ್ಗುಣಗಳನ್ನುಹೆಚ್ಚಿಸಿಕೊಳ್ಳುವುದುಅವಶ್ಯಕ. ಭಕ್ತಿಗೆಅವರುಸತ್ಸಂಗ, ಜ್ಞಾನ, ನಿರ್ಲಿಪ್ತತೆ, ತಪಸ್ಸು, ಆತ್ಮಸಂಯಮ, ನಂಬಿಕೆ, ಪ್ರೀತಿ, ದೇವರಅನುಗ್ರಹ ಮತ್ತುದೇವರಿಗೆಶರಣಾಗತಿಯನ್ನುಮುಖ್ಯವೆಂದುಪರಿಗಣಿಸಿದರು.ಒಂದುರೀತಿಯಲ್ಲಿ, ಸಂತಗೋಸ್ವಾಮಿತುಲಸೀದಾಸರಭಕ್ತನುಆದರ್ಶಮನುಷ್ಯನರೂಪವನ್ನುಪಡೆಯುತ್ತಾನೆ.

ಈರೀತಿಯುಸಾಧನೆಯನ್ನುಸನಾತನಸಂಸ್ಥೆಯಸಂಸ್ಥಾಪಕರಾದಸಚ್ಚಿದಾನಂದಪರಬ್ರಹ್ಮಡಾ. ಜಯಂತಆಠವಲೆಹೇಳಿದ್ದಾರೆ. ಅವರಮಾರ್ಗದರ್ಶನದಲ್ಲಿಸನಾತನಸಂಸ್ಥೆಯಸಾಧಕರುವೇಗವಾಗಿಆಧ್ಯಾತ್ಮಿಕಪ್ರಗತಿಯನ್ನೂಸಾಧಿಸುತ್ತಿದ್ದಾರೆ.ಶ್ರಾವಣಕೃಷ್ಣತೃತೀಯಾ, 30 ಜುಲೈ 1623 (ವಿಕ್ರಮಸಂವತ್ 1680) ತುಲಸೀದಾಸರುಅಸ್ಸಿಘಾಟ್ನಲ್ಲಿಶ್ರೀರಾಮನಹೆಸರನ್ನುಉಚ್ಚರಿಸುತ್ತಾತಮ್ಮದೇಹವನ್ನುತ್ಯಜಿಸಿದರು.

**ಸಂಗ್ರಹ,**
**ಶ್ರೀ. ವಿನೋದ ಕಾಮತ,**
**ರಾಜ್ಯ ವಕ್ತಾರರು, ಸನಾತನಸಂಸ್ಥೆ**
**(ಸಂಪರ್ಕ : 9342599299)**

## ಸಂಘಟನೆಗಳಲ್ಲಿ ಒಗ್ಗಟ್ಟು ಬಹಳ ಮುಖ್ಯವಾಗಿದೆ

**ಚಿಕ್ಕಮಗಳೂರು:** ಸಂಘಟನೆಗಳಲ್ಲಿ ಒಗ್ಗಟ್ಟು ಬಹಳ ಮುಖ್ಯವಾಗಿದೆ. ಒಗ್ಗಟ್ಟಿನಿಂದಇದ್ದರೆ ನಾವು ಸಾಧನೆ ಮಾಡಲು ಸಾಧ್ಯಎಂದು ಅಂಬಳೆ ಇಂಡಸ್ಟ್ರಿಯಲ್ ಏರಿಯಾ ಸಾಮಿಲ್ ಮಾಲೀಕರ ಹಾಗೂ ಬಾಡಿಗೆದಾರರ ಸಂಘದಅಧ್ಯಕ್ಷರಾದ ಸುರೇಂದ್ರ ಶೆಟ್ಟಿ ಅಭಿಪ್ರಾಯಿಸಿದ್ದಾರೆ.




ಅವರು ಮಂಗಳವಾರ ಸಂಜೆ ಅಂಬಳೆ ಕೈಗಾರಿಕಾ ಪ್ರದೇಶದಲ್ಲಿಏರ್ಪಡಿಸಲಾಗಿದ್ದ ಅಂಬಳೆ ಇಂಡಸ್ಟ್ರಿಯಲ್ ಏರಿಯಾ ಸಾಮಿಲ್ ಮಾಲೀಕರ ಹಾಗೂ ಬಾಡಿಗೆದಾರರ ಸಂಘದ ಪ್ರಥಮ ಸರ್ವಸದಸ್ಯರ ಸಭೆಯಅಧ್ಯಕ್ಷತೆ ವಹಿಸಿ ಮಾತನಾಡಿದರು.

ದೊಡ್ಡ ವ್ಯವಹಾರ ಮಾಡುತ್ತಿದ್ದರೂ ಸಾಮಿಲ್ ನಡೆಸುವವರು ನಷ್ಟ ಅನುಭವಿಸುವ ಸನ್ನಿವೇಶವಿದೆ. ಹೊರಗಿನ ಶಕ್ತಿಗಳು ನಮ್ಮನ್ನು ಶೋಷಣೆ ಮಾಡಲು ನಾವು ಬಿಡಬಾರದು. ಈ ನಿಟ್ಟಿನಲ್ಲಿ ಸಂಘ ಗಟ್ಟಿಯಾಗಿರಬೇಕಾಗಿದೆಎಂದರು.

ಸಮಾಜದಿಂದ ನಾವು, ನಮ್ಮಿಂದ ಸಮಾಜವಲ್ಲಆದುದ್ದರಿಂದ ನಾವು ಸಾಮಾಜಿಕ ಕಳಕಳಿಯ ಕಾರ್ಯಗಳನ್ನು ಮುಂದಿನ ದಿನಗಳಲ್ಲಿ ಮಾಡ ಬೇಕೆಂದರು.

ಸ್ವಚ್ಛತೆ ಮತ್ತು ಪರಿಸರರಕ್ಷಣೆಗೆ ಪೂರಕವಾದ ಕಾರ್ಯಗಳನ್ನು ಸಂಘದ ವತಿಯಿಂದ ಮಾಡಲು ನಿರ್ಧರಿಸಲಾಗಿದೆ. ನಮ್ಮ ಮಿಲ್‌ಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರ ಮಕ್ಕಳು ಶಿಕ್ಷಣದಿಂದ ವಂಚಿತರಾಗದಿರುವಂತೆ ನೋಡಿಕೊಳ್ಳುವ ಕಾರ್ಯ ಮಾಡಿ, ಅವರುಯಾವುದೇರಾಜ್ಯದವರಾಗಲೀ ಸ್ಥಳೀಯ ಶಾಲೆಗಳಲ್ಲಿ ಅವರನ್ನುದಾಖಲಿಸುವ ಕಾರ್ಯ ಮಾಡಬೇಕೆಂದರು.

ವಾರ್ಷಿಕಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೂ ನಾವು ಸಮಯ ನೀಡಬೇಕೆಂದರು.

ಇದೇ ಸಂದರ್ಭದಲ್ಲಿ ಮಾತನಾಡಿದ,ಸಂಘದಉಪಾಧ್ಯಕ್ಷರಾದ ಮಲ್ಲಿಕಾರ್ಜುನ್‌ರಾವ್, ಸಮಸ್ಯೆಗಳು ಸಹಜ, ಆದರೆ, ಅದನ್ನು ಪರಿಹರಿಸುವ ನಿಟ್ಟಿನಲ್ಲಿಎಲ್ಲಾ ಸದಸ್ಯರೂ ತಾಳ್ಮೆಯಿಂದ ನಿರ್ಧಾರಗಳು ತೆಗೆದುಕೊಳ್ಳಲು ಯೋಚಿಸಬೇಕೆಂದರು.

ಇದೇ ಸಂದರ್ಭದಲ್ಲಿ ಸಂಘಕ್ಕೆ ಯೂನಿಟ್‌ವಾರುತಲಾ 500 ರೂ. ಗಳನ್ನು ಮಾಹಿಯಾನದೇಣಿಗೆ ನೀಡಲು ನಿರ್ಧರಿಸಲಾಯಿತು. ಅಲ್ಲದೇಯಾವುದೇ ಸಾರ್ವಜನಿಕ ಹಾಗೂ ಸಂಘಸಂಸ್ಥೆಗಳಿಗೆ ಸಂಘದ ಮೂಲಕ ಮಾತ್ರವೇ ದೇಣಿಗೆಗಳನ್ನು ನೀಡಬೇಕೆಂದು ನಿರ್ಧರಿಸಿದ್ದಲ್ಲದೇ. ತಮ್ಮನ್ನು ಶೋಷಣೆಮಾಡುತ್ತಿರುವುದರ ವಿರುದ್ಧಒಗ್ಗಟ್ಟಾಗಿ ಸಂಘಟಿತ ನಿರ್ಧಾರ ತೆಗೆದುಕೊಳ್ಳಲು ಇದೇ ಸಂದರ್ಭದಲ್ಲಿ ನಿರ್ಧರಿಸಲಾಯಿತು.

ಸಭೆಯಲ್ಲಿ ವಸ್ತಾರೆ ವಿ.ಪಿ.ಕೃಷ್ಣೇಗೌಡಎಲ್ಲರನ್ನೂ ಸ್ವಾಗತಿಸಿದರು, ಖಜಾಂಚಿ ಸಿ.ಎಸ್.ಸುಬ್ಬರಾವ್ ನಿರೂಪಿಸಿದರು. ಕಾರ್ಯದರ್ಶಿ ಮಂಜುನಾಥಅರಸ್, ಸಹಕಾರ್ಯದರ್ಶಿ ಸೋಮಶೇಖರ್, ದಿನೇಶ್ ಪಟೇಲ್ ಮುಂತಾದವರು ವೇದಿಕೆಯಲ್ಲಿದ್ದು ಮಾತನಾಡಿದರು.

ನಿರ್ದೇಶಕರಾದ ಶರತ್‌ಕುಮಾರ್,ಪ್ರಸನ್ನ, ಉಮೇಶ್ ಮತ್ತಿತರರು ಉಪಸ್ಥಿತರಿದ್ದರು.

## ಉದ್ಯೋಗದಾತರು-ಉದ್ಯೋಗಿಗಳ ನವೀಕೃತ ಯೋಜನೆಗೆ ಸಮ್ಮತಿ

**ಚಿಕ್ಕಮಗಳೂರು:** ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್‌ಐಸಿ) ಎಸ್‌ಪಿಆರ್‌ಇಇ (ಸ್ಕೀಮ್ ಫಾರ್ ಪ್ರಮೋಷನ್ ಆಫ್ ರಿಜಿಸ್ಟ್ರೇಷನ್ ಆಫ್ ಎಂಪ್ಲಾಯಸ್ ಅಂಡ್ ಎಂಪ್ಲಾಯಿಸ್) ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ -2025) ಎಂಬ ನವೀಕೃತ ಯೋಜನೆಯನ್ನು ಇತ್ತೀಚೆಗೆ ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ನಡೆದ ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಅನುಮೋದಿಸಲಾಗಿದೆ.

ಕೇಂದ್ರ ಕಾರ್ಮಿಕ, ಉದ್ಯೋಗ ಹಾಗೂ ಯುವಜನ ಸೇವೆ ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವೀಯ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಸಭೆಯಲ್ಲಿ ಈ ಬಗ್ಗೆ ತೀರ್ಮಾನ ಕೈಗೊಳ್ಳಲಾಯಿತು.

ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ (ಎಸ್‌ಪಿಆರ್‌ಇಇ-2025) ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು

ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದ್ದು, ಈ ತಿಂಗಳ ಒಂದರಿಂದ ಇದೇ ಡಿಸೆಂಬರ್ 31ರವರೆಗೆ ಸಕ್ರಿಯವಾಗಿದ್ದು, ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್‌ಐ ಅಡಿಯಲ್ಲಿ ಇನ್ನೂ ನೋಂದಣಿಯಾಗದ ಉದ್ಯೋಗದಾತರು, ಮತ್ತು ಉದ್ಯೋಗಿಗಳು ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಯ ಬೇಡಿಕೆ ಇಲ್ಲವೇ ನೋಂದಾಯಿಸಿಕೊಳ್ಳಲು ಒಂದು ಬಾರಿಯ ಅವಕಾಶವನ್ನು ಒದಗಿಸುತ್ತದೆ.

ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್‌ಐಸಿ ಪೋರ್ಟಲ್,

ಶ್ರಮ್ ಸುವಿಧಾ ಮತ್ತು ಎಂಸಿಎ ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು.

ಉದ್ಯೋಗದಾತರು ತಾವು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಪರಿಗಣಿಸಲಾಗುತ್ತದೆ.

ನೋಂದಣಿಯ ಪೂರ್ವ ಅವಧಿಗೆ ಯಾವುದೇ ವಂತಿಗೆ ಮತ್ತು ಸೌಲಭ್ಯವು ಅನ್ವಯವಾಗುವುದಿಲ್ಲ. ನೋಂದಣಿಯ ಪೂರ್ವ ಅವಧಿಯ ಯಾವುದೇ ದಾಖಲೆಗಳ ಪರಿಶೀಲನೆ ಅಥವಾ ಬಾಕಿ ಪಾವತಿ ಬೇಡಿಕೆ ಇರುವುದಿಲ್ಲ.

ಈ ಯೋಜನೆಯು ಸ್ವಯಂಪ್ರೇರಿತವಾದ ಅನುಸರಣೆಯನ್ನು ಪ್ರೋತ್ಸಾಹಿಸಿ, ಹಿಂದಿನ ಅವಧಿಗೆ ದಂಡ ಪಾವತಿಸಬೇಕಾದ ಭಯವನ್ನು ಹೋಗಲಾಡಿಸಿ

, ನೋಂದಣಿಯ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ. ಎಸ್‌ಪಿಆರ್‌ಇಇ 2025 ಅನ್ನು ಅನುಮೋದಿಸುವ ಮೊದಲು ನಿಗದಿತ ಅವಧಿಯಲ್ಲಿ ನೋಂದಣಿ ಮಾಡದಿದ್ದಲ್ಲಿ ಕಾನೂನು ಕ್ರಮ ಹಾಗೂ ಹಿಂದಿನ ಅವಧಿಯ ಬಾಕಿ ಬೇಡಿಕೆಗೆ ಕಾರಣವಾಗುತ್ತಿತ್ತು. ಎಸ್‌ಪಿಆರ್‌ಇಇ 2025 ಈ ಅಡೆತಡೆಗಳನ್ನು ನಿವಾರಿಸಿ ನೋಂದಣಿಯಿಂದ ಬಿಟ್ಟುಹೋದ ಘಟಕಗಳು ಮತ್ತು ಕಾರ್ಮಿಕರನ್ನು ಇಎಸ್‌ಐ ವ್ಯಾಪ್ತಿಯೊಳಗೆ ಸೇರಿಸಿ ಸಾಮಾಜಿಕ ಭದ್ರತೆಯನ್ನು ಖಚಿತಪಡಿಸುತ್ತದೆ.

ಎಸ್‌ಪಿಆರ್‌ಇಇ 2025ರ ಪ್ರಾರಂಭವು ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು,

ಸರಳ ಮತ್ತು ಹಿಂದಿನ ಅವಧಿಯ ಬಾಕಿಯ ಬೇಡಿಕೆಯಿಲ್ಲದೆ ನೋಂದಣಿಯಾಗಿ ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ. ಈ ಯೋಜನೆಯು ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೆ,ಈ ಯೋಜನೆಯು ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೆ,

ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ಗುತ್ತಿಗೆ ವಲಯದ ಕಾರ್ಮಿಕರು ಇಎಸ್‌ಐ ಕಾಯ್ದೆಯಡಿ ದೊರೆಯುವ ಅಗತ್ಯ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ.

ಇದರೊಂದಿಗೆ ಇಎಸ್‌ಐಸಿಯು ಅಗತ್ಯ ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತದ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದು ಕಾರ್ಮಿಕರ ರಾಜ್ಯ ವಿಮಾ ನಿಗಮದ ಮೈಸೂರು ಉಪ ಪ್ರಾದೇಶಿಕ ಕಚೇರಿಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನರಲ್‌ಕೆ.ಎಸ್‌ತಿಮ್ಮಯ್ಯ ನಗದು ಪ್ರಶಸ್ತಿಗೆ ಅರ್ಜಿ ಆಹ್ವಾನ

**ಹಾಸನ :** ಸೈನಿಕ ಕಲ್ಯಾಣ ಮತ್ತು ಪುನರ್ವಸತಿಇಲಾಖೆಯ ವತಿಯಿಂದ 2024-25ನೇ ಸಾಲಿನಲ್ಲಿ ನಡೆದ ಸಾರ್ವತ್ರಿಕ ಪರೀಕ್ಷೆಯಲ್ಲಿಗರಿಷ್ಟ ಅಂಕಗಳನ್ನು ಪಡೆದಕರ್ನಾಟಕದ ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ ಜನರಲ್‌ಕೆ.ಎಸ್‌ತಿಮ್ಮಯ್ಯ ನಗದು ಪ್ರಶಸ್ತಿ ನೀಡಲು ಘೋಷಿಸಿದೆ. ಇದರಡಿಯಲ್ಲಿ ಪ್ರತಿಜಿಲ್ಲೆಯ ಎಸ್.ಎಸ್.ಎಲ್.ಸಿ ಯಲ್ಲಿಗರಿಷ್ಟ ಅಂಕ ಪಡೆದಇಬ್ಬರು ಹಾಗೂ ದ್ವಿತೀಯ ಪಿ.ಯು.ಸಿ ಯಲ್ಲಿಗರಿಷ್ಟ ಅಂಕ ಪಡೆದಒಬ್ಬ ವಿದ್ಯಾರ್ಥಿಗಳು ಈ ಪ್ರಶಸ್ತಿಯನ್ನು ಪಡೆಯಲುಅರ್ಹರಿರುತ್ತಾರೆ. ಸದರಿ ಪ್ರಶಸ್ತಿಯನ್ನು ಪಡೆಯಲು ಶೇಕಡ 60 ಕ್ಕಿಂತಲೂ ಹೆಚ್ಚು ಅಂಕಗಳನ್ನು ಪಡೆದ ಮಾಜಿ ಸೈನಿಕರ ಮಕ್ಕಳು ಉಪ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಹಾಸನ ಕಾರ್ಯಾಲಯದಲ್ಲಿಅಕ್ಟೋಬರ್.31ರೊಳಗೆ ಹೆಸರನ್ನು ನೋಂದಾಯಿಸುವಂತೆಸೈನಿಕ ಕಲ್ಯಾಣ ಮತ್ತು ಪುನರ್ವಸತಿಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

### ಖಾರೀಫ್ ಬೆಳೆಗಳಿಗೆ ನಾಲೆಗಳಲ್ಲಿ ನೀರು

**ಹಾಸನ :** ಸಹಕಾರ ಸಚಿವರು ಹಾಗೂ ಹಾಸನ ಜಿಲ್ಲಾಉಸ್ತುವಾರಿ ಸಚಿವರು ಹಾಗೂ ಹೇಮಾವತಿಜಲಾಶಯಯೋಜನೆಯ ನೀರಾವರಿ ಸಲಹಾ ಸಮಿತಿಅಧ್ಯಕ್ಷರಾದಕೆ.ಎನ್.ರಾಜಣ್ಣಅವರಅಧ್ಯಕ್ಷತೆಯಲ್ಲಿ ನಡೆದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿಕೈಗೊಂಡತೀರ್ಮಾನದ ಮೇರೆಗೆ ಹಾಗೂ ಸೂಪರಿಂಟೆಂಡಿಂಗ್‌ಇಂಜಿನಿಯರ್, ಹೇಮಾವತಿಯೋಜನಾ ವೃತ್ತ, ಗೊರೂರುಇವರ ಪ್ರಕಟಣೆಅನ್ವಯ ಹೇಮಾವತಿಜಲಾಶಯದಿಂದ 2025-26 ನೇ ಸಾಲಿಗೆ ಖಾರೀಫ್‌ಅವಧಿಯ ಬೆಳೆಗಳಿಗೆ ನೀರನ್ನು ಸರಬರಾಜು ಮಾಡಲಾಗುತ್ತಿದೆ.ಅದರನ್ವಯ, ಜು.16 ರಿಂದ ನ.30 ರವರೆಗೆ ಹೇಮಾವತಿಎಡದಂಡ ನಾಲೆ ಹಾಗೂ ನದಿ ಅಣೆಕಟ್ಟು ನಾಲೆಗಳಾದ ಶ್ರೀರಾಮದೇವರ ಉತ್ತರ ನಾಲೆ. ಹೇಮಗಿರಿ ನಾಲೆ, ಅಕ್ಕಿಹೆಬ್ಬಾಳು ನಾಲೆ, ಮಂದಗೆರೆಎಡದಂಡೆ ಮತ್ತು ಬಲದಂಡೆ ನಾಲೆಗಳಲ್ಲಿ ಈ ಕೆಳಕಂಡಂತೆ ಖುಷ್ಕಿ ಭತ್ತದ ಬೆಳೆಗಾಗಿ ನೀರನ್ನು ಹರಿಸಲಾಗುತ್ತದೆ.

## ಕಲೆ ನಮ್ಮ ಸಂಸ್ಕೃತಿಯ ಅವಿಭಾಜ್ಯ ಅಂಗ: ದ್ಯಾಮನಗೌಡ ಮುದ್ದನಗೌಡ್ರ

**ದಾವಣಗೆರೆ:** ಕಲೆ ನಮ್ಮ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿದ್ದು, ಮನುಷ್ಯನ ನಾಗರಿಕತೆ ವಿಕಾಸವಾದಂತೆ ಕಲೆಯ ಆರಂಭವನ್ನು ಕಾಣುತ್ತೇವೆ. ಪ್ರಸ್ತುತ ಕಲೆಯ ಬಳಕೆ ಎಲ್ಲ ಕ್ಷೇತ್ರಗಳಲ್ಲೂ ಹಾಸುಹೊಕ್ಕಾಗಿದೆ ಎಂದು ದಾವಣಗೆರೆ ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ ದ್ಯಾಮನಗೌಡ ಮುದ್ದನಗೌಡ್ರ ಹೇಳಿದರು.

ನಗರದ ದೃಶ್ಯ ಕಲಾ ಮಹಾವಿದ್ಯಾಲಯ ವತಿಯಿಂದ ಮೂರು ದಿನಗಳ ಕಾಲ ಹಮ್ಮಿಕೊಂಡಿದ್ದ ಚಿತ್ರೋತ್ಸವ -2025 ಕಾರ್ಯಕ್ರಮದಲ್ಲಿ ಈ ಸಾಲಿನ ಪ್ರಶಸ್ತಿ ವಿತರಣೆ ಮತ್ತು ವಿದ್ಯಾರ್ಥಿ ಸಂಘದ ಸಮಾರೋಪ ಸಮಾರಂಭದ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.

ಕಲಾವಿದರ ಕೆಲಸಗಳು ಸಾರ್ವಕಾಲಿಕವಾದದ್ದು. ಯಾವುದೇ ಕ್ಷೇತ್ರವಾದರೂ ಪ್ರೋತ್ಸಾಹ ಅತ್ಯಗತ್ಯ. ಮಹಾವಿದ್ಯಾಲಯ ಹಮ್ಮಿಕೊಂಡಿರುವ ಚಿತ್ರೋತ್ಸವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಪ್ರತಿಭೆಗಳ ಅನಾವರಣಕ್ಕೆ ಸಹಕಾರಿಯಾಗಿದೆ.

ಮಹಾವಿದ್ಯಾಲಯ ಅನೇಕ ಅವಕಾಶಗಳನ್ನು ಕಲ್ಪಿಸಿದೆ. ಅದರ ಪ್ರತಿಫಲವೇ ನಿಮ್ಮ ಕಲಾಕೃತಿಗಳು ಎಂದು ಅಭಿಪ್ರಾಯಪಟ್ಟರು.

ವಿಫುಲ ಅವಕಾಶಗಳಿದ್ದು, ಪರಿಶ್ರಮದಿಂದ ಕೀರ್ತಿ, ಸಂಪತ್ತು ತಾನೇ ತಾನಾಗಿ ನಿಮ್ಮನ್ನರಸಿ ಬರಲಿದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.



ದೃಶ್ಯಕಲಾ ಮಹಾವಿದ್ಯಾಲಯದ ನಿವೃತ್ತ ಸಂಯೋಜನಾಧಿಕಾರಿ ಎಲ್. ಕೆ. ಹನುಮಂತಚಾರಿ ಅವರು ಮಾತನಾಡಿ, ಇದೇ ದೃಶ್ಯಕಲಾ ಮಹಾವಿದ್ಯಾಲಯದಲ್ಲಿ ನನ್ನ ಜೀವನದ ಪ್ರತಿಯೊಂದು ಘಟ್ಟವನ್ನು ಅನುಭವಿಸಿದ್ದೇನೆ ಎಂದು ಭಾವುಕರಾದರು. ಇದೇ ದೃಶ್ಯಕಲಾ ಮಹಾವಿದ್ಯಾಲಯದಲ್ಲಿ ನನ್ನ ಜೀವನದ ಪ್ರತಿಯೊಂದು ಘಟ್ಟವನ್ನು ಅನುಭವಿಸಿದ್ದೇನೆ ಎಂದು ಭಾವುಕರಾದರು ವಿದ್ಯಾರ್ಥಿಗಳು ಅನುಭವಿಗಳ ಮಾರ್ಗದರ್ಶನದಲ್ಲಿ ಸಾಗಿ, ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಿರಿ ಎಂದು ಹಾರೈಸಿದರು.ವೇದಿಕೆಯ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಜೈರಾಜ್ ಎಂ. ಚಿಕ್ಕಪಾಟೀಲ್ ವಹಿಸಿ, ವಿದ್ಯಾರ್ಥಿಗಳ ಮುಂದಿನ ಜೀವನಕ್ಕೆ ಶುಭ ಕೋರಿದರು. ಸಹಾಯಕ ಪ್ರಾಧ್ಯಾಪಕ ಡಾ. ಸತೀಶ್ ಕುಮಾರ್ ಪಿ. ವಲ್ಲೇಪುರೆ ವರ್ಷಪೂರ್ತಿ ಮಹಾವಿದ್ಯಾಲಯ ಹಮ್ಮಿಕೊಂಡಿದ್ದ ಕಾರ್ಯಕ್ರಮಗಳ ವಾರ್ಷಿಕ ವರದಿ ವಾಚಿಸಿದರು. ವೇದಿಕೆಯಲ್ಲಿ ವಿದ್ಯಾರ್ಥಿ ಸಂಘದ ಅಧ್ಯಕ್ಷ ಟಿ.ವಿ. ದರ್ಶನ್ ಉಪಸ್ಥಿತರಿದ್ದರು.

## ಸಖರಾಯಪಟ್ಟಣದ ಅಗ್ರಹಾರ ಬಳಿ ನಿಷೇಧಾಜ್ಞೆ ಜಾರಿ

**ಚಿಕ್ಕಮಗಳೂರು:** ಸಖರಾಯಪಟ್ಟಣ ಹೋಬಳಿ ಅಗ್ರಹಾರ ಗ್ರಾಮದ ಚೆಕ್‌ಡ್ಯಾಂ ನಿರ್ಮಾಣ ಕಾಮಗಾರಿಗೆ ಪರ-ವಿರೋಧ ವ್ಯಕ್ತವಾಗಿದ್ದು, ಉಭಯ ಕಡೆ ಅಹಿತಕರ ಘಟನೆ ನಡೆಯುವ ಸಂಭವವಿರುವುದರಿಂದ ಸ್ಥಳದಿಂದ ಒಂದು ಕಿ.ಮೀ. ವ್ಯಾಪ್ತಿಯವರೆಗೆ ಜುಲೈ 28 ರಿಂದ ಆಗಸ್ಟ್ 3ರವರೆಗೆ ನಿಷೇಧಾಜ್ಞೆ ಜಾರಿಗೊಳಿಸಿ ತರೀಕೆರೆ ಉಪವಿಭಾಗಾಧಿಕಾರಿಗಳಾದ ಎನ್.ವಿ.ನಟೇಶ್ ಅವರು ಆದೇಶ ಹೊರಡಿಸಿದ್ದಾರೆ.ಅಯ್ಯನಕೆರೆಯಿಂದ ಕೋಡಿ ಬಿದ್ದ ನೀರು ವೇದಾವತಿ ಹಳ್ಳದ ಮೂಲಕ ಕಡೂರು, ಯಗಟಿ ಮಾರ್ಗವಾಗಿ ಚಿತ್ರದುರ್ಗ ತಾಲ್ಲೂಕಿನ ಮಾರಿಕಣಿವೆಗೆ ಹರಿಯುತ್ತದೆ. ಹೀಗೆ ಹರಿಯುವ ನೀರನ್ನು ಅಗ್ರಹಾರ ಗ್ರಾಮದ ಬಳಿ ಇರುವ ಚೆಕ್‌ಡ್ಯಾಂ ಮೇಲ್ಭಾಗದಲ್ಲಿ ಸುಮಾರು 5 ಮೀಟರ್ ಎತ್ತರದಲ್ಲಿ ಟ್ಯಾಂಕ್ ನಿರ್ಮಿಸಿ ಈ ಟ್ಯಾಂಕ್‌ಗೆ ಕೋಡಿ ಬಿದ್ದ ನೀರು ಸಂಗ್ರಹಿಸಿ ಪೈಪ್‌ಲೈನ್ ಮೂಲಕ ನಾಗೇನಹಳ್ಳಿ ಗ್ರಾಮದ ಕಟ್ಟೆ ಹಾಗೂ ಹುಲಿಕೆರೆ ಗ್ರಾಮದ ಕಟ್ಟೆ ಹಾಗೂ ಹುಲಿಕೆರೆಗೆ ಸಮೀಪವಿರುವ ಬೆರಟಿಕೆರೆಗೆ ನೀರು ತುಂಬಿಸುವ ಯೋಜನೆಗೆ ಅನುಮೋದನೆ ನೀಡಲಾಗಿದ್ದು, 2023ರ ಫೆಬ್ರವರಿಯಲ್ಲಿ ಶಂಕುಸ್ಥಾಪನೆ ನಡೆದಿತ್ತು. ಇತ್ತೀಚೆಗೆ ಕಾಮಗಾರಿ ಆರಂಭಗೊಂಡಿದ್ದು, ವೇದಾವತಿ ಹಳ್ಳ ಹರಿಯುವ ಕೆಳಭಾಗದ ಗ್ರಾಮಗಳ ರೈತರು ತಡೆಯೊಡ್ಡಿದ್ದರು.

ಹುಲಿಕೆರೆ ನಾಗೇನಹಳ್ಳಿ, ಕಂಚುಗಾರನಹಳ್ಳಿ, ಮಡಿಕೆಹೊಸಳ್ಳಿ ಸುತ್ತಮುತ್ತಲ ಗ್ರಾಮಗಳ ರೈತರು ಕಾಮಗಾರಿಯ ಪರವಾಗಿದ್ದಾರೆ. ಜುಲೈ 19 ರಂದು ಉಭಯ ಕಡೆಯವರು ಅಗ್ರಹಾರ ಗ್ರಾಮದಲ್ಲಿ ಪ್ರತಿಭಟನೆ ನಡೆಸಿದ್ದರು. ಈ ಸಂದರ್ಭದಲ್ಲಿ ಉಭಯ ಬಣದ ನಡುವೆ ಮಾತಿನ ಚಕಮಕಿ ನಡೆದಿದ್ದು, ಬಿಗಿ ಪೊಲೀಸ್ ರಕ್ಷಣೆ ಒದಗಿಸಿದ್ದರಿಂದ ಯಾವುದೇ ಅಹಿತಕರ ಘಟನೆಗೆ ಆಸ್ಪದವಾಗಿರಲಿಲ್ಲ. ಆದರೂ ಉಭಯ ಕಡೆಯ ನಡುವೆ ಯಾವುದೇ ಅಹಿತಕರ ಘಟನೆಗಳ ಸಂಭವಿಸಬಾರದೆನ್ನುವ ದೃಷ್ಟಿಯಿಂದ ಇದೀಗ ನಿಷೇಧಾಜ್ಞೆ ಹೊರಡಿಸಿರುವುದಾಗಿ ಅವರು ತಿಳಿಸಿದ್ದಾರೆ.

## ಕಾಯ್ದೆಗಳ ಅನುಷ್ಠಾನ ಕುರಿತು ಅಧಿಕಾರಿಗಳಿಗೆ ಕಾರ್ಯಾಗಾರ

# ಬಾಲ್ಯ ವಿವಾಹ ಹಾಗೂ ಪೋಕ್ಸೋ ನಿರ್ಮೂಲನೆಗೆ ನ್ಯಾ. ವಿಜಯ್ ಕರೆ

**ಚಿತ್ರದುರ್ಗ :** ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಪೋಕ್ಸೋ ಹಾಗೂ ಬಾಲ್ಯವಿವಾಹ ಪ್ರಕರಣದ ಪಿಡುಗನ್ನು ನಿರ್ಮೂಲನೆ ಮಾಡಲು ಅಧಿಕಾರಿಗಳು ಶ್ರಮಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಕರೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಇಂಟರ್ನ್ಯಾಷನಲ್ ಜಸ್ಟಿಸ್ ಮಿಷನ್ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಅಂಗವಾಗಿ, ಮಹಿಳಾ ಮತ್ತು ಮಕ್ಕಳ ಕಳ್ಳ ಸಾಗಾಣಿಕೆ ತಡೆ ಕಾವಲು ಸಮಿತಿ ಹಾಗೂ ಬಾಲ್ಯ ವಿವಾಹ ನಿಷೇಧ ಕಾಯ್ದೆ ಕುರಿತು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.



ಜಿಲ್ಲಾ ಮತ್ತು ತಾಲ್ಲೂಕುಮಟ್ಟದ ಅಧಿಕಾರಿಗಳು ಈ ಕುರಿತು ತಮ್ಮ ವ್ಯಾಪ್ತಿಯಲ್ಲಿ ಗ್ರಾಮಮಟ್ಟದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಸಿಬ್ಬಂದಿ ಸೂಕ್ತ ಮಾರ್ಗದರ್ಶನ ನೀಡಬೇಕು. ಮಕ್ಕಳ ಗ್ರಾಮಸಭೆ, ಮಹಿಳಾ ಮತ್ತು ಮಕ್ಕಳ ಸಂರಕ್ಷಣೆ ಕುರಿತು ಸಭೆಗಳಲ್ಲಿ ಅಧಿಕಾರಿಗಳು ಭಾಗವಹಿಸಿ, ಪೋಕ್ಸೋ ಹಾಗೂ ಬಾಲ್ಯವಿವಾಹ ಪ್ರಕರಣಗಳ ಜರುಗದಂತೆ ಗ್ರಾಮಮಟ್ಟದಲ್ಲಿ ಬುಡಸಮೇತ ಕಿತ್ತೊಗೆಯಲು ಪ್ರಯತ್ನಿಸಬೇಕು ಎಂದು ನ್ಯಾಯಾಧೀಶ ಎಂ.ವಿಜಯ್ ಹೇಳಿದರು.

ಗ್ರಾಮಮಟ್ಟದ ಅಧಿಕಾರಿಗಳಲ್ಲಿ ಸಮನ್ವಯದ ಕೊರತೆ ಇದೆ. ಪ್ರಕರಣ ನಡೆದು ಮೂರು–ನಾಲ್ಕು ದಿನಗಳಾದರೂ ಅಧಿಕಾರಿಗಳು ಸೂಕ್ತ ಕಾನೂನು ಕ್ರಮ ಕೈಗೊಳ್ಳುವುದಿಲ್ಲ. ಕೆಲ ಪ್ರಕರಣಗಳಲ್ಲಿ ಉನ್ನತ ಅಧಿಕಾರಿಗಳಿಗೆ ಮಾಹಿತಿ ನೀಡದೇ ನಿರ್ಲಕ್ಷ್ಯವಹಿಸುವುದು ಕಂಡು ಬಂದಿದೆ. ಇನ್ನೂ ಮುಂದೆ ಪ್ರಕರಣಗಳ ವರದಿ ನೀಡದ, ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳನ್ನೇ ನೇರವಾಗಿ ಹೊಣೆ ಮಾಡಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳುವುದಾಗಿ ನ್ಯಾಯಾಧೀಶ ಎಂ.ವಿಜಯ್ ಎಚ್ಚರಿಸಿದರು. ಮಾನವ ಕಳ್ಳ ಸಾಗಾಣಿಕೆಗೆ ಬಹಳಷ್ಟು ಮುಖಗಳಿದ್ದು, ಪ್ರಸಕ್ತ ವರ್ಷದಲ್ಲಿ ದೇಶದಲ್ಲಿ 2 ಲಕ್ಷಕ್ಕೂ ಹೆಚ್ಚು ಮಹಿಳೆಯರು ಹಾಗೂ ಮಕ್ಕಳನ್ನು ಕಳ್ಳ ಸಾಗಾಣಿಕೆ ಜಾಲದಿಂದ ಸಂರಕ್ಷಣೆ ಮಾಡಲಾಗಿದೆ. ಬಿಗಿಯಾದ ಕಾನೂನುಗಳನ್ನು ರಚಿಸಲಾಗಿದೆ ನ್ಯಾಯಾಧೀಶ ಎಂ.ವಿಜಯ್ ತಿಳಿಸಿದರು.

ಜಿ.ಪಂ. ಉಪ ಕಾರ್ಯದರ್ಶಿ ಡಾ.ರಂಗಸ್ವಾಮಿ ಮಾತನಾಡಿ, ಗ್ರಾಮಮಟ್ಟದಲ್ಲಿ ಬಾಲ್ಯವಿವಾಹ ತಡೆಗೆ ಹೆಚ್ಚಿನ ಅರಿವು ಮೂಡಿಸಬೇಕು. ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧವಾಗಿದೆ ಎಂದು ಸಾರ್ವಜನಿಕರಿಗೆ ಮನದಟ್ಟು ಮಾಡಬೇಕು. ಮಕ್ಕಳ ಸಹಾಯವಾಣಿ, ಮಹಿಳಾ ಸಹಾಯವಾಣಿ, ತುರ್ತು ಸ್ಪಂದನಾ ಸಹಾಯವಾಣಿ ಸಂಖ್ಯೆಗಳನ್ನು ಗೋಡೆಬರೆಹದಲ್ಲಿ ಬರೆಸಿ ಜನರಿಗೆ ಅರಿವು ಮೂಡಿಸಬೇಕು. ನಾವೆಲ್ಲರೂ ಸೇರಿ ಈ ಸಾಮಾಜಿಕ ಪಿಡುಗು ಹೋಗಲಾಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸೋಣ ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಕೆ.ಹೆಚ್.ವಿಜಯಕುಮಾರ್ ಮಾತನಾಡಿ, ಲೈಂಗಿಕ ಶೋಷಣೆಗಾಗಿ, ಭಿಕ್ಷಾಟನೆಗಾಗಿ, ಜೀತಕ್ಕಾಗಿ ಬಾಲಕಾರ್ಮಿಕತೆಗಾಗಿ, ಅಂಗಾಂಗ ಕಸಿಗಾಗಿ, ಬಾಲ್ಯವಿವಾಹಕ್ಕಾಗಿ ಮಹಿಳೆ ಹಾಗೂ ಮಕ್ಕಳು ಕಳ್ಳ ಸಾಗಾಣಿಕೆಗೆ ಒಳಪಡುತ್ತಾರೆ. ಬಿಗಿಯಾದ ಕಾನೂನು, ಜಾಗೃತಿ ಹಾಗೂ ಪೊಲೀಸ್ ಕಾರ್ಯಾಚರಣೆಗಳ ಫಲವಾಗಿ ಇತ್ತೀಚಿನ ದಿನಗಳಲ್ಲಿ ಮಾನವ ಕಳ್ಳ ಸಾಗಾಣಿಕೆ ಕಡಿಮೆಯಾಗುತ್ತಿದೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಕ್ಕಳ ಕಾವಲು ಸಮಿತಿ ಇದ್ದು, 14 ರಿಂದ 18 ವರ್ಷದ ಮಕ್ಕಳು ಕಾಣೆಯಾದರೆ ಗ್ರಾಮ ಪಂಚಾಯಿತಿಗೆ ತಿಳಿಸಿ, ಪತ್ತೆ ಹಚ್ಚುವ ಕಾರ್ಯ ಮಾಡಬೇಕು. ಬಾಲ್ಯವಿವಾಹ ತಡೆಯುವಲ್ಲಿ ಎಲ್ಲ ಇಲಾಖೆಗಳ ಜವಾಬ್ದಾರಿ ಇದೆ ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎ.ಎಂ.ವೀಣಾ ಅವರು ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಅಂಗವಾಗಿ ಪ್ರತಿಜ್ಞಾವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮೇಶ್ ಈಶ್ವರನಾಯ್ಕ್, ಡಿಡಿಪಿಯು ಕೆ.ತಿಮ್ಮಯ್ಯ, ಡಿಡಿಪಿಐ ಎಂ.ಆರ್.ಮಂಜುನಾಥ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಪಿ.ಶೀಲಾ, ಕಾರ್ಮಿಕ ಅಧಿಕಾರಿ ಬಾಲಚಂದ್ರ ಬಗಟಿ, ಜೆ.ವೈಶಾಲಿ ಇದ್ದರು.

## ಆ. 01 ರಂದು ವ್ಯಸನ ಮುಕ್ತ ದಿನಾಚರಣೆ

**ದಾವಣಗೆರೆ :** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಮದ್ಯಪಾನ ಸಂಯಮ ಮಂಡಳಿ ವತಿಯಿಂದ ಶ್ರೀಶ್ರೀಶ್ರೀ ಮ.ನಿ.ಪ್ರ. ಡಾ.ಮಹಾಂತ ಶಿವಯೋಗಿ ಸ್ವಾಮೀಜಿ ಅವರ ಜನ್ಮ ದಿನದ ನಿಮಿತ್ತ ಆಗಸ್ಟ್ 01 ರಂದು, ಬೆಳಿಗ್ಗೆ 11 ಗಂಟೆಗೆ, ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ವ್ಯಸನ ಮುಕ್ತ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಧನಂಜಯಪ್ಪ.ಬಿ ತಿಳಿಸಿದ್ದಾರೆ.

## 10 ಖಾಯಂ ಚಾಲಕ ಹುದ್ದೆ : ಮಾಜಿ ಸೈನಿಕರಿಂದ ಅರ್ಜಿ ಆಹ್ವಾನ

**ದಾವಣಗೆರೆ:** ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಬೆಂಗಳೂರು 10 ಖಾಯಂ ಚಾಲಕ ಹುದ್ದೆಗಳಿಗಾಗಿ 43 ವರ್ಷದೊಳಗಿನ ಶೇಪ್–1 ಮೆಡಿಕಲ್ ಕ್ಯಟಗೆರಿ ಹೊಂದಿರುವ ಅರ್ಹ ಮಾಜಿ ಸೈನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಆಸಕ್ತ ರ್ಹ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿದ್ದು, ಕನ್ನಡ ಭಾಷಾ ಜ್ಞಾನವನ್ನು ಕಡ್ಡಾಯವಾಗಿ ಹೊಂದಿರಬೇಕು.ಅರ್ಜಿಯನ್ನು www.bel-india.in/careers ನಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆ ದೂರವಾಣಿ ಸಂಖ್ಯೆ 080–22195650 ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

## ವೈದ್ಯಕೀಯ ಮತ್ತು ದಂತ ವೈದ್ಯಕೀಯ ವಿದ್ಯಾಭ್ಯಾಸಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಮಾಜಿ ಸೈನಿಕರು, ಮಾಜಿ ಸೈನಿಕ ಅವಲಂಬಿತ ಮಕ್ಕಳ ವೈದ್ಯಕೀಯ ಮತ್ತು ದಂತ ವೈದ್ಯಕೀಯ ವ್ಯಾಸಂಗಕ್ಕಾಗಿ ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಸೀಟು ಹಂಚಿಕೆ ಮೇರೆಗೆ ಕೇಂದ್ರಿಯ ಸೈನಿಕ ಮಂಡಳಿಯಿಂದ ಡಿಫೆನ್ಸ್ ಕೋಟಾದಡಿ ಅರ್ಜಿ ಆಹ್ವಾನಿಸಲಾಗಿದೆ.

## ಗ್ಯಾಸ್ ಸಿಲಿಂಡರ್ ತುಂಬಿದ್ದ ಟ್ರಕ್‌ಗೆ ಬಸ್ ಡಿಕ್ಕಿ

# 18 ಕನ್ವಾರಿಯಾ ಯಾತ್ರಿಗಳ ಸಾವು

**ರಾಂಚಿ:** ಜಾರ್ಖಂಡ್‌ನ ದಿಯೋಘರ್ ಜಿಲ್ಲೆಯಲ್ಲಿ ಅಡುಗೆ ಅನಿಲ ಸಿಲಿಂಡರ್‌ಗಳನ್ನು ತುಂಬಿದ್ದ ಟ್ರಕ್‌ಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ 18 ಕನ್ವಾರಿಯಾಗಳು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿರುವ ಘಟನೆ ಸಂಭವಿಸಿದೆ.

ಹಲವಾರು ಗಾಯಾಳುಗಳ ಸ್ಥಿತಿ ಗಂಭೀರವಾಗಿರುವುದರಿಂದ ಸಾವು–ನೋವುಗಳು ಹೆಚ್ಚಾಗುವ ಸಾಧ್ಯತೆ ಇದೆ. ಮೃತಪಟ್ಟವರ ಗುರುತು ಇನ್ನೂ ಪತ್ತೆಯಾಗಿಲ್ಲ. ಸದ್ಯ ಮೃತದೇಹಗಳನ್ನು ದಿಯೋಘರ್ ಸದರ್ ಆಸ್ಪತ್ರೆಗೆ ರವಾನಿಸಲಾಗಿದ್ದು, ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಸ್ಥಳೀಯರ ಪ್ರಕಾರ, 20 ಕ್ಕೂ ಹೆಚ್ಚು ಭಕ್ತರು ಗಂಭೀರವಾಗಿ ಗಾಯಗೊಂಡಿ–ದ್ದಾರೆ.

ಮೋಹನಪುರ ಪೊಲೀಸ್ ಠಾಣೆ ವ್ಯಾಪ್ತಿಯ ಜಮುನಿಯಾ ಅರಣ್ಯದ ಬಳಿ ಬೆಳಿಗ್ಗೆ 4.30 ರ ಸುಮಾರಿಗೆ ಅಪಘಾತ ಸಂಭವಿಸಿದೆ. ದಿಯೋಘರ್‌ನ ಮೋಹನಪುರದ ಜಮುನಿಯಾ ಅರಣ್ಯದ ಬಳಿ, ಕನ್ವಾರಿಯಾ ಕುಟುಂಬವನ್ನು ಹೊತ್ತೊಯ್ಯುತ್ತಿದ್ದ 32 ಆಸನಗಳ ಬಸ್, ಗ್ಯಾಸ್ ಸಿಲಿಂಡರ್‌ಗಳನ್ನು ಸಾಗಿಸುತ್ತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಐದು ಜನರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯಗೊಂಡಿದ್ದಾರೆ ಎಂದು ಸಿನ್ಹಾ ಸುದ್ದಿಗಾರರಿಗೆ ತಿಳಿಸಿದ್ದಾರೆ.

# ಹಳೆ ಪಿಂಚಣಿ ಯೋಜನೆ ಜಾರಿಗೆ ತರುವಂತೆ ಒತ್ತಾಯಿಸಿ ನಿವೃತ್ತ ನೌಕರರ ಪ್ರತಿಭಟನೆ



**ಚಿತ್ರದುರ್ಗ :** ಕೇಂದ್ರ ಸರ್ಕಾರ 2004 ರಲ್ಲಿ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿದಾಗ ಎಲ್ಲಾ ರಾಜ್ಯಗಳು ಕೇಂದ್ರ ಸರ್ಕಾರದ ಮಾದರಿಯಂತೆ ಹೊಸದಾಗಿ ಸರ್ಕಾರಿ ನೌಕರಿಗೆ ಸೇರುವವರಿಗೆ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತಂದ ಪರಿಣಾಮವಾಗಿ ಸರ್ಕಾರಿ ಸೇವೆಯಿಂದ ನಿವೃತ್ತಿಯಾಗುವವರು ಹಳೆ ಪಿಂಚಣಿ ಯೋಜನೆಯಂತೆ ಆರ್ಥಿಕ ಸೌಲಭ್ಯಗಳಿಂದ ವಂಚಿತರಾಗಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ ಜಿಲ್ಲಾ ಶಾಖೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿ ಮೂಲಕ ಪ್ರಧಾನ ಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಸರ್ಕಾರಿ ನೌಕರರ ಹಾಗೂ ಪಿಂಚಣಿದಾರರ ವೇತನವನ್ನು ಪರಿಷ್ಕರಿಸಲು ಕೇಂದ್ರ ಸರ್ಕಾರ ಈಗಾಗಲೆ 8 ನೇ ವೇತನ ಆಯೋಗ ರಚಿಸಿದೆ. ದಿನಾಂಕ : 25–3–2025 ರಂದು ಆರ್ಥಿಕ ಸಚಿವೆ ನಿರ್ಮಲಾ ಸೀತಾರಾಮನ್‌ರವರು ಲೋಕಸಭೆಯಲ್ಲಿ ಬಿಲ್ ಮಂಡಿಸುವಾಗ 1–4–2026 ಮೊದಲು ನಿವೃತ್ತಿಯಾದ ನೌಕರರಿಗೆ ಪಿಂಚಣಿ ಮತ್ತು ಕುಟುಂಬ ಪಿಂಚಣಿಯನ್ನು ಪರಿಷ್ಕರಿಸಲು ಸಾಧ್ಯವಿಲ್ಲ ಎಂಬ ನಿರ್ಣಯ ಕೈಗೊಂಡಿದ್ದಾರೆ. ಇದರಿಂದ ನಿವೃತ್ತ ಸರ್ಕಾರಿ ನೌಕರರು ಹಾಗೂ ಕುಟುಂಬದವರು ಆರ್ಥಿಕವಾಗಿ ಸಂಕಷ್ಟಕ್ಕೀಡಾಗುತ್ತಾರೆಂದು ಪ್ರತಿಭಟನಾಕಾರರು ತಮ್ಮ ಸಮಸ್ಯೆಗಳನ್ನು ತೋಡಿಕೊಂಡರು.

ಅಖಿಲ ಭಾರತ ರಾಜ್ಯಗಳ ಪಿಂಚಣಿದಾರರ ಒಕ್ಕೂಟವು ದಿನಾಂಕ : 29–5–2025 ರಂದು ಬೆಂಗಳೂರಿನಲ್ಲಿ ನಡೆದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಕೇಂದ್ರ ಸರ್ಕಾರದ ನೀತಿಯನ್ನು ವಿರೋಧಿಸಿ ಹೋರಾಟ ನಡೆಸಿ ದೇಶದ ಎಲ್ಲಾ ರಾಜ್ಯಗಳ ನಿವೃತ್ತ ನೌಕರರು **(4ನೇ ಪುಟಕ್ಕೆ)**

# ಅಂಗಡಿಗಳಲ್ಲಿ ಶುಚಿತ್ವದ ಕೊರತೆ ಸಂಬಂಧ ಪಟ್ಟ ಆರೋಗ್ಯ ನಿರೀಕ್ಷಕರ ವಿರುದ್ಧ ದೂರು

### ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ



**ಚಿತ್ರದುರ್ಗ :** ರಸ್ತೆಯ ಬದಿಯ ಗೂಡಂಗಡಿ, ಹೋಟೆಲ್ ಸೇರಿದಂತೆ ಆಹಾರ ಮಾರಾಟ ಅಂಗಡಿಗಳಲ್ಲಿ ಶುಚಿತ್ವದ ಕೊರತೆ ಕಂಡುಬಂದರೆ, ಸಂಬಂಧ ಪಟ್ಟ ಆರೋಗ್ಯ ನಿರೀಕ್ಷಕರ ವಿರುದ್ಧವೂ ದೂರು ದಾಖಲಿಸುವಂತೆ, ಆಹಾರ ಸುರಕ್ಷತಾ ಗುಣಮಟ್ಟದ ಪ್ರಾಧಿಕಾರಿದ ಜಿಲ್ಲಾ ಅಂಕಿತಾಧಿಕಾರಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳಪೆ ಹಾಗೂ ಕಲಬೆರಿಕೆ ಆಹಾರ ಸೇವನೆಯಿಂದ ಕ್ಯಾನ್ಸರ್ ನಂತಹ ಮಾರಣಾಂತಿಕ ಖಾಯಿಲೆಗಳಿಗೆ ಜನರು ತುತ್ತಾಗುತ್ತಿದ್ದಾರೆ. ಹೋಟೆಲ್‌ಗಳು ಅಷ್ಟೇ ಅಲ್ಲದೇ, ಪ್ಯಾಕೇಜಿಂಗ್ ಆಹಾರ ತಯಾರಿಕಾ ಘಟಕಗಳಲ್ಲಿಯೂ ಶುಚಿತ್ವ ಹಾಗೂ ಗುಣಮಟ್ಟದ ಕೊರತೆ ಕಂಡು ಬರುತ್ತಿದೆ. ನಗರಗಳಲ್ಲಿ ಅನುಮತಿ ಪಡೆಯದೇ ಎಲ್ಲೆಂದರಲ್ಲಿ ಗೂಡಂಗಡಿಗಳು ತಲೆ ಎತ್ತುತ್ತಿವೆ. ಆರೋಗ್ಯ ನಿರೀಕ್ಷಕರು ಇಂತಹ ಅಂಗಡಿಗಳಿಗೆ ಭೇಟಿ ನೀಡಿ, ಶುಚಿತ್ವ ಪರಿಶೀಲಿಸಿ, ದಂಡ ವಿಧಿಸಿದ್ದೀರಾ? ಎಂದು ಪ್ರಶ್ನಿಸಿದ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಅನುಮತಿ ಇರದಿದ್ದರೂ ಜಿಲ್ಲಾಸ್ಪತ್ರೆಯ ಎದುರಿನ ಗೂಡಂಗಡಿಗಳಲ್ಲಿ ತಿಂಡಿ ತಿನಿಸುಗಳನ್ನು ಮಾರಾಟ ಮಾಡುತ್ತಿದ್ದಾರೆ. ತರಕಾರಿ, ಪ್ರಾವಿಜನ್ ಸ್ಟೋರ್‌ಗಳಲ್ಲಿ ನಿಷೇಧಿತ ಪ್ಲಾಸ್ಟಿಕ್ ಬಳಸುತ್ತಿದ್ದಾರೆ. ಇವುಗಳನ್ನು ತಡೆಗಟ್ಟಬೇಕಾದ ಆರೋಗ್ಯ ನಿರೀಕ್ಷಕರು ಕಣ್ಮುಚ್ಚಿ ಕುಳಿತಿದ್ದೀರಿ ಎಂದು ಬೇಸರ ವ್ಯಕ್ತಪಡಿಸಿದರು.

# ಮಾನವ ಕಳ್ಳಸಾಗಣೆ ತಡೆಗೆ ಪ್ರಾಮಾಣಿಕ ಪ್ರಯತ್ನ ಅಗತ್ಯ: ವಿ.ಹನುಮಂತಪ್ಪ

**ಚಿಕ್ಕಮಗಳೂರು, ಜು.30:** ಮಾನವ ಕಳ್ಳಸಾಗಣೆಯಂತಹ ಹೀನಕೃತ್ಯದ ಅಪರಾಧ ಕೃತ್ಯದಿಂದ ಈ ಜಿಲ್ಲೆಯನ್ನು ಮುಕ್ತಗೊಳಿಸಲು ಪ್ರಾಮಾಣಿಕವಾದ ಪ್ರಯತ್ನದ ಅಗತ್ಯವಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಆದ ವಿ.ಹನುಮಂತಪ್ಪ ಹೇಳಿದರು.

ನಗರದ ತಾಲ್ಲೂಕು ಕಚೇರಿ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಮಕ್ಕಳ ರಕ್ಷಣಾ ಘಟಕ, ಪೊಲೀಸ್ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಆಶ್ರಯದಲ್ಲಿ ಇಂದು ಮಾನವ ಕಳ್ಳಸಾಗಣೆ ತಡೆ ದಿನಾಚರಣೆ ಪ್ರಯುಕ್ತ ಆಯೋಜಿಸಲಾಗಿದ್ದ ಜಾಥಾವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು, ಮಕ್ಕಳು ಅಬಲರಾಗಿದ್ದು, ಪ್ರತಿರೋಧವೊಡ್ಡಲು ಅಸಾಧ್ಯವಾಗಿರುವ ಪರಿಸ್ಥಿತಿಯಲ್ಲಿ ಆಮಿಷವೊಡ್ಡುವ ಮುಖಾಂತರ ಅವರನ್ನು ಕ–ರೆದೊಯ್ದು ಜೀತ ಪದ್ಧತಿ ಇಲ್ಲವೆ ಲೈಂಗಿಕ ಶೋಷಣೆಗೆ ಒಳಪಡಿಸುವ ಹೀನ ಕೃತ್ಯ ನಿರಂತರವಾಗಿ ನಡೆಯುತ್ತಿದೆ. ಮಕ್ಕಳನ್ನು ಸಹ ಕಳ್ಳಸಾಗಣೆ ಮಾಡಿ ಬಾಲಕಾರ್ಮಿಕ ಪದ್ಧತಿಗೆ ದೂಡುವಂತಹ ಪದ್ಧತಿ ನಡೆಯುತ್ತಿದೆ. ಇದರ ವಿರುದ್ಧ ವಿಶ್ವಾದ್ಯಂತ ಸಾಕಷ್ಟು ಹೋರಾಟಗಳು ನಡೆಯುತ್ತಿವೆ. ಜನರಲ್ಲಿ ಈ ಬಗ್ಗೆ ಅರಿವು ಮೂಡಿಸುವುದು ಈ ಜಾಥಾದ ಪ್ರಮುಖ ಉದ್ದೇಶ ಎಂದರು.

ವಕೀಲರ ಸಂಘದ ಅಧ್ಯಕ್ಷ ಸುಜೇಂದ್ರ ಮಾನವ ಕಳ್ಳಸಾಗಣೆ ಹೆಚ್ಚುತ್ತಲೇ ಇದೆ. ಲೈಂಗಿಕ ದೌರ್ಜನ್ಯ ಎಸಗುವುದಕ್ಕಾಗಿ, ಅಂಗಾಂಗಗಳನ್ನು ಪಡೆಯುವುದಕ್ಕಾಗಿ ಹಾಗೂ ಗುಲಾಮಗಿರಿಗಾಗಿ ಮತ್ತು ಹತ್ತು ಹಲವು ಕಾರಣಗಳಿಗಾಗಿ ಮಹಿಳೆಯರು ಮತ್ತು ಮಕ್ಕಳ ಮೇಲೆ ದೌರ್ಜನ್ಯ ನಡೆಯುತ್ತಲೇ ಬಂದಿದೆ. ಜೊತೆಗೆ ಮಹಿಳೆಯರನ್ನು ಮತ್ತು ಮಕ್ಕಳನ್ನು ವಸ್ತುಗಳು ಅಥವಾ ಪ್ರಾಣಿಗಳ ರೀತಿಯಲ್ಲಿ ವಿದೇಶಗಳಿಗೆ ಮಾರಾಟ ಮಾಡುವ ದಂಧೆಯೂ ಅವರ ಶೋಷಣೆಗೆ ಕಾರಣವಾಗಿದೆ. ಈ ಪರಿಸ್ಥಿತಿ ಇರಬಾರದು. ಈ



ಹಿನ್ನೆಲೆಯಲ್ಲಿ ಜನಜಾಗೃತಿ ಮೂಡಿಸುವ ಸಲುವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಇದು ಒಂದು ದಿನಕ್ಕೆ ಸೀಮಿತವಾಗಬಾರದು. ಜನರು ನಿರಂತರವಾಗಿ ಜಾಗೃತರಾಗಿರಬೇಕು. ಹಾಗೆಯೇ ಈ ಶೋಷಣೆ ನಿಲ್ಲಬೇಕು. ಈ ನಿಟ್ಟಿನಲ್ಲಿ ಎಲ್ಲರ ಕಣ್ಣು ಮತ್ತು ಹೃದಯಗಳು ತೆರೆಯಲಿ ಎಂದು ಅವರು ಆಶಿಸಿದರು. ಸ್ವಾಗತಿಸಿದ ಶಿಶು ಅಭಿವೃದ್ಧಿ ಅಧಿಕಾರಿ ರಂಗನಾಥ್ ಮಾತನಾಡಿದರು. ಉಪವಿಭಾಗಾಧಿಕಾರಿಗಳಾದ ಸುಂದರೇಶ್, ಆರಕ್ಷಕ ಹೆಚ್ಚುವರಿ ಅಧೀಕ್ಷಕ ಸಿ.ಟಿ.ಜಯಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ್ ವೈ.ಆಲವತ್ತಿ, ಜಿಲ್ಲಾ ನಿರೂಪಣಾಧಿಕಾರಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಂತೋಷ್, ವಿವಿಧ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮದಲ್ಲಿದ್ದರು.

ಇದೇ ಸಂದರ್ಭದಲ್ಲಿ ಮಾನವ ಕಳ್ಳಸಾಗಾಣಿಕೆ ತಡೆ ದಿನಾಚರಣೆ ಅಂಗವಾಗಿ ಜನರಲ್ಲಿ ಅರಿವು ಮೂಡಿಸುವ ಸಲುವಾಗಿ ತಾಲ್ಲೂಕು ಕಚೇರಿಯಿಂದ ಆಜಾದ್ ಪಾರ್ಕ್ ವೃತ್ತದವರೆಗೆ ಜಾಥಾ ನಡೆಯಿತು.

## ಆರೋಗ್ಯಕರ ಸಮಾಜ ನಿರ್ಮಾತೃ ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನ

## ಆಗಸ್ಟ್ 1 ವ್ಯಸನ ಮುಕ್ತ ದಿನಾಚರಣೆ

ದುರ್ವ್ಯಸನಗಳು ಹಾಗೂ ದುಶ್ಚಟಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿ, ಮನ ಪರಿವರ್ತಿಸಿ, ಜನರಲ್ಲಿನ ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದವರು ಡಾ.ಮಹಾಂತ ಶಿವಯೋಗಿಗಳು.

ಬಾಗಲಕೋಟೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ 1930ರ ಆಗಸ್ಟ್ 1 ರಂದು ಜನಿಸಿದ ಡಾ.ಮಹಾಂತ ಶಿವಯೋಗಿಗಳು ತಮ್ಮ 10ನೇ ವಯಸ್ಸಿಗೆ ಸವದಿಯ ವಿರಕ್ತಮಠದ ಕಿರಿಯ ಸ್ವಾಮೀಜಿಗಳಾದರು. ಕಾಶಿಯಲ್ಲಿ ಸಂಸ್ಕೃತ, ಹಿಂದಿ, ಯೋಗ, ಶಾಸ್ತ್ರೀಯ ಸಂಗೀತದಲ್ಲಿ ವಿಶೇಷ ಪರಿಣತಿ ಸಾಧಿಸಿದರು. ಉತ್ತರ ಕರ್ನಾಟಕದಲ್ಲಿ ಭೀಕರ ಬರಗಾಲ ಬಂದ ಕಾರಣ ಕಾಶಿಯಿಂದ ಆಗಮಿಸಿ, ನೂರಾರು ಗ್ರಾಮಗಳಲ್ಲಿ ಗಂಜಿ ಕೇಂದ್ರ ಆರಂಭಿಸಿ ದಾಸೋಹ ಮಾಡಿದ್ದು ಮಾತ್ರವಲ್ಲದೇ ಗೋಶಾಲೆಗಳನ್ನು ಆರಂಭಿಸಿ ಮೇವು ಮತ್ತು ನೀರಿನ ವ್ಯವಸ್ಥೆ ಮಾಡಿದರು.

1970 ರಲ್ಲಿ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ 19ನೇ ಪೀಠಾಧಿಕಾರಿಯಾಗಿ ನಂತರ 2018 ರ ವರೆಗೆ ಅಖಂಡ 48 ವರ್ಷಗಳ ಕಾಲದವರೆಗಿನ ಅವರ ಸಾಧನೆ ಅಪಾರ. ನಿರಂತರ ಅನ್ನ ದಾಸೋಹ, ವಚನ ಮಾಂಗಲ್ಯ, ದೇವದಾಸಿ ವಿಮೋಚನಾ ಸಂಸ್ಥೆ, ದೇವದಾಸಿಯರ ಮಕ್ಕಳಿಗೆ ಟ್ರಸ್ಟ್ ಸ್ಥಾಪನೆ, ನಿರುದ್ಯೋಗಿಗಳಿಗೆ ಮತ್ತು ವಿಧವೆಯರಿಗೆ ಕಾಯಕ ಸಂಜೀವಿನಿ ಸಂಸ್ಥೆ ಸ್ಥಾಪನೆ, ನಿಸರ್ಗ ಚಿಕಿತ್ಸೆ–ಯೋಗ ಕೇಂದ್ರ ಸ್ಥಾಪನೆ, ಶಾಖಾ ಮಠಗಳಿಗೆ ಪ.ಜಾತಿ ಮತ್ತು ಪಂಗಡಗಳ ಯುವಕರಿಗೆ ಧರ್ಮ ಸಂಸ್ಕಾರ ನೀಡಿ ಪಟ್ಟಾಭಿಷೇಕ ಮಾಡಿದ್ದು, ಮಹಿಳಾ ಸಾಧಕಿಯರಿಗೆ ಜಂಗಮ ದೀಕ್ಷೆ ನೀಡಿ ಮಠಾಧಿಕಾರಿಯನ್ನಾಗಿ ಮಾಡಿದ್ದು, ಮಠದ ನೂರಾರು ಎಕರೆ ಭೂಮಿಯನ್ನು ಆಯಾ ಗ್ರಾಮಗಳ ರೈತರಿಗೆ ಕೃಷಿ ಮಾಡಿ ಬದುಕಲು ನೀಡಿದ್ದು ಮುಂತಾದ ಹಲವು ಸಮಾಜಮುಖಿ ಕಾರ್ಯಗಳನ್ನು ಮಾಡಿದರು.

# ಭೂ ಮಾಫಿಯಾ, ರೌಡಿಗಳಿಗೆ ಫಂಡಿಂಗ್, ಸಮಗ್ರ ತನಿಖೆಗೆ ಟಾಸ್ಕ್‌ಪೋರ್ಸ್ ಸಮಿತಿ ರಚಿಸಲು ಒತ್ತಾಯ

**ಶಿವಮೊಗ್ಗ:** ನಗರದಲ್ಲಿ ಲ್ಯಾಂಡ್ ಲಿಟಿಗೇಶನ್ (ಭೂ ಮಾಫಿಯಾ) ನಾಗರೀಕ ಆತಂಕವನ್ನು ಹುಟ್ಟು ಹಾಕುತ್ತಿದೆ, ದುರ್ಬಲ ವರ್ಗದವರ ಸ್ವಾಧೀನಾನುಭವದ ಸ್ವತ್ತುಗಳು ಹಾಗೂ ಶಿವಮೊಗ್ಗ ಮಹಾನಗರ ಪಾಲಿಕೆಯ ಸ್ವತ್ತುಗಳು, ತಾಲ್ಲೂಕಿನ ಮೀಸಲು ಭೂಮಿಗಳಾದ ದನಕ್ಕೆ ಮುಪತ್ತು, ಗ್ರಾಮ ಠಾಣಾ, ಕೆರೆ ಜಾಗಗಳು, ಸ್ಮಶಾನಗಳು, ವಾರಸುದಾರರಿಲ್ಲದ ವ್ಯತ್ಯಾಸದ ವಿಸ್ತೀರ್ಣದ ಭೂಮಿ, ಸರಕಾರಿ ಪಡೆ ಭೂಪ್ರದೇಶಗಳು ಇದೀಗ ಅನಾಹುತಕಾರಿ ಜಾಲಗಳ ಭೂ ಕಬಳಿಕೆಗೆ ಒಳಗಾಗುತ್ತಿರುವುದು ಹಾಡು ಹಗಲೇ ದರೋಡೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣವು ಶಿವಮೊಗ್ಗ ಜಿಲ್ಲಾಧಿಕಾರಿಗಳಾದ ಗುರುದತ್ ಹೆಗಡೆ ಅವರ ಗಮನಕ್ಕೆ ತರಬಯಸುತ್ತದೆ.

ಟಾಸ್ಕ್ ಪೋರ್ಸ್ ಸಮಿತಿ ರಚಿಸಲು ಒತ್ತಾಯ

ಶಿವಮೊಗ್ಗದಲ್ಲಿ ಬೇಲಿಯೇ ಎದ್ದು ಹೊಲ ಮೇಯ್ದಂತೆ ನಗರ ಹಾಗೂ ತಾಲ್ಲೂಕಿನ ನಾಡ ಕಛೇರಿ, ತಾಲ್ಲೂಕು ಕಛೇರಿಯ ಅಧಿಕಾರಿಗಳು, ಸರ್ವೆ ಇಲಾಖೆಯ ಇಲಾಖಾಧಿಕಾರಿಗಳಲ್ಲಿ ಒಂದಷ್ಟು ಜವಾಬ್ದಾರಿಯುತ ಕೆಲವು ರಾಜಸ್ವ ನಿರೀಕ್ಷಕರು, ಗ್ರಾಮ ಲೆಕ್ಕಿಗ ಅಧಿಕಾರಿಗಳೇ ಶಾಮೀಲು ಆಗಿರುವುದರಿಂದಲೇ ಇಂತಹದೊಂದು ಬಹುದೊಡ್ಡ ಭೂಕಬಳಿಕೆ ಆಗುತ್ತಿದೆ, ಎಲ್ಲಿ ನೋಡಿದರು ಬೇಲಿ ಸುತ್ತಿ, ಇದು ತಮ್ಮ ಆಸ್ತಿ ಎಂದು ನೇರವಾಗಿಯೇ ನಾಮಫಲಕಗಳನ್ನು ಹಾಕಿಕೊಂಡಿರುವುದು ಅಚ್ಚರಿಯಾಗಿದೆ, ಇದರಿಂದ ಶಿವಮೊಗ್ಗ ತಾಲ್ಲೂಕು ಕೆರೆಗಳ ವಿಸ್ತೀರ್ಣ ಕಡಿತವಾಗಿದೆ, ಹಲವೆಡೆ ಕೆ–ರೆಕಟ್ಟೆ, ಗೋಮಾಳ, ಜಮೀನು ಕರಾಬು, ಸರಕಾರಿ ಪಡೆ ಜಮೀನುಗಳೇ ಮಂಗಮಾಯವಾಗಿ ಲೇ–ಔಟ್‌ಗಳಾಗಿ ಪರಿವರ್ತಿತಗೊಂಡಿದೆ, ಇದಕ್ಕೆ ನೀಡಲಾಗಿರುವ ಪಥ ಬದಲಾವಣೆ, ನಕ್ಷೆ ತಿದ್ದುಪಡಿ, ನಕಾಶೆ ತೋರಿಸಿದ ಹಾದಿ ತಿರುಚುವಿಕೆಗಳಿಂದ ಪಕ್ಕಾಪೋಡಿಗಳು ರಾತ್ರೋರಾತ್ರಿ ಸಿದ್ದಗೊಂಡು ಇದೇ ರೆಕಾರ್ಡ್‌ಗಳನ್ನು ಘನ ನ್ಯಾಯಾಲಯಕ್ಕೂ ಸಲ್ಲಿಸಿರುವ ಪ್ರಕರಣಗಳಲ್ಲಿ ಸತ್ಯಾಸತ್ಯತೆ ಪರೀಶೀಲಿಸಬಹುದಾಗಿದೆ,ಎಲ್ಲೆಲ್ಲಿ ಈ ಪ್ರಕರಣಗಳು : ಇಂತಹ ಪ್ರಕರಣಗಳು ನಗರದ ಆಲ್ಕೊಳ ಗ್ರಾಮ, ಇಂದಿನ ನಗರ ವ್ಯಾಪ್ತಿ, ಗಾಡಿಕೊಪ್ಪ, ಮಲ್ಲಿಗೇನಹಳ್ಳಿ, ಕೋಟೆಗಂಗೂರು, ಗೆಜ್ಜೆನಹಳ್ಳಿ, ನವುಲೆ, ರಾಗಿಗುಡ್ಡ, ಅಬ್ಬಲಗೆರೆ, ತೇವರ ಹಾಗೂ ಗೋಂದಿ ಚಟ್ನಳ್ಳಿ, ಹಸೂಡಿ, ಬೊಮ್ಮನಕಟ್ಟೆ, ಅನುಪಿನಕಟ್ಟೆ, ರಾಮೀನಕೊಪ್ಪ, ಹಾಯ್‌ಹೊಳೆ, ಸೋಗಾನೆ, ಕೊರ್ಲಹಳ್ಳಿ, ಅಗಸವಳ್ಳಿ ಇನ್ನೂ ಮುಂತಾದೆಡೆ ಇಂತಹದೊಂದು ಪ್ರಕರಣಗಳು ಹೆಚ್ಚುತ್ತಿದೆ, ಇದಕ್ಕೆ ಸವಳಂಗ ರಸ್ತೆಯ ಅಬ್ಬಲಗೆರೆ ಗ್ರಾಮ ಪಂಚಾಯಿತಿಯ ದೇವರ ಗುಡಿ ಹೊಡೆದು ಹಾಕಿ ಜಮೀನು, ಕೆರೆ ಜಾಗವನ್ನು ಹದ್ದುಬಸ್ತು ಮಾಡಿಕೊಳ್ಳಲು ಮುಂದಾದವರ ವಿರುದ್ಧ ಸಾರ್ವಜನಿಕರೇ ರಸ್ತೆತಡೆ ನಡೆಸಿದ ಪ್ರಕರಣ ಹಾಗೂ ಮೂಲ ನಕ್ಷೆಯ ಆಧಾರಿತವಲ್ಲದ ಸರ್ವೆ ಅಧಿಕಾರಿಗಳು ತಮ್ಮ ಅಧಿಕಾರ ದುರುಪಯೋಗದಡಿ ಸ್ವಯಂ ಸಿದ್ದಪಡಿಸಿ ಸರಕಾರಿ ದಾಖಲೆಯನ್ನಾಗಿಸಿದ ನಕ್ಷೆಯನ್ನು ನ್ಯಾಯಾಲಯ ಹಾಗೂ ಸಕ್ಷಮ ಪ್ರಾಧಿಕಾರಗಳಿಗೆ ನೀಡಿ ವಂಚಿಸುತ್ತಿರುವುದು ಕಂಡುಬಂದಿದೆ.



ಇನ್ನೂ ಪಾಲಿಕೆ ವ್ಯಾಪ್ತಿಯ ಆಸ್ತಿಗಳ ಮೇಲೆ ಕಬ್ಜಾ ವಿನೋಬಾನಗರದ 2ನೇ ಮುಖ್ಯರಸ್ತೆಯ ಆಜು–ಬಾಜಿನಲ್ಲಿ ಒಟ್ಟು ಈಗಾಗಲೇ ಗೊತ್ತುಪಡಿಸಿದಂತೆ ಒಟ್ಟು ಹದಿನೆಂಟು ನಿವೇಶನಗಳನ್ನು ಮೂಲ ಪಾರ್ಟಿಯಿಂದ ಉಪನೊಂದಣಾಧಿಕಾರಿಗಳವರ ಕಛೇರಿನಲ್ಲಿ ನೊಂದಣಿ ಮಾಡಿಸಿಕೊಂಡಿದ್ದೇವೆ ಎನ್ನುವ ಭೂಮಾಫಿಯಾದ ಮಂದಿಗಳಿಗೆ ಯಾರು ಮೂಲ ವಾರಸುದಾರರು ಎನ್ನುವುದು ಇಂದಿಗೂ ಸ್ಪಷ್ಟಪಡಿಸುವ ದಾಖಲೆಗಳು ಇಂತಿವರ ಬಳಿ ಇಲ್ಲವಾಗಿದೆ, ಜಿಪಿಎ (ಜನರಲ್ ಪೋರಾಪಟ್ ಅಥಾರಿಟಿ) ಎನ್ನುವ ದಾಖಲೆಗಳ ಮೂಲಕ ನೊಂದಣಿ ಮಾಡಿಸಿದ್ದೇವೆ ಎಂದು ಪಾಲಿಕೆಯಲ್ಲಿ ಇ–ಸ್ವತ್ತು ಮಾಡಿಸಿಕೊಳ್ಳಲಾಗಿದೆ, ಅಲ್ಲದೆ ಇದೇ ದಾಖಲೆಗಳನ್ವಯ ಎಲ್‌ಐಸಿ ಹಾಗೂ ಕೆನರಾ ಬ್ಯಾಂಕುಗಳಲ್ಲಿ ಕೋಟ್ಯಾಂತರ ರೂಪಾಯಿ ಸಾಲಮೇಳ ಮಾಡಿಕೊಳ್ಳಲಾಗಿದೆ, ಈ ಸಂಗತಿ ವಿನೋಬಾನಗರ ಪೊಲೀಸ್ ಠಾಣೆಯವರಿಗೆ ಗೊತ್ತಿದ್ದರೂ ಸಹ ಯಾವುದೇ ಕ್ರಮ ಜರುಗಿಸದೆ ಇರುವುದು ತಮ್ಮ ಗಮನಕ್ಕೆ ತರಿಸುತ್ತೇವೆ, ಮಾನ್ಯ ಉಚ್ಚ ನ್ಯಾಯಾಲಯ ಹಾಗೂ ಸುಪ್ರೀಂಕೋರ್ಟಿನ ನಿರ್ದೇಶನದಂತೆ ಜಿಪಿಎ ಆಧಾರದ ಮೇಲೆ ಈ ಸದರಿ ಪತ್ರದಲ್ಲಿ ನಮೂದಿಸಲಾಗಿದೆ ಎನ್ನುವ ಕಾರಣಕ್ಕೆ ಜಿಪಿಎ ಹೋಲ್ಡರ್ ವ್ಯಕ್ತಿ ಎಂದಿಗೂ ಇನ್ನೋರ್ವರಿಗೆ ಮಾರಾಟ (ಪರಭಾರೆ) ಮಾಡುವ ಹಕ್ಕು ಹೊಂದಲು ಸಾಧ್ಯವಿಲ್ಲ, ಒಂದು ವೇಳೆ ಮಾರಾಟ ಮಾಡಲು ಮುಂದಾಗಿ ನೊಂದಾಯಿಸಿದ್ದರೆ ಅಂತಹ ಪತ್ರಗಳು ಸಿಂಧುತ್ವ ಕಳೆದುಕೊಳ್ಳುತ್ತದೆ, ಹಾಗೂ ನೊಂದಾಯಿಸಿದಉಪನೊಂದಣಾಧಿಕಾರಿಗಳನ್ನು ಅಮಾನತ್ತುಪಡಿಸಿ ಸುಳ್ಳು ದಾಖಲೆ ಸೃಷ್ಟಿಸಿದ ಆಧಾರದ ಆಸಾಮಿಗಳ ಮೇಲೆ ಸ್ಥಳೀಯ ಪೊಲೀಸರು ಕ್ರಿಮಿನಲ್ ಮೊಕದ್ದಮೆ ದಾಖಲಿಸಿಕೊಂಡು ತನಿಖೆ ಮಾಡಬಹುದಾಗಿದೆ ಎಂದಿದ್ದರು. ಯಾತಕ್ಕಾಗಿ ಇಂದಿಗೂ ಈ ಪೋರ್ಜರಿಸ್ಟ್‌ಗಳ ಮೇಲೆ ಕ್ರಮ ತೆಗೆದುಕೊಳ್ಳಲು ಸಾಧ್ಯವಾಗುತ್ತಿಲ್ಲ, ಇಂತಹ ಅಸಲಿ ಕಾರಣಕ್ಕಾಗಿ ತಾಲ್ಲೂಕು ಕಛೇರಿ, ಸರ್ವೆ ಇಲಾಖೆ, ಉಪನೊಂದಾವಣಾಧಿಕಾರಿಗಳ ಕಛೇರಿ, ಶಿವಮೊಗ್ಗ ಮಹಾನಗರ ಪಾಲಿಕೆ ಕೆಲ ಅಧಿಕಾರಿಗಳು ಶಾಮೀಲು ಆಗಿರುವುದರಿಂದ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣವು ಜಿಲ್ಲಾಧಿಕಾರಿಗಳಿಗೆ ಸಮಗ್ರ ತನಿಖೆಗೆ ಟಾಸ್ಕ್‌ಫೋರ್ಸ್ ಸಮಿತಿ ರಚಿಸಲು ಒತ್ತಾಯಿಸುತ್ತದೆ,

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**